ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು - ೧೪೯

**ಪಟ್ಟಿ - ೧೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

ಮುಂದುವರೆದ ಉಪವೇಶನ

**ಸೋಮವಾರ, ದಿನಾಂಕ : ೨೩ನೇ ಮಾರ್ಚ್, ೨೦೧೫**

## ಸಮೂಹ - I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

F-1B

## ಅಲೆಮಾರಿ/ಅರ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯ ಸ್ಥಾಪನೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೨೮ (೧೩೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ೨೦೧೫-೨೦೧೬ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಚಿತ್ರದುರ್ಗ ಜಿಲ್ಲೆಯ ಯಾವ ಯಾವ ಭಾಗದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ ;

(ಇ) ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸದೇ ಇದ್ದಲ್ಲಿ, ವಿದ್ಯಾಸಿರಿ ಯೋಜನೆಯಡಿ ಈಗ ನೀಡುತ್ತಿರುವ ರೂ. ೧,೫೦೦/-ಕ್ಕೆ ಬದಲಾಗಿ ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಪಡಿತರ ಚೀಟಿ ವಿತರಣೆ ಪ್ರಕ್ರಿಯೆಯನ್ನು ಗ್ರಾಮ ಪಂಚಾಯತಿಗಳಿಗೆ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೨೯ (೨೧೬೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಹಿಂದೆ ಭರವಸೆ ನೀಡಿದಂತೆ ಹೊಸ ಪಡಿತರ ಚೀಟಿ ಮತ್ತು ಎ.ಪಿ.ಎಲ್ ರಿಂದ ಬಿ.ಪಿ.ಎಲ್‌ಗೆ ಬದಲಾವಣೆಗಾಗಿ ಅರ್ಜಿ ಸಲ್ಲಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆಯೇ ;

(ಆ) ಹೌದಾದಲ್ಲಿ, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಇಲ್ಲವಾದಲ್ಲಿ, ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲು ಸರ್ಕಾರಕ್ಕಿರುವ ತೊಡಕೇನು ; ಮತ್ತು ಯಾವಾಗ ಪ್ರಾರಂಭಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಈ) ಪಡಿತರ ಚೀಟಿಯ ಅರ್ಜಿಸಲ್ಲಿಕೆ, ಪರಿಶೀಲನೆ ಮತ್ತು ಪಡಿತರ ಚೀಟಿ ವಿತರಣೆಯ ಸಂಪೂರ್ಣ ಜವಾಬ್ದಾರಿಯನ್ನು ಗ್ರಾಮ ಪಂಚಾಯಿತಿಗೆ ವಹಿಸಲು ಸರ್ಕಾರಕ್ಕಿರುವ ತೊಂದರೆ ಏನು ; ಈ ಬಗ್ಗೆ ಸರ್ಕಾರ ಯಾವ ತೀರ್ಮಾನ ಕೈಗೊಳ್ಳಲಿದೆ ?

## ಸರ್ಕಾರಿ ಬಸ್ಸುಗಳ ಸೌಲಭ್ಯವನ್ನು ಖಾಸಗೀ ಬಸ್‌ಗಳಲ್ಲಿ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೩೦ (೧೪೦೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಬಸ್ಸುಗಳಲ್ಲಿರುವ ಸೇವೆಯಂತೆ ರಾಜ್ಯಾದ್ಯಾಂತ ಇರುವ ಖಾಸಗಿ ಬಸ್ಸುಗಳಲ್ಲಿ ಅಂಗವಿಕಲರಿಗೆ ಮತ್ತು ವೃದ್ಧರಿಗೆ ರಿಯಾಯಿತಿ ದರದಲ್ಲಿ ಪ್ರಯಾಣಕ್ಕೆ ಅವಕಾಶ ಮಾಡದಿರಲು ಕಾರಣವೇನು ;

(ಆ) ಸರ್ಕಾರಿ ಬಸ್ಸುಗಳಲ್ಲಿ ಕೊಡುವ ರಿಯಾಯತಿಗಳನ್ನು ಖಾಸಗಿ ಬಸ್ಸುಗಳಲ್ಲಿ ಕೊಡದಿದ್ದಲ್ಲಿ ಸರ್ಕಾರ ಸುಮ್ಮನಿರುವುದು ಖಾಸಗಿ ಲಾಭಿಗೆ ಮಣಿದಂತಾಗಿರುವುದಿಲ್ಲವೇ ;

(ಇ) ಸರ್ಕಾರಿ ಬಸ್ಸುಗಳಲ್ಲಿರುವ ಮೇಲಿನ ರಿಯಾಯಿತಿಗಳನ್ನು ಖಾಸಗಿ ಬಸ್ಸುಗಳಲ್ಲಿ ನೀಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸೌಲಭ್ಯಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೩೧ (೧೩೯೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಲ್ಯಾಣ ಕಾರ್ಯಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ದೇಶ ಮತ್ತು ವಿದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಯಾವ ಯಾವ ಸೌಲಭ್ಯ ನೀಡಲಾಗುತ್ತಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಉನ್ನತ ವ್ಯಾಸಂಗ ಮತ್ತು ವಿದೇಶದಲ್ಲಿ ವ್ಯಾಸಂಗಕ್ಕಾಗಿ ಎಷ್ಟು ವಿದ್ಯಾರ್ಥಿಗಳಿಗೆ ಇಲಾಖೆಯಿಂದ ಯಾವ ಯಾವ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಐ.ಎ.ಎಸ್. ಕೆ.ಎ.ಎಸ್. ಮತ್ತು ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ಇಲಾಖೆಯಿಂದ ಯಾವ ರೀತಿಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ; ಸೌಲಭ್ಯ ಪಡೆಯುವ

ಅಭ್ಯರ್ಥಿಗಳಿಗೆ ಅರ್ಹತೆ ಮತ್ತು ಮಾನದಂಡಗಳೇನು ? (ಸಂಪೂರ್ಣ ವಿವರ ನೀಡುವುದು)

## ಮಾಹಿತಿ ಮತ್ತು ತಂತ್ರಜ್ಞಾನವನ್ನು ಗ್ರಾಮೀಣ ಪ್ರದೇಶಗಳಿಗೆ ವಿಸ್ತರಣೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೨ (೧೩೯೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನಗಳು ಕೇವಲ ನಗರಕ್ಕೆ ಕೇಂದ್ರೀಕೃತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಗ್ರಾಮೀಣ ಪ್ರದೇಶದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಬೆಳವಣಿಗೆಗೆ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ. ನೌಕರರ ವಿವರ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೩೩ (೧೪೪೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಒಟ್ಟು ಅಧಿಕಾರಿಗಳ ಮತ್ತು ನೌಕರರ ಸಂಖ್ಯೆ ಎಷ್ಟು ; ಇವರಲ್ಲಿ ಪರಿಶಿಷ್ಟ ಜಾತಿ

ಮತ್ತು ಪರಿಶಿಷ್ಟ ಪಂಗಡದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಇದುವರೆಗೆ ಈ ನಿಗಮದಲ್ಲಿ ವಜಾ ಮಾಡಲಾದ ನೌಕರರ ಸಂಖ್ಯೆ ಎಷ್ಟು ; (ದರ್ಜೆವಾರು) ಅಮಾನತ್ತುಗೊಂಡವರ ಸಂಖ್ಯೆ ಎಷ್ಟು ; ವಜಾ ಮಾಡಲಾಗಿದ್ದ ನೌಕರರನ್ನು ನ್ಯಾಯಾಲಯದ ಆದೇಶದ ಮೇರೆಗೆ, ಮರುನೇಮಕ ಮಾಡಿಕೊಂಡವರ ಸಂಖ್ಯೆ ಎಷ್ಟು ; ಇವರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರ ಸಂಖ್ಯೆ ಎಷ್ಟು ;

(ಇ) ಸರ್ಕಾರದ ಆದೇಶದಂತೆ ಇಲಾಖೆಯ ಸಿ ಮತ್ತು ಆರ್ ನಿಯಮಕ್ಕೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ರೋಸ್ಟರ್ ಪದ್ಧತಿಯಂತೆ ಮೀಸಲಾತಿ ನಿಯಮವನ್ನು ಅಳವಡಿಸಲಾಗಿದೆಯೇ ; ಅದರಂತೆ ಮೀಸಲಾತಿ ನಿಯಮವನ್ನು ಕಟ್ಟುನಿಟ್ಟಾಗಿ ಜಾರಿಮಾಡಲಾಗುತ್ತಿದೆಯೇ ?

## ವೈದ್ಯಕೀಯ ಇಲಾಖೆಯಲ್ಲಿ ಅಧಿಕಾರಿ/ನೌಕರರ ಬ್ಯಾಕ್ ಲಾಗ್ ಮೀಸಲಾತಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೩೪ (೧೪೩೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವೈದ್ಯಕೀಯ ಇಲಾಖೆಯಲ್ಲಿ ಕೆಲಸ ಮಾಡುತ್ತಿರುವ ಅಧಿಕಾರಿಗಳ ಮತ್ತು ನೌಕರರ ಸಂಖ್ಯೆ ಎಷ್ಟು (ದರ್ಜೆವಾರು ವಿವರ ನೀಡುವುದು)

(ಆ) ಈ ಒಟ್ಟು ನೌಕರರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಸಂಖ್ಯೆ ಎಷ್ಟು ; (ದರ್ಜೆವಾರು ವಿವರ ನೀಡುವುದು) ಮೇಲ್ಕಂಡ ಎಲ್ಲಾ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವರ್ಗಗಳಿಗೆ ಅನ್ವಯಿಸುವ ಮೀಸಲಾತಿ ಆಜ್ಞೆಗಳನ್ನು ಪಾಲಿಸಲಾಗಿದೆಯೇ ;

(ಇ) ಯಾವ ಯಾವ ಹುದ್ದೆಗಳಲ್ಲಿ ಹಿಂದಿನಿಂದ ಈ ವರ್ಗಗಳಿಗೆ ತುಂಬದೇ ಬಾಕಿ ಇರುವ (ಬ್ಯಾಕ್ ಲಾಗ್) ಹಿಂಬಾಕಿ ಹುದ್ದೆಗಳ ಸಂಖ್ಯೆ ಎಷ್ಟು ; ಈ ಹಿಂಬಾಕಿ ಹುದ್ದೆಗಳನ್ನು ತುಂಬಲು ಕೈಗೊಳ್ಳುವ ಕ್ರಮಗಳೇನು ;

(ಈ) ಸರ್ಕಾರಿ ಆಜ್ಞೆ ಇದ್ದರೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಹಿಂಬಾಕಿ ಹುದ್ದೆಗಳನ್ನು ತುಂಬದೇ ಇರಲು ಕಾರಣವೇನು ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಎಸ್.ಸಿ.ಪಿ.–ಟಿ.ಎಸ್.ಪಿಯಲ್ಲಿ ಮೀಸಲಿಟ್ಟ ಹಣ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೩೫ (೧೪೪೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನ ಒಟ್ಟು ಯೋಜನಾ ಅಂದಾಜು ಮೊತ್ತ ಎಷ್ಟು ; ಈ ಮೊತ್ತದಲ್ಲಿ ಎಸ್.ಸಿ.ಪಿ.–ಟಿ.ಎಸ್.ಪಿ.ಅಡಿಯಲ್ಲಿ ಪರಿಶಿಷ್ಟ

ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗಗಳಿಗೆ ಮೀಸಲಿಟ್ಟ ಹಣ ಎಷ್ಟು ; ಎಸ್.ಸಿ.ಪಿ–ಟಿ.ಎಸ್.ಪಿ. ಅಡಿಯಲ್ಲಿ ಮೀಸಲಿಡಲಾದ ಹಣದಲ್ಲಿ ಕೇಂದ್ರ ಯೋಜನಾ ಆಯೋಗದ ನಿರ್ದೇಶನದಂತೆ ಶೇ ೨೨.೭೫% ರಷ್ಟು ಹಣವನ್ನು ಮೀಸಲಿಡಲಾಗಿದೆಯೇ ;

(ಆ) ಈ ಸಾಲಿನಲ್ಲಿ ಮೀಸಲಿಟ್ಟ ಶೇ.ವಾರು ಹಣವೆಷ್ಟು ; ಎಸ್.ಸಿ.ಪಿ.–ಟಿ.ಎಸ್.ಪಿಗೆ ಪ್ರತ್ಯೇಕವಾಗಿ ಮೀಸಲಿಟ್ಟ ಈ ಮೊತ್ತದಲ್ಲಿ ೨೦೧೪–೧೫ನೇ ಸಾಲಿನಲ್ಲಿ ಎಸ್.ಸಿ.ಪಿ.–ಟಿ.ಎಸ್.ಪಿ. ಅಡಿಯಲ್ಲಿ ಇದುವರೆಗೂ ಖರ್ಚಾಗಿರುವ ಹಣ ಎಷ್ಟು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೩೬ (೧೪೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಒಟ್ಟು ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಆಸ್ಪತ್ರೆಗಳಿಗೆ ನೀರು ಶುದ್ಧೀಕರಣಗೊಳಿಸುವ ಯಂತ್ರಗಳನ್ನು ಅಳವಡಿಸಲಾಗಿದೆಯೇ ; (ಮಿನರಲ್ ವಾಟರ್) ಯಾವ ಯಾವ ಆಸ್ಪತ್ರೆಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಿಲ್ಲ ; ಅಳವಡಿಸದೇ ಇರಲು ಕಾರಣವೇನು ?

# ಆಯುಷ್ ಇಲಾಖೆಯಡಿಯಲ್ಲಿ ಬರುವ ಯುನಾನಿ ಮಹಾವಿದ್ಯಾಲಯದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೩೭ (೨೨೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ ಇಲಾಖೆಯಡಿಯಲ್ಲಿ ಬರುವ ಸರ್ಕಾರಿ ಯುನಾನಿ ವೈದ್ಯ ಮಹಾವಿದ್ಯಾಲಯದಲ್ಲಿ ೨೦೧೩-೧೪ನೇ ಸಾಲಿನ ಪ್ರವೇಶದ ಪ್ರಕ್ರಿಯೆಯಲ್ಲಿ CET ಆಯ್ಕೆ ನಿಯಮಗಳನ್ನು ಮೀರಿ ಕೆಲವು ವಿದ್ಯಾರ್ಥಿಗಳಿಗೆ ಪ್ರವೇಶ ನೀಡುರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಯ್ಕೆ ಸಮಿತಿಯಿಂದ ಆಯ್ಕೆಯಾಗಿರದ, ಹೊರರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕುರಿತು ಆಯುಷ್ ಇಲಾಖೆಯ ನಿರ್ದೇಶಕರಿಂದ ವರದಿ ಬಂದಿದೆಯೇ ; ಬಂದಿದ್ದಲ್ಲಿ, ವರದಿಯ ಸಾರಾಂಶವೇನು ; ಸದರಿ ನಿರ್ದೇಶಕರು ವರದಿ ನೀಡಿದ್ದು ಯಾವಾಗ ;

(ಈ) ಕಾನೂನು ಬಾಹಿರವಾದ ಸದರಿ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗಿಯಾದವರ ವಿರುದ್ಧ ಹಾಗೂ ನಿರ್ದೇಶಕರ ವರದಿಯಾನುಸಾರ ಕ್ರಮ ಕೈಗೊಳ್ಳಲಾಗಿದೆಯೇ ; ಕ್ರಮ ಕೈಗೊಂಡಿಲ್ಲವಾದಲ್ಲಿ ಕಾರಣವೇನು ; ಕ್ರಮ ಕೈಗೊಳ್ಳಲು ಬೇಕಾಗುವ ಕಾಲಮಿತಿಯೇನು ?

## ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಮೂಲ ಸೌಕರ್ಯದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೩೮ (೨೧೬೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಒಳ ರೋಗಿಗಳು ಮತ್ತು ಹೊರ ರೋಗಿಗಳ ವಾರ್ಡ್‌ಗಳಲ್ಲಿ ಮೂಲಭೂತ ಸೌಕರ್ಯವಿಲ್ಲದೆ ಪರವಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು ;

(ಆ) ಆಸ್ಪತ್ರೆಯ ಆವರಣದಲ್ಲಿರುವ ವಾಹನ ನಿಲುಗಡೆ ಜಾಗದಲ್ಲಿ ರೋಗಿಗಳಲ್ಲದ ಹಾಗೂ ರೋಗಿಗೆ ಸಂಬಂಧಿವಿಲ್ಲದ, ಖಾಸಗಿ ಕಛೇರಿಗಳಲ್ಲಿ ಕೆಲಸ ಮಾಡುವ ಖಾಸಗಿ ವ್ಯಕ್ತಿಗಳು ವಾಹನಗಳನ್ನು ಪಾರ್ಕಿಂಗ್ ಮಾಡುವುದರಿಂದ ರೋಗಿಗಳ ವಿಚಾರಣೆಗೆ ಬರುವವರ ವಾಹನಗಳನ್ನು ಪಾರ್ಕಿಂಗ್ ಮಾಡಲು ಸ್ಥಳಾವಕಾಶದ ಕೊರತೆಯಾಗುತ್ತಿದೆ, ಇದರ ಬಗ್ಗೆ ಸರ್ಕಾರದ ಉತ್ತರವೇನು ;

(ಇ) ತುರ್ತಾಗಿ ರೋಗಿಗಳನ್ನು ಆಸ್ಪತ್ರೆಗೆ ದಾಖಲಿಸಲು ತುರ್ತಾಗಿ ಬರುವ ಆಂಬುಲೆನ್ಸ್ ವಾಹನಗಳ ಪ್ರವೇಶಕ್ಕೆ ಆಸ್ಪತ್ರೆಯ ಗೇಟ್ ಮುಂಭಾಗದಲ್ಲಿಯೇ ತೀರಾ ತಡವಾಗುತ್ತಿದ್ದು, ಇದನ್ನು ನಿವಾರಿಸಲು ಕೈಗೊಂಡ ಕ್ರಮವೇನು ?

## ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮೂಲಕ ಶಾಲಾ-ಕಾಲೇಜು ಶಿಕ್ಷಕರಿಗೆ ತರಬೇತಿ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೭೯ (೨೨೧೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯಾದ್ಯಂತ ನೀಡಿರುವ ಬಿ.ಪಿ.ಎಲ್. ಕಾರ್ಡ್‌ಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಬಿ.ಪಿ.ಎಲ್. ಫಲಾನುಭವಿಗಳಿಗೆ ನೀಡಿರುವ ಕಾರ್ಡ್‌ಗಳಲ್ಲಿ ಎಷ್ಟು ಅನರ್ಹ ಎಂದು ಗುರುತಿಸಿ ರದ್ದುಪಡಿಸಲಾಗಿದೆ ; ಪ್ರಸ್ತುತ ಬಿ.ಪಿ.ಎಲ್. ಕಾರ್ಡ್‌ದಾರರುರಿಗೆ ನೀಡುತ್ತಿರುವ ಪಡಿತರ ಸೌಲಭ್ಯಗಳ ವಿವರಗಳೇನು ;

(ಇ) ಪ್ರಸ್ತುತ ಸರ್ಕಾರದವರು ಬಿ.ಪಿ.ಎಲ್. ಕಾರ್ಡ್ ನೀಡಿಕೆ ಸಂಬಂಧ ಅನುಸರಿಸುತ್ತಿರುವ ನೀತಿ ನಿಯಮಗಳೇನು ?

## ಯುನಾನಿ ವೈದ್ಯ ಪದವಿ (BUMS) ಶಿಕ್ಷಣದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೮೦ (೨೨೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯುನಾನಿ ವೈದ್ಯ ಪದವಿ (BUMS) ಶಿಕ್ಷಣವು ಒಟ್ಟು ಎಷ್ಟು ವರ್ಷಗಳ ಕೋರ್ಸ್ ಆಗಿರುತ್ತದೆ ;

(ಆ) ಆಯುಷ್ ಇಲಾಖೆಯಡಿಯಲ್ಲಿ ಬರುವ ಸರ್ಕಾರಿ ಯುನಾನಿ ವೈದ್ಯ ಮಹಾವಿದ್ಯಾಲಯದಲ್ಲಿ ೨೦೧೧ ರಿಂದ ಇಲ್ಲಿಯವರೆಗೆ ೪ ೧/೨ ವರ್ಷದ ಯುನಾನಿ ಪದವಿ ಶಿಕ್ಷಣವನ್ನು ಕೆಲವು ವಿದ್ಯಾರ್ಥಿಗಳಿಗೆ ಕೇವಲ ೩ ರಿಂದ ೪ ವರ್ಷಗಳೊಳಗೆ ಪದವಿ ಕೋರ್ಸ್ ಪೂರ್ಣಗೊಂಡಿದೆಯೆಂದು ವೈದ್ಯ ಶಿಕ್ಷಣದ ಸರ್ಟಿಫಿಕೇಟ್ ನೀಡಿ ಕಲಿಕೆಯ ಅವಧಿಗೆ ಮುನ್ನವೇ ಅವರನ್ನು ವೈದ್ಯರನ್ನಾಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕುರಿತು ಇಲಾಖಾ ಮಟ್ಟದಲ್ಲಿ ತನಿಖೆಯಾಗಿರುವುದು ನಿಜವೇ ; ತನಿಖೆಯಲ್ಲಿ ಕಂಡು ಬಂದಿರುವ ಪ್ರಮುಖ ಅಂಶಗಳು ಯಾವುವು ; ತಪ್ಪಿತಸ್ಥರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ; ಕ್ರಮ ಕೈಗೊಳ್ಳದಿದ್ದಲ್ಲಿ ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಹಣ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೪೧ (೨೧೧೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಇಲಾಖೆಗಳು ಯಾವುವು ;

(ಆ) ೨೦೧೪-೧೫ರಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು ;

(ಇ) ೨೦೧೩-೧೪ರಲ್ಲಿ ಬಿಡುಗಡೆಯಾದ ಹಣದಲ್ಲಿ ಇಲಾಖಾವಾರು ಮಾಡಿದ ಕ್ರಿಯಾ ಯೋಜನೆಯಲ್ಲಿ ಎಷ್ಟು ಕ್ರಿಯಾ ಯೋಜನೆಗಳು ಅನುಷ್ಠಾನಕ್ಕೆ ಬಂದಿವೆ ;

(ಈ) ೨೦೧೪-೧೫ರಲ್ಲಿ ಬಿಡುಗಡೆ ಮಾಡಿದ ಹಣದಲ್ಲಿ ಇಲಾಖಾವಾರು ಮಾಡಿರುವ ಕ್ರಿಯಾ ಯೋಜನೆಗಳು ಯಾವುವು ; ಅನುಷ್ಠಾನಗೊಂಡಿರುವ ಯೋಜನೆಗಳು ಯಾವುವು ?

## ಅರಸೀಕೆರೆ ಬಸ್ ನಿಲ್ದಾಣದ ಕಾಮಗಾರಿ

**ಶ್ರೀ ಪಟೇಲ್ ಶಿವರಾಂ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೪೨ (೨೧೦೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಸೀಕೆರೆ ಬಸ್ ತಂಗುದಾಣ ನವೀಕರಣದ ಅಂದಾಜು ಮೊತ್ತವೆಷ್ಟು ; ಈ ಕಾಮಗಾರಿಯನ್ನು ಪ್ರಾರಂಭಿಸಿ, ಎಷ್ಟು ದಿನಗಳಾದವು ;

(ಆ) ಕಾಮಗಾರಿಗಳನ್ನು ನಿಗಧಿತ ಸಮಯದಲ್ಲಿ ಮತ್ತು ಅಚ್ಚುಕಟ್ಟಾಗಿ ನಿರ್ವಹಿಸದೇ ದುರ್ವಾಸನೆಯು ಪರಿಸರ ಮಾಲಿನ್ಯದಿಂದ ಪ್ರಯಾಣಿಕರಿಗೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾಮಗಾರಿ ಮುಗಿಯುವವರೆಗೆ ಪ್ರಯಾಣಿಕರಿಗೆ ಶೌಚಾಲಯ, ಕುಡಿಯುವ ನೀರು, ಸ್ವಚ್ಛತೆ ಕಾಪಾಡಲು ಕೈಗೊಳ್ಳುವ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿನ ಡಯಾಲಿಸಿಸ್ ಸೌಲಭ್ಯ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೪೩ (೨೧೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯವು ಲಭ್ಯವಿರುತ್ತದೆ ಮತ್ತು ಡಯಾಲಿಸಿಸ್‌ಗೆ ವಿಧಿಸುತ್ತಿರುವ ದರವೆಷ್ಟು ;

(ಆ) ರಾಜ್ಯ ಇತರೆ ಖಾಸಗಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್‌ಗೆ ವಿಧಿಸುತ್ತಿರುವ ದರವೆಷ್ಟು ; (ಪ್ರತಿ ಆಸ್ಪತ್ರೆವಾರು ವಿವರ ನೀಡುವುದು)

(ಇ) ಬಡ ಹಾಗೂ ಮಧ್ಯಮ ವರ್ಗದ ರೋಗಿಗಳಿಗಾಗಿ ಕಡಿಮೆ ದರದಲ್ಲಿ ಡಯಾಲಿಸಿಸ್ ಸೌಲಭ್ಯವು ದೊರಕುವಂತಾಗಲು ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುಲು ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು ?

## ಹೊಸದಾಗಿ ಖರೀದಿಸಿದ ಬಸ್ಸುಗಳ ವಿವರ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೪೪ (೨೧೦೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಎಂ.ಟಿ.ಸಿ.ಗೆ ಕಳೆದ ಒಂದೂವರೆ ವರ್ಷಗಳಿಂದ ಹೊಸದಾಗಿ ಖರೀದಿಸಿದ ಬಸ್ಸುಗಳ ಸಂಖ್ಯೆ ಎಷ್ಟು ; ಇವುಗಳ ಬೆಲೆ ಎಷ್ಟು ; ಯಾವ ಮಾದರಿಯ ಬಸ್ಸುಗಳನ್ನು ಖರೀದಿಸಲಾಗಿದೆ ; ಇದಕ್ಕಾಗಿ

ಸಾಲಯೋಜನೆ ಮಾಡಲಾಗಿದೆಯೇ ಮಾಡಿದ್ದಲ್ಲಿ, ಎಲ್ಲಿಂದ ಸಾಲ ಪಡೆಯಲಾಗಿದೆ ;

(ಆ) ಎಷ್ಟು ವರ್ಷಗಳಿಂದ ವೋಲ್ವೋ ಎ.ಸಿ. ಸೇರಿ ಹಲವು ಅತ್ಯಾಧ್ಯುನಿಕ ಐಷಾರಾಮಿ ಬಸ್ಸುಗಳಿಂದ ಬಿ.ಎಂ.ಟಿ.ಸಿ.ಗೆ ಲಾಭಕ್ಕಿಂತ ನಷ್ಟವೇ ಜಾಸ್ತಿ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆ ;

(ಇ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು, ಯಾವ ಬಸ್‌ಗಳ ಖರೀದಿ ನಂತರ ಸಂಚಾರಕ್ಕೆ ಪ್ರಯಾಣಿಕರಿಲ್ಲದೇ ಎಷ್ಟು ಕೋಟಿ ಮೊತ್ತದ ನಷ್ಟ ಉಂಟಾಗಿದೆ ; (ವಿವರ ತಿಳಿಸುವುದು)

(ಈ) ನಷ್ಟಕ್ಕೆ ಕಾರಣಗಳನ್ನು ಸಂಸ್ಥೆ ಪರಾಮರ್ಶಿಸಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳನ್ನು ನೀಡುವುದು ಸಿಬ್ಬಂದಿಗಳ ವೇತನ ಹೆಚ್ಚಳದಿಂದ ನಷ್ಟ ಆಗಿದೆ ಎಂಬ ಅಧಿಕಾರಿಗಳ ನೆಪದ ಬಗ್ಗೆ ಸರ್ಕಾರದ ನಿಲುವೇನು ;

(ಉ) ಸದರಿ ಬಸ್ಸುಗಳನ್ನು ಲಾಭಕ್ಕೆ ತರುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕಾರ್ಯ ಯೋಜನೆಗಳೇನು ? (ವಿವರ ತಿಳಿಸುವುದು)

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಊಟ ಮತ್ತು ವಸತಿ ಸೌಲಭ್ಯಗಳು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೪೫ (೨೧೦೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಊಟ ಮತ್ತು ವಸತಿಗಾಗಿ ಸರ್ಕಾರವು ಒದಗಿಸುತ್ತಿರುವ ಸೌಲಭ್ಯಗಳೇನು ;

(ಆ) ಸದರಿ ವಿದ್ಯಾರ್ಥಿಗಳಿಗೆ ಸಹಾಯಧನ ನೀಡಲಾಗುತ್ತಿದೆಯೇ ;

(ಇ) ಹಾಗಿದ್ದಲ್ಲಿ, ಯೋಜನೆಯ ಷರತ್ತು ಮತ್ತು ಪೂರ್ಣ ವಿವರಗಳನ್ನು ನೀಡುವುದು ?

## "ಸೈಕಲ್ ದಿನ" ಆಚರಣೆ ಬಗ್ಗೆ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೪೬ (೨೧೫೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು, ಮೈಸೂರು, ಹುಬ್ಬಳ್ಳಿ–ಧಾರವಾಡ ಮುಂತಾದ ನಗರಗಳಲ್ಲಿ ವಾಹನ ದಟ್ಟಣೆಯಿಂದಾಗಿ ವಾಯುಮಾಲಿನ್ಯ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವಾಯುಮಾಲಿನ್ಯ ನಿಯಂತ್ರಿಸಲು "ಸೈಕಲ್ ದಿನ" ಆಚರಿಸಲು ಪ್ರೋತ್ಸಾಹಿಸಲಾಗುವುದೆ ;

(ಇ) ಸರ್ಕಾರಿ ನೌಕರರು–ಅಧಿಕಾರಿಗಳಿಗೆ "ಸೈಕಲ್ ದಿನ" ಆಚರಿಸಲು ಸೂಚಿಸಲಾಗುವುದೆ ;

(ಈ) ದಿನನಿತ್ಯ ಸೈಕಲ್ ಬಳಕೆ ಹೆಚ್ಚಿಸಲು 'ಡಿ' ದರ್ಜೆ ನೌಕರರಿಗೆ ಉಚಿತವಾಗಿ ಸೈಕಲ್‌ಗಳನ್ನು ನೀಡಲಾಗುವುದೇ ?

## ಸಮಾಜ ಕಲ್ಯಾಣ ಅಧೀನದಲ್ಲಿರುವಂತಹ ನಿಗಮಗಳಾವುವು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿರತಾದವರು) :-**

೧೮೪೭ (೨೧೧೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಅಭಿವೃದ್ಧಿ ನಿಗಮಗಳಾವುವು ; (ಮಾಹಿತಿ ನೀಡುವುದು)

(ಆ) ನಿಗಮವನ್ನು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿಯಲ್ಲಿ ಫಲಾನುಭವಿಗಳ ಆಂಯ್ಕೆ ಪಟ್ಟಿಂಯುನ್ನು ಸರ್ಕಾರದ ಆದೇಶದ ಸಂಖ್ಯೆ : "ಸ.ಕಾ.ಇ. ೨೨೧, ಬಿಸಿಎ ೨೦೦೮, ದಿನಾಂಕ : ೨-೧-೨೦೦೯"ರಲ್ಲಿ ಆಯ್ಕೆ ವಿಧಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯ ಮೂಲಕ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದೆ ;

(ಇ) ಈ ಆಯ್ಕೆ ಸಮಿತಿಗೆ ಈ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಾಸಿಸುವ ವಿಧಾನ ಪರಿಷತ್ ಸದಸ್ಯರು ಇದ್ದಲ್ಲಿ ಇವರು ಸದಸ್ಯರಾಗಿರುತ್ತಾರೆಯೇ ;

(ಈ) ಕಳೆದ ಎರಡು ವರ್ಷಗಳಿಂದ ಯಾವ ಯಾವ ಆಯ್ಕೆ ಸಮಿತಿಯ ಸಭೆಗೆ ವಿಧಾನ ಪರಿಷತ್ತಿನ ಸದಸ್ಯರನ್ನು ಕರೆದಿರುವುದಿಲ್ಲ ; (ವಿವರ ನೀಡುವುದು)

(ಉ) ವಿಧಾನ ಪರಿಷತ್ತಿನ ಸದಸ್ಯರನ್ನು ಕಡೆಗಣಿಸಿ ಆಯ್ಕೆ ಪಟ್ಟಿ ಮಾಡಿದ್ದು, ಮಾನ್ಯ ಸದಸ್ಯರ ಹಕ್ಕುಚ್ಯುತಿ ಆಗುವುದಿಲ್ಲವೇ ;

F-2 B/B

(ಊ) ಹಾಗಿದ್ದರೆ, ತಪ್ಪಿತಸ್ಥ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ; (ಸಂಪೂರ್ಣ ಮಾಹಿತಿ ಒದಗಿಸುವುದು ಹಾಗೂ ಕಳೆದ ಎರಡು ವರ್ಷಗಳಿಂದ ಈ ನಿಗಮಗಳ ಅಡಿಯಲ್ಲಿ ಕೈಗೆತ್ತಿಕೊಂಡ ಒಟ್ಟು ಯೋಜನೆಗಳ ವಿವರ (ವಿವಿಧ ಲೆಕ್ಕಶೀರ್ಷಿಕೆ ಅಡಿಯಲ್ಲಿ) ಬಂದ ಹಣವೆಷ್ಟು ಹಾಗೆ ಖರ್ಚಾದ ಹಣದ ವಿವರ ಒದಗಿಸುವುದು)

## ಹಾವು ಕಡಿತಕ್ಕೆ ಚಿಕಿತ್ಸೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿರತಾದವರು) :-**

೧೮೪೮ (೨೧೧೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಾವು ಕಚ್ಚಿ ಸತ್ತವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಸ್ಪಷ್ಟ ಮಾಹಿತಿ ನೀಡುವುದು)

(ಆ) ಹಾವು ಕಚ್ಚಿದ ಸಂದರ್ಭಗಳಲ್ಲಿ ಚಿಕಿತ್ಸೆಗಾಗಿ ಹೆಚ್ಚಿನ ಆಸ್ಪತ್ರೆಗಳಲ್ಲಿ "ಆ್ಯಂಟಿ ಸ್ನೇಕ್ ವ್ಯಾಕ್ಸಿನ್" ಔಷಧಿಯು ಲಭ್ಯವಿಲ್ಲದಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಇ) ಬಂದಿದ್ದಲ್ಲಿ, ಹೆಚ್ಚು ಔಷಧಿಗಳನ್ನು ಖರೀದಿ ಮಾಡಿ ದಾಸ್ತಾನು ಇಡಲು ಮುಂಜಾಗ್ರತವಾಗಿ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಈ) ಇಂತಹ ಪರಿಸ್ಥಿತಿಯನ್ನು ಹತೋಟಿಗೆ ತರಲು ಸರ್ಕಾರ ಕೂಡಲೇ ಯಾವ ಯೋಜನೆಗಳನ್ನು ರೂಪಿಸಲಾಗುವುದು ? (ವಿವರವಾದ ಮಾಹಿತಿ ಒದಗಿಸುವುದು)

## ಜಿಲ್ಲೆಯ ಆಸ್ಪತ್ರೆಗಳಿಗೆ ಅನುದಾನ ಬಿಡುಗಡೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿರತಾದವರು) :–**

೧೮೪೯ (೨೧೧೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿನ ಎಲ್ಲಾ ಮತಕ್ಷೇತ್ರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕಾಮಗಾರಿಗಳು ಮತ್ತು ಇತರ ಪೀಠೋಪಕರಣಗಳು ಹಾಗೂ ಚಿಕಿತ್ಸೆಗೆ ಅವಶ್ಯಕ ವಸ್ತುಗಳಿಗೆ ಔಷಧಿಗಳಿಗೆ ಇಲಾಖೆಯಿಂದ ಮಂಜೂರಾದ ಅನುದಾನ ಎಷ್ಟು ; (ಸಂಪೂರ್ಣ ತಾಲ್ಲೂಕುವಾರು, ಆಸ್ಪತ್ರೆವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯ ಪ್ರತಿಯೊಂದು ಸರ್ಕಾರಿ ಆಸ್ಪತ್ರೆಗೆ ಬಿಡುಗಡೆಯಾದ ಅನುದಾನದಲ್ಲಿ ಖರ್ಚು ಮಾಡಲಾದ ಹಣವೆಷ್ಟು ;

(ಇ) ಮಂಜೂರಾಗಿರುವ ಅನುದಾನ ಎಷ್ಟು ; ಇತರೆ ಮೂಲಗಳಿಂದ ಬಂದಿರುವ ಹಣ ಎಷ್ಟು ಮತ್ತು ಯಾವ ವಸ್ತುಗಳನ್ನು ಖರೀದಿಸಲಾಗಿದೆ ; ಅವುಗಳಿಗೆ ಖರ್ಚಾಗಿರುವ ಹಣವೆಷ್ಟು ? (ವರ್ಷವಾರು ಮಾಹಿತಿ ನೀಡುವುದು)

# ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿರತಾದವರು) :-**

೧೮೫೦ (೨೧೧೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಿಂದ ಇಲ್ಲಿಯವರೆಗೂ ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಕಾರ್ಯವು ಪೂರ್ಣಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಫಲಾನುಭವಿಗಳ ಆಯ್ಕೆ ಸಮಿತಿಯ ಸದಸ್ಯರುಗಳ ವಿವರ ಹಾಗೂ ಸಭೆಯ ದಿನಾಂಕದ ವಿವರಗಳನ್ನು ನೀಡುವುದು ;

(ಇ) ಆಯ್ಕೆಯಾದ ಎಲ್ಲಾ ಫಲಾನುಭವಿಗಳಿಗೂ ಕೊಳವೆ ಬಾವಿಗಳನ್ನು ಕೊರೆಸಲಾಗಿದೆಯೇ ; (ಆಯ್ಕೆ ಪಟ್ಟಿ ಫಲಾನುಭವಿಗಳ ಪಟ್ಟಿ ನೀಡುವುದು)

(ಈ) ಹಾಗಿಲ್ಲದಿದ್ದಲ್ಲಿ, ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಯದೇ ಇರಲು ಕಾರಣಗಳೇನು ;

(ಉ) ೨೦೧೩-೧೪ನೇ ಸಾಲಿನಿಂದ ಇಲ್ಲಿಯವರೆಗೂ ಬೋರ್‌ವೆಲ್‌ಗಳನ್ನು ಕೊರೆಯಲು ಯಾವ ಯಾವ ಏಜೆನ್ಸಿಗಳನ್ನು ನೇಮಕ ಮಾಡಿಕೊಳ್ಳಲಾಗಿತ್ತು ? (ಏಜೆನ್ಸಿಯವರಿಗೆ ಪಾವತಿಸಲಾದ ಮೊತ್ತ ಹಾಗೂ ಏಜೆನ್ಸಿಗಳವಾರು, ವರ್ಷವಾರು ವಿವರಗಳನ್ನು ನೀಡುವುದು)

## ನ್ಯಾಯಬೆಲೆ ಅಂಗಡಿಗಳ ಮುಂದೆ ಬಿ.ಪಿ.ಎಲ್. ಕಾರ್ಡ್‌ದಾರರ ಹೆಸರು ಪ್ರದರ್ಶಿಸುವ ಬಗ್ಗೆ

**ಶ್ರೀ ಗೋ. ಮಧುಸೂದನ (ಪದವೀಧರರ ಕ್ಷೇತ್ರ) :-**

೧೮೫೧ (೨೧೨೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನ್ಯಾಯಬೆಲೆ ಅಂಗಡಿಗಳನ್ನು ಬಿ.ಪಿ.ಎಲ್. ಕಾರ್ಡ್ ಹೊಂದಿರುವವರ ಹೆಸರು ಹಾಗೂ ವಿವರಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸಲು ಸರ್ಕಾರ ಆದೇಶಿಸಿದೆಯೇ ; (ಆದೇಶದ ಪ್ರತಿ ನೀಡುವುದು)

(ಆ) ಈ ರೀತಿಯಾಗಿ ವಿವರಗಳನ್ನು ಪ್ರದರ್ಶಿಸದ ನ್ಯಾಯಬೆಲೆ ಅಂಗಡಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ; ಈವರೆವಿಗೂ ಎಷ್ಟು ನ್ಯಾಯಬೆಲೆ ಅಂಗಡಿಗಳ ಮೇಲೆ ಕ್ರಮವಹಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ನಿಯಮ ಬಾಹಿರವಾಗಿ ವಿದ್ಯಾರ್ಥಿಗಳ ಪ್ರವೇಶ

**ಶ್ರೀ ಗೋ. ಮಧುಸೂದನ (ಪದವೀಧರರ ಕ್ಷೇತ್ರ) :-**

೧೮೫೨ (೨೧೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ ಇಲಾಖೆಯಡಿಯಲ್ಲಿ ಬರುವ ಸರ್ಕಾರಿ ಯುನಾನಿ ವೈದ್ಯ ಮಹಾ ವಿದ್ಯಾಲಯದಲ್ಲಿ ೨೦೧೩-೧೪ನೇ ಸಾಲಿನ

ಪ್ರವೇಶದ ಪ್ರಕ್ರಿಯೆಯಲ್ಲಿ ಸಿ.ಇ.ಟಿ. ಆಯ್ಕೆ ನಿಯಮಗಳನ್ನು ಮೀರಿ ಕೆಲವು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಯ್ಕೆ ಸಮಿತಿಯಿಂದ ಆಯ್ಕೆಯಾಗಿರದ, ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕುರಿತು ಆಯುಷ್ ಇಲಾಖೆಯ ನಿರ್ದೇಶಕರಿಂದ ವರದಿ ಬಂದಿದೆಯೇ ; ಬಂದಿದ್ದಲ್ಲಿ, ವರದಿಯ ಸಾರಾಂಶವೇನು ; ಸದರಿ ನಿರ್ದೇಶಕರು ವರದಿ ನೀಡಿದ್ದು ಯಾವಾಗ ;

(ಈ) ಕಾನೂನು ಬಾಹಿರವಾದ ಸದರಿ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗಿಯಾದವರ ವಿರುದ್ಧ ಹಾಗೂ ನಿರ್ದೇಶಕರ ವರದಿಯನುಸಾರ ಕ್ರಮ ಕೈಗೊಳ್ಳಲಾಗಿದೆಯೇ ; ಕ್ರಮ ಕೈಗೊಂಡಿಲ್ಲವಾದಲ್ಲಿ ಕಾರಣವೇನು ; ಕ್ರಮ ಕೈಗೊಳ್ಳಲು ಬೇಕಾಗುವ ಕಾಲಮಿತಿಯೇನು ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೮೫೩ (೨೧೨೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷಗಳಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಕಾಮಗಾರಿಗೆ ಸಂಬಂಧಿಸಿದಂತೆ

ಎಷ್ಟು ಉಪಯೋಗ ಪ್ರಮಾಣ ಪತ್ರ (Utilisation Certificate) ಪಡೆಯಲಾಗಿದೆ ; (ಪ್ರತಿಯೊಬ್ಬ ಶಾಸಕವಾರು ಐದು ವರ್ಷಗಳ ವಿವರ ನೀಡುವುದು)

(ಆ) ಪೂರ್ಣ ಪ್ರಮಾಣದಲ್ಲಿ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಕಾಮಗಾರಿಗಳು ಉಪಯೋಗವಾಗದೇ ಇರಲು ಯಾವ ಪ್ರಮುಖ ಕಾರಣಗಳನ್ನು ಗುರುತಿಸಲಾಗಿದೆ ; (ರಾಜ್ಯಾದ್ಯಂತ ರಸ್ತೆ, ಚರಂಡಿ, ಹೂಳೆತ್ತುವುದು ಮತ್ತು ಸಮುದಾಯ ಭವನ ಈ ನಾಲ್ಕು ಕಾಮಗಾರಿಗಳಿಗೆ ಕಳೆದ ಐದು ವರ್ಷಗಳಲ್ಲಿ ವೆಚ್ಚವಾಗಿರುವ ಪ್ರತಿಯೊಬ್ಬ ಶಾಸಕರ ವರ್ಷವಾರು ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಈ ಯೋಜನೆಯಲ್ಲಿ ಕಾಮಗಾರಿ ಪೂರ್ಣಗೊಂಡು, ಸಾರ್ವಜನಿಕರ ಉಪಯೋಗದಲ್ಲಿರುವ ಸಮುದಾಯ ಭವನಗಳ ವಿವರ ನೀಡುವುದು ? (ಸಮುದಾಯ ಭವನವಾರು ಹಾಗೂ ಇದಕ್ಕೆ ಬಿಡುಗಡೆಗೊಂಡ ಶಾಸಕರ ಹೆಸರು ಮತ್ತು ಮೊತ್ತದ ವಿವರ ನೀಡುವುದು)

**ಸರ್ಕಾರಿ ಶಾಲೆಗಳ ಶೈಕ್ಷಣಿಕ ಪ್ರವಾಸಕ್ಕೆ ರಿಯಾಯ್ತಿ ದರದಲ್ಲಿ ಬಸ್**

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೮೫೪ (೨೧೧೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಶಾಲೆಗಳಿಂದ ಕೈಗೊಳ್ಳಲಾಗುವ ಶೈಕ್ಷಣಿಕ ಪ್ರವಾಸಗಳಿಗೆ ನೀಡುವ ರಾಜ್ಯ ಸಾರಿಗೆ ಬಸ್‌ಗಳನ್ನು ರಿಯಾಯ್ತಿ ದರದಲ್ಲಿ ನೀಡಲಾಗುತ್ತಿದೆಯೇ; ಇದ್ದಲ್ಲಿ ಆದೇಶದ ಪ್ರತಿ ಒದಗಿಸುವುದು;

(ಆ) ಸರ್ಕಾರಿ ಬಸ್ ದರಕ್ಕಿಂತ ಖಾಸಗಿ ಬಸ್‌ಗಳಲ್ಲೇ ಶೈಕ್ಷಣಿಕ ಪ್ರವಾಸ ದರ ಕಡಿಮೆಯಿದ್ದು, ಸರ್ಕಾರಿ ಶಾಲಾ ಪ್ರವಾಸಗಳು ಸಾರಿಗೆ ಇಲಾಖೆಯ ಬಸ್‌ಗಳಲ್ಲೇ ಕೈಗೊಳ್ಳಬೇಕಾಗಿರುವುದರಿಂದ ಮಕ್ಕಳಿಗೆ ಆರ್ಥಿಕ ಹೊರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆದ್ದರಿಂದ ರಿಯಾಯ್ತಿ ದರದಲ್ಲಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

## ಸಮಾಜ ಕಲ್ಯಾಣ ಇಲಾಖೆಗೆ ಬಂದಿರುವ ಕೇಂದ್ರ ಸರ್ಕಾರದ ಅನುದಾನ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೮೫೫ (೨೧೧೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರದಿಂದ ಸಮಾಜ ಕಲ್ಯಾಣ ಇಲಾಖೆಗೆ ಕಳೆದ ಎರಡು ವರ್ಷಗಳಿಂದ ಬಂದಿರುವ ಅನುದಾನವೆಷ್ಟು; ಪೂರ್ಣ ವಿವರ ನೀಡುವುದು;

(ಆ) ಸಮಾಜ ಕಲ್ಯಾಣ ಇಲಾಖೆಗೆ ಬಂದಿರುವ ಯಾವ ಯಾವ ಅನುದಾನಗಳನ್ನು ಉಪಯೋಗಿಸಿಕೊಳ್ಳದೇ ಹಿಂದಿರುಗಿಸಲಾಗಿದೆ; (ವಿವರ ನೀಡುವುದು)

(ಇ) ಎಷ್ಟು ಅನುದಾನಕ್ಕೆ ಉಪಯೋಗ ಪ್ರಮಾಣ ಪತ್ರ (Utilisation Certificate) ನೀಡಬೇಕಾಗಿದೆ? (ಪೂರ್ಣ ವಿವರ ನೀಡುವುದು)

## ರಾಜ್ಯ ಸರ್ಕಾರಿ ಫಾರ್ಮಸಿಸ್ಟ್‌ಗಳ ಬೇಡಿಕೆಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :–**

೧೮೫೬ (೨೧೨೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರಾಜ್ಯ ಸರ್ಕಾರಿ ಫಾರ್ಮಸಿಸ್ಟ್‌ಗಳ ಸಂಖ್ಯೆ ಎಷ್ಟು;

(ಆ) ಕೇಂದ್ರ ಸರ್ಕಾರ ಸೇವಾ ನಿರತ ಫಾರ್ಮಸಿಸ್ಟ್‌ಗಳ ವೇತನ ಶ್ರೇಣಿಗೆ ಸರಿಸಮನಾದ ವೇತನ ನೀಡುವಂತೆ ಮನವಿಗಳು ಬಂದಿದೆಯೇ ;

(ಇ) ಹಿಂದಿನ ಮುಖ್ಯಮಂತ್ರಿಗಳು ಆದೇಶ ಮಾಡಿದ್ದರೂ ಜಾರಿಗೆ ತರದಿರಲು ಕಾರಣವೇನು ;

(ಈ) ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಫಾರ್ಮಸಿಸ್ಟ್‌ಗಳಿಗೆ ಕೂಡಲೇ ಸಮಾನತೆಯಿಂದ ಅನುಕೂಲ ಮಾಡಿಕೊಡಲಾಗುವುದೆ ?

## ವಿದ್ಯಾಸಿರಿ ಯೋಜನೆ ಎಲ್ಲಾ ಮಕ್ಕಳಿಗೂ ವಿಸ್ತರಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :–**

೧೮೫೭ (೨೧೨೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಮಕ್ಕಳಿಗಾಗಿ ವಿದ್ಯಾಸಿರಿ ಯೋಜನೆಯನ್ನು ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ಕಳೆದ ಸಾಲಿನಲ್ಲಿ ಬಂದಂತಹ ಅರ್ಜಿಗಳೆಷ್ಟು ; ನೀಡಿರುವ ಅನುದಾನವೆಷ್ಟು ; ಅನುದಾನವಿಲ್ಲದೆ ಉಳಿದಿರುವ ಅರ್ಜಿಗಳೆಷ್ಟು;

(ಇ) ಹಾಗಿದ್ದಲ್ಲಿ, ಬೇಡಿಕೆಗೆ ತಕ್ಕಂತೆ ಅರ್ಜಿ ಹಾಕಿರುವ ಎಲ್ಲಾ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಈ ಸಾಲಿನಲ್ಲಿ ಕೊಡಲಾಗುವುದೆ;

(ಈ) ಈ ವರ್ಷ ಬೇಡಿಕೆಗೆ ಅನುಗುಣವಾಗಿ ಅನುದಾನ ಮೀಸಲಿಡಲಾಗುವ್ವುದೆ ?

## ಕ್ರಮಬದ್ಧವಾಗಿ ಕಡತ ಸಲ್ಲಿಸದಿರುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೧೮೫೮ (೨೧೨೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನೇಕಾರರ ಮಕ್ಕಳ ಅನುಕೂಲಕ್ಕಾಗಿ ೨೦೧೨-೧೩ನೇ ಸಾಲಿನಲ್ಲಿ ಸಮುದಾಯ ಭವನ. ವಿದ್ಯಾರ್ಥಿ ನಿಲಯ ನಿರ್ಮಾಣ ಉದ್ದೇಶಕ್ಕಾಗಿ ಆದೇಶ ಸಂಖ್ಯೆ : ೧೫೫/ಬಿಎಂಎಸ್/೨೦೧೧ ದಿನಾಂಕ ೦೫-೦೯-೨೦೧೨ರ ಮೂಲಕ ಒಟ್ಟು ೪೦೩ ಕಾಮಗಾರಿಗಳ ಆದೇಶ ಮಾಡಲಾಗಿದೆಯೇ ;

(ಆ) ಸಣ್ಣಪುಟ್ಟ ವಿಳಾಸಗಳ ತಪ್ಪುಗಳು ಹಾಗೂ ಅಕ್ಷರ ವ್ಯತ್ಯಾಸ ಬಂದಂತಹ ಕಡತಗಳನ್ನು ತಾಲ್ಲೂಕಿನಿಂದ ಮಂತ್ರಿಗಳಿಗೆ ಕಳುಹಿಸಿ ತಿದ್ದುಪಡಿ ಮಾಡಲು ವರ್ಷಗಳೇ ಕಳೆಯುತ್ತಿರುವುದು ನಿಜವಲ್ಲವೆ;

(ಇ) ಹಾಗಿದ್ದಲ್ಲಿ, ಈ ತಿದ್ದುಪಡಿಯನ್ನು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಆದೇಶ ಮಾಡಿ ಸರಿಯಾದ ಕಡತ ಮಾಡಿ ಕಳಿಸಲು ಆದೇಶ ಮಾಡಲಾಗುವುದೆ ;

(ಈ) ನೂರಾರು ಬಾರಿ ಅಲೆದರೂ ಸರ್ಕಾರಿ ಸವಲತ್ತು ಪಡೆಯಲು ನಿರಾಶೆಯಾಗಿರುವ ಹಿಂದುಳಿದ ವರ್ಗದ ನೇಕಾರರಿಗೆ ಅನುಕೂಲ ಮಾಡಲಾಗುವುದೆ ?

## ಜಿಲ್ಲೆಯ ಸ್ಥಳೀಯರಿಗೆ ಕೆಲಸ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೧೮೫೫ (೨೧೪೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ರವರಿಗೆ ತುಮಕೂರು ಜಿಲ್ಲೆಯ ಯಾವ ಭಾಗದ ಸರ್ವೆ ನಂಬರಿನ ಜಾಗವನ್ನು ನೀಡಲು ಸರ್ಕಾರ ನಿರ್ಧರಿಸಿದೆ ;

(ಆ) ಒಡಂಬಡಿಕೆ ಮಾಡುವ ಜಾಗ ಸರ್ಕಾರದ್ದೆ ಅಥವಾ ರೈತರ ಜಮೀನುಗಳೇ ;

(ಇ) ಈ ಕಂಪನಿಗೆ ಎಷ್ಟು ಎಕರೆಗಳ ಜಮೀನನ್ನು ನೀಡಲು ಉದ್ದೇಶಿಸಿದೆ;

(ಈ) ಜಮೀನು ಮತ್ತು ನೀರು, ವಿದ್ಯುತ್ ಶಕ್ತಿ ನೀಡುತ್ತಿರುವ ಜಿಲ್ಲೆಗೆ ಅನುಕೂಲವಾಗಲು ಕಂಪನಿಯಲ್ಲಿ ತುಮಕೂರು ಜಿಲ್ಲೆ ಸ್ಥಳೀಯ ಕನ್ನಡಿಗರಿಗೆ ಕನಿಷ್ಠ ಮನೆಗೊಬ್ಬರಿಗೆ ಕೆಲಸ ಕೊಡಲು ಸರ್ಕಾರ ಮುಂದಾಗುವುದೆ ;

(ಉ) ಜಿಲ್ಲೆಯ ರೈತರ ಕುಟುಂಬಕ್ಕೆ ಅನುಕೂಲವಾಗುವಂತೆ ಸರ್ಕಾರ ಕೂಡಲೇ ಕ್ರಮ ಕೈಗೊಂಡು ಜಿಲ್ಲೆಯ ನಿರುದ್ಯೋಗಿ ವಿದ್ಯಾವಂತರಿಗೆ ಆಸರೆ ಆಗಲು ಕಾನೂನು ಮಾಡಲಾಗುವುದೆ ?

## ಸಮಾಜ ಕಲ್ಯಾಣ ಇಲಾಖೆಯ ಅಭಿವೃದ್ಧಿ ಕಾರ್ಯಕ್ರಮಗಳು

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೦ (೨೧೨೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಸವಾಜ ಕಲ್ಯಾಣ ಇಲಾಖೆಯು ಕಾರ್ಯಕ್ರಮಗಳು ಯಶಸ್ವಿಯಾಗಿ ಜಾರಿಯಾಗುತ್ತಿವೆಯೇ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಸವಾಜ ಕಲ್ಯಾಣ ಇಲಾಖೆಯು ಅಭಿವೃದ್ಧಿ ಕಾರ್ಯಕ್ರಮಗಳು ಯಾವುವು ; ಪ್ರಗತಿ ವಿವರ ನೀಡುವುದು?

## ಕೊಳವೆ ಬಾವಿಗಳ ಮಂಜೂರಾತಿ

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೧ (೨೧೨೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಜಿಲ್ಲಾ ವ್ಯಾಪ್ತಿಯು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ದಿ: ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಎಷ್ಟು ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿದೆ ; (ವಿಧಾನಸಭಾ ವ್ಯಾಪ್ತಿ ವಿವರ ನೀಡುವುದು)

(ಆ) ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ; ಎಷ್ಟು ಕೊಳವೆ ಬಾವಿಗಳು ಕೊರೆಯಲು ಬಾಕಿ ಉಳಿದಿವೆ ; ಬಾಕಿ ಉಳಿಯಲು ಕಾರಣವೇನು ; ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ ;

(ಇ) ಬಾಕಿ ಉಳಿದಿರುವ ಕೊಳವೆ ಬಾವಿಗಳನ್ನು ಯಾವ ಕಾಲಮಿತಿಯಲ್ಲಿ ಕೊರೆಯಲಾಗುವುದು ? (ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ/ಪಂಗಡದವರಿಗೆ ಉದ್ದಿಮೆ ಸ್ಥಾಪನೆ

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೨ (೨೧೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ/ಪಂಗಡದ ಜನರನ್ನು ಉತ್ತೇಜಿಸಲು ಉದ್ದಿಮೆಯನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಯವ ಕ್ರಮ ಕೈಗೊಂಡಿದೆ ;

(ಆ) ಈಗಾಗಲೇ ಕರ್ನಾಟಕ ಹಣಕಾಸು ನಿಗಮದಿಂದ ಪ್ರತಿಶತ ೪%ರ ಬಡ್ಡಿಂಯುನ್ನು ನಿಗದಿಪಡಿಸಿದಿದ್ದರೆ ಉಳಿದ ಹಣವನ್ನು ಇಲಾಖೆಯಿಂದ ಭರಿಸಲಾಗುತ್ತದೆಯೇ ;

(ಇ) ಹಾಗಿದ್ದಲ್ಲಿ, ಪ್ರತಿಶತ ೪%ರ ಬಡ್ಡಿಯನ್ನು ಪ್ರತಿಶತ ೨%ಕ್ಕೆ ಇಳಿಸಿ ಈ ಜನರಿಗೆ ಇನ್ನೂ ಹೆಚ್ಚಿನ ಅನುಕೂಲತೆಯನ್ನು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದರೆ ಎಂದಿನಿಂದ ಕ್ರಮ ಕೈಗೊಳ್ಳಲಾಗುವುದು ?

## ಬಸ್ ನಿಲ್ದಾಣಗಳಲ್ಲಿ ಮಾರಾಟ ಮಾಡುವ ಆಹಾರ ವಸ್ತುಗಳು

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೬೩ (೨೧೨೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಸ್ ನಿಲ್ದಾಣಗಳಲ್ಲಿ ಆಹಾರ ವಸ್ತುಗಳನ್ನು ನಿಗಧಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದೂರುದಾರರಿಗೆ ದೂರು ಸಲ್ಲಿಸುವ ವ್ಯವಸ್ಥೆ ಇದೆಯೇ ;

(ಇ) ಹಾಗಿದ್ದರೆ, ಈ ಸಂಬಂಧ ದಾಖಲಾಗಿರುವ ಪ್ರಕರಣಗಳೆಷ್ಟು ?

## ಹೆಚ್ ೧ ಎನ್ ೧ ಖಾಯಿಲೆ ತಡೆಗಟ್ಟುವ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೮೬೪ (೨೧೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೆಚ್ ೧ ಎನ್ ೧ ಖಾಯಿಲೆಗೆ ಎಷ್ಟು ಜನ ಬಲಿಯಾಗಿದ್ದಾರೆ; (ಜಿಲ್ಲಾವಾರು ಹೆಸರು ಸಮೇತ ವಿವರ ಒದಗಿಸುವುದು; ಇವರುಗಳಿಗೆ ಸರ್ಕಾರ ನೀಡಿರುವ ಪರಿಹಾರದ ವಿವರ ಒದಗಿಸಿ;)

(ಆ) ಈ ರೋಗ ತಡೆಗಟ್ಟಲು ಕೈಗೊಂಡ ಕ್ರಮಗಳೇನು; ಈ ರೋಗಿಗಳಿಗೆ ಸರ್ಕಾರಿ/ಅರೆ ಸರ್ಕಾರಿ/ಖಾಸಗಿ ಆಸ್ಪತ್ರೆಗಳಲ್ಲಿ ಈ ರೋಗದಿಂದ ಬಳಲುತ್ತಿರುವ ಎಲ್ಲಾ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲು ಸರ್ಕಾರ ಮುಂದಾಗುವುದೇ; ಈ ರೋಗಕ್ಕೆ ಬೇಕಾಗುವ ಔಷಧಿ ಸಾಕಷ್ಟು ದಾಸ್ತಾನು ಇದೆಯೇ ?

## ಎ.ಪಿ.ಎಲ್. ಕಾರ್ಡ್‌ದಾರರಿಗೆ ಅನ್ನ ಭಾಗ್ಯದ ಯೋಜನೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೮೬೫ (೨೧೬೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎ.ಪಿ.ಎಲ್ ಕಾರ್ಡ್ ಹೊಂದಿರುವವರ ಸಂಖ್ಯೆ ಎಷ್ಟು; (ಹಾವೇರಿ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕು ವಿವರ ಕೊಡುವುದು)

(ಆ) ಎ.ಪಿ.ಎಲ್. ಕಾರ್ಡ್ ಹೊಂದಿದವರಿಗೆ ಅನ್ನ ಭಾಗ್ಯದ ಯೋಜನೆಯನ್ನು ಕೊಡಲು ಸರ್ಕಾರ ನಿರ್ಧರಿಸಿದೆಯೇ;

(ಇ) ಹಾಗಿದ್ದಲ್ಲಿ, ಒಂದು ಕುಟುಂಬಕ್ಕೆ ಎಷ್ಟು ಕೆ.ಜಿ. ಅಕ್ಕಿ, ಜೋಳ, ರಾಗಿ ಕೊಡಲಾಗುವುದು;

(ಈ) ನೀಡಿದ್ದಲ್ಲಿ, ಇವರುಗಳಿಗೆ ಯಾವ ದರದಲ್ಲಿ ನೀಡಲಾಗುವುದು;

(ಉ) ಈ ಯೋಜನೆಯನ್ನು ಯಾವಾಗ ಜಾರಿಮಾಡಲಾಗುವುದು?

## ಅನ್ನಭಾಗ್ಯ ಯೋಜನೆಯಡಿ ಜೋಳ, ರಾಗಿ ವಿತರಣೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೮೬೬ (೨೧೬೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಲ್ಲಿ ಫಲಾನುಭವಿಗಳಿಗೆ ರಾಗಿ/ಬೆಳೆ ಹಾಗೂ ಜೋಳ ಕೊಡಲು ಸರ್ಕಾರ ಇದುವರೆಗೂ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೊಳಿಸಲಾಗಿದೆ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಎಷ್ಟು ಲಕ್ಷ ಜನರಿಗೆ ಕೊಡಲಾಗುತ್ತಿದ;

(ಈ) ಇನ್ನೂ ಎಷ್ಟು ಜನರಿಗೆ ಕೊಡಬೇಕಾಗಿರುತ್ತದೆ; ಯಾವಾಗ ಕೊಡಲಾಗುವುದು?

## ವೈದ್ಯಕೀಯ ಕಾಲೇಜು ಪ್ರಾರಂಭ ಕುರಿತು

**ಶ್ರೀ ನಾರಾಯಣ ಸಾ.ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೬೭ (೨೧೩೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರಾರಂಭ ಮಾಡಲಾಗುವುದು;

(ಇ) ವೈದ್ಯಕೀಯ ಕಾಲೇಜಿಗಾಗಿ ಸ್ಥಳವನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ಸ್ಥಳವನ್ನು ಗುರುತಿಸಲಾಗಿದೆ?

## ಗಂಗಾ ಕಲ್ಯಾಣ ಯೋಜನೆಗಳ ಫಲಾನುಭವಿಗಳು

**ಶ್ರೀ ನಾರಾಯಣ ಸಾ.ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೬೮ (೨೧೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಪ್ರಸ್ತುತ ಯೋಜನೆಯು ಯಾವ ಹಂತದಲ್ಲಿದೆ ;

(ಇ) ಈ ಯೋಜನೆಯು ಸ್ಥಗಿತಗೊಂಡಿದೆಯೇ ; ಸ್ಥಗಿತಗೊಂಡಿದ್ದರೆ ಯಾವಾಗ; ಮಾಹಿತಿ ನೀಡುವುದು ;

(ಈ) ಸ್ಥಗಿತವಾಗಿದ್ದರೆ, ಯಾವ ಕಾಲಾವಧಿಯೊಳಗೆ ಗಂಗಾ ಕಲ್ಯಾಣ ಯೋಜನೆಗೆ ಚಾಲನೆ ನೀಡಲಾಗುವುದು ?

F 3B/B

## ಗ್ರಾಹಕರ ವೇದಿಕೆಗೆ ಬಂದಿರುವ ದೂರುಗಳು

**ಶ್ರೀ ನಾರಾಯಣ ಸಾ.ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೬೯ (೨೧೩೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಿಂದ ಗ್ರಾಹಕರ ವೇದಿಕೆಗೆ ಬಂದಿರುವ ದೂರು ಅರ್ಜಿ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇತ್ಯರ್ಥವಾಗಿರುವ ದೂರುಗಳ ಸಂಖ್ಯೆ ಎಷ್ಟು ;

(ಇ) ದಂಡ ವಿಧಿಸಲಾದ ಪ್ರಕರಣಗಳಿಂದ ಸರ್ಕಾರಕ್ಕೆ ದಂಡ ರೂಪದಲ್ಲಿ ಬಂದ ಶುಲ್ಕ ಎಷ್ಟು ?

## ಎಂಟ್ರಿ ಪಾಯಿಂಟ್ ಸ್ಥಳಾಂತರ

**ಶ್ರೀ ನಾರಾಯಣ ಸಾ.ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೭೦ (೨೧೩೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನಿಂದ ನೆಲಮಂಗಲದ ಎನ್.ಹೆಚ್. ೪ರ ರಾಷ್ಟ್ರೀಯ ಹೆದ್ದಾರಿ ಮಾರ್ಗದಲ್ಲಿ ಇರುವ ಎಂಟ್ರಿ ಪಾಯಿಂಟ್‌ನಿಂದ

ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೆಲಮಂಗಲದ ಎನ್.ಹೆಚ್. ೪ರ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಎಂಟ್ರಿ ಪಾಯಿಂಟ್‌ನ್ನು ಪಾರ್ಲೆ ಬಿಸ್ಕೆಟ್ ಕಂಪನಿಯ ಹತ್ತಿರ ಇರುವ ಟೋಲ್ ನ ಹತ್ತಿರಕ್ಕೆ ಸ್ಥಳಾಂತರ ಮಾಡಿದರೆ ಉತ್ತಮವಾಗುವುದೆಂಬ ಸಾರ್ವಜನಿಕರ ಅಭಿಪ್ರಾಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಗ್ರಾಹಕ ನ್ಯಾಯಾಲಯದಲ್ಲಿರುವ ದೂರುಗಳು

**ಶ್ರೀ ನಾರಾಯಣ ಸಾ.ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೭೧ (೨೧೩೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷಗಳಿಂದ ಬಾಗಲಕೋಟೆ ಜಿಲ್ಲೆಯಲ್ಲಿ ಗ್ರಾಹಕರ ನ್ಯಾಯಾಲಯದಲ್ಲಿ ಎಷ್ಟು ದೂರುಗಳನ್ನು ಸ್ವೀಕರಿಸಲಾಗಿದೆ ;

(ಆ) ಆ ಪೈಕಿ ಇತ್ಯರ್ಥಗೊಂಡ ದೂರುಗಳ ಸಂಖ್ಯೆ ಎಷ್ಟು ; ಬಾಕಿ ಉಳಿದ ದೂರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಿಂದ ಎಷ್ಟು ಪ್ರಕರಣಗಳಲ್ಲಿ ದಂಡವನ್ನು ವಿಧಿಸಲಾಗಿದೆ ; ಇದರಿಂದ ಸರ್ಕಾರಕ್ಕೆ ಬಂದ ಹಣ ಎಷ್ಟು? (ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಎಚ್ ೧ ಎನ್ ೧ ರೋಗ ಹರಡದಂತೆ ಕೈಗೊಂಡು ಮುಂಜಾಗ್ರತ ಕ್ರಮದ ಬಗ್ಗೆ.

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೨ (೨೧೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈವರೆಗೂ ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಎಚ್ ೧ ಎನ್ ೧ ಪ್ರಕರಣಗಳು ಪತ್ತೆಯಾಗಿವೆ;

(ಆ) ಎಚ್ ೧ ಎನ್ ೧ ರೋಗ ತಡೆಗಟ್ಟಲು ಜಿಲ್ಲೆಯಲ್ಲಿ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಈ ರೋಗ ಚಿಕಿತ್ಸೆಗೆ ಬೇಕಾಗುವ ಔಷಧಿಯನ್ನು ಸಾಕಷ್ಟು ಪ್ರಮಾಣದಲ್ಲಿ ಎಲ್ಲೆಲ್ಲಿ ಸಂಗ್ರಹಿಸಿಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ರೋಗದಿಂದ ಜಿಲ್ಲೆಯಲ್ಲಿ ಎಷ್ಟು ಜನರು ಸಾವನ್ನಪ್ಪಿದ್ದಾರೆ? (ವಿವರ ನೀಡುವುದು)

## ಬಳ್ಳಾರಿ ವಿಮ್ಸ್ ಆಸ್ಪತ್ರೆಯ ಶವಾಗಾರದ ಅವ್ಯವಸ್ಥೆ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೩ (೨೧೬೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ವಿಮ್ಸ್ ಆಸ್ಪತ್ರೆಯಲ್ಲಿರುವ ಶವಾಗಾರದ ಕೊಠಡಿಯು ಸೂಕ್ತ ಸಲಕರಣೆ, ಸೌಲಭ್ಯ ಮತ್ತು ಸ್ಥಳ ಅಭಾವದಿಂದ ಅವ್ಯವಸ್ಥೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಆಸ್ಪತ್ರೆಯ ಶವಾಗಾರದ ಕೊಠಡಿಗೆ ಸೂಕ್ತ ಸಲಕರಣೆ, ಮೂಲಭೂತ ಸೌಲಭ್ಯ ಕಲ್ಪಿಸಲು ಸರ್ಕಾರ ಶೀಘ್ರವಾಗಿ ಕ್ರಮ ಕೈಗೊಳ್ಳುವುದೇ ?

## ಜನನ ಮತ್ತು ಮರಣ ದಾಖಲೆಗಳ ಗಣಕೀಕರಣ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೪ (೨೧೩೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಜನನ ಮತ್ತು ಮರಣ ದಾಖಲೆಗಳು ಗಣಕೀಕರಣವಾಗಿದೆಯೇ;

(ಆ) ರಾಜ್ಯದ ಎಷ್ಟು ಗ್ರಾಮ ಪಂಚಾಯತಿಗಳಲ್ಲಿ ಈ ಜನನ ಮತ್ತು ಮರಣ ದಾಖಲೆಗಳ ಗಣಕೀಕರಣವಾಗಿದೆ; ಗಣಕೀಕರಣಗೊಂಡ ಗ್ರಾಮ ಪಂಚಾಯತ್‌ಗಳ ವಿವರ ನೀಡುವುದು;

(ಇ) ಬಳ್ಳಾರಿ ಜಿಲ್ಲೆಯಲ್ಲಿ ಈ ದಾಖಲೆಗಳನ್ನು ಎಷ್ಟು ಕಡೆ ಗಣಕೀಕರಣಗೊಳಿಸಲಾಗಿದೆ;

(ಈ) ಇನ್ನುಳಿದ ಗ್ರಾಮೀಣ ಪ್ರದೇಶಗಳ ಈ ದಾಖಲೆಗಳನ್ನು ಯಾವ ಕಾಲಮಿತಿಯಲ್ಲಿ ಗಣಕೀಕರಣಗೊಳಿಸಲಾಗುವುದು?

## ಆರೋಗ್ಯ ಇಲಾಖೆಯಿಂದ ಅನುಷ್ಠಾನಗೊಳಿಸಿರುವ ಯೋಜನೆಗಳು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೫ (೨೨೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ವತಿಯಿಂದ ಅನುಷ್ಠಾನಗೊಳಿಸಿದ ಯೋಜನೆಗಳಾವುವು ; (ವರ್ಷಾವಾರು, ತಾಲ್ಲೂಕುವಾರು, ಯೋಜನೆವಾರು ವಿವರ ನೀಡುವುದು)

(ಆ) ಈ ಯೋಜನೆಗಳ ಅನುಷ್ಠಾನಕ್ಕೆ ಕೈಗೊಂಡಿರುವ ಕ್ರಮಗಳೇನು; ಅವುಗಳಿಗೆ ಮೀಸಲಿಟ್ಟ ಮೊತ್ತವೆಷ್ಟು ; (ತಾಲ್ಲೂಕುವಾರು, ವರ್ಷಾವಾರು, ವಿವರ ನೀಡುವುದು)

(ಇ) ಮುಂದಿನ ದಿನಗಳಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು ? (ಯೋಜನೆವಾರು, ರೂಪುರೇಷೆಗಳೊಂದಿಗೆ ವಿವರ ನೀಡುವುದು)

## ಆಯುರ್ವೇದ ವೈದ್ಯರ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೬ (೨೨೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಆಯುರ್ವೇದ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ಈ ವೈದ್ಯಾಧಿಕಾರಿಗಳು ಗ್ರಾಮೀಣ ಪ್ರದೇಶದಲ್ಲಿ ಆಯುರ್ವೇದ ಚಿಕಿತ್ಸೆ ನೀಡುತ್ತಿದ್ದಾರೆಯೇ ಅಥವಾ ಅಲೋಪತಿ ಚಿಕಿತ್ಸೆ ನೀಡುತ್ತಿದ್ದಾರೆಯೇ ;

(ಇ) ಈ ವೈದ್ಯರು ತುರ್ತು ಚಿಕಿತ್ಸೆ ಸಂದರ್ಭದಲ್ಲಿ ಅಲೋಪತಿ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ ಏನಾದರೂ ಕೋರ್ಸ್ ಪ್ರಾರಂಭಿಸಲಾಗಿದೆಯೇ ? ಅಥವಾ ಅಲೋಪತಿ ಚಿಕಿತ್ಸೆ ನೀಡಲು ಅನುಮತಿ ನೀಡಲಾಗಿದೆಯೇ ?

## ಮಂಡ್ಯ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ವಿಶ್ರಾಂತಿ ಗೃಹ ನಿರ್ಮಾಣ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೭ (೨೧೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲಾಸ್ಪತ್ರೆಗೆ ಹೆರಿಗೆಗೆ ಬರುವ ತಾಯಂದಿರ ಪೋಷಕರುಗಳಿಗೆ ರಾತ್ರಿ ವೇಳೆಯಲ್ಲಿ ತಂಗಲು ಸ್ಥಳಾವಕಾಶವಿಲ್ಲದೆ,

ಮರದ ಕೆಳಗೆ ಮತ್ತು ದಾರಿಬದಿಯಲ್ಲಿ ಉಳಿದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವಿಶ್ರಾಂತಿ ಗೃಹ ಮತ್ತು ರಾತ್ರಿ ವೇಳೆಯಲ್ಲಿ ತಂಗಲು ತಂಗುದಾಣ ನಿರ್ಮಿಸಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಹೆಚ್.ಐ.ವಿ (ಏಡ್ಸ್) ರೋಗ ನಿಯಂತ್ರಣದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೭೮ (೨೧೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹೆಚ್.ಐ.ವಿ ರೋಗಿಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಹೆಚ್.ಐ.ವಿ ರೋಗಕ್ಕೆ ಒಳಗಾದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಅತೀ ಹೆಚ್ಚು ಹೆಚ್.ಐ.ವಿ. ರೋಗ ಪೀಡಿತರ ಜಿಲ್ಲೆ ಯಾವುದು ;

(ಈ) ಈ ರೋಗವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲಾಸ್ಪತ್ರೆಯಲ್ಲಿ ನೈರ್ಮಲ್ಯದ ಕೊರತೆ ಇರುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೭೯ (೨೧೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲಾಸ್ಪತ್ರೆಯಲ್ಲಿ ನೈರ್ಮಲ್ಯದ ಕೊರತೆಯಿಂದಾಗಿ ರೋಗಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನೈರ್ಮಲ್ಯವನ್ನು ಕಾಪಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಮಂಡ್ಯ ಜಿಲ್ಲಾಸ್ಪತ್ರೆಯ ಆವರಣದಲ್ಲಿ ಸಾರ್ವಜನಿಕರ ಶೌಚಾಲಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಶೌಚಾಲಯ, ಕುಡಿಯುವ ನೀರು, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮೦ (೨೧೪೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಇವುಗಳಲ್ಲಿ ಎಷ್ಟು ವೈದ್ಯಕೀಯ ಮಹಾವಿದ್ಯಾಲಯಗಳು ಎಂ.ಸಿ.ಐ. (Medical Council of India) ಸಮಿತಿಯಿಂದ ಮಾನ್ಯತೆ ಪಡದಿವೆ ; (ಅವುಗಳ ವಿವರ ನೀಡುವುದು)

(ಇ) Medical Council of India ಸಮಿತಿಯಿಂದ ೨೦೧೨-೧೩, ೨೦೧೩-೧೪ನೇ ಸಾಲಿನಲ್ಲಿ Inspection ಮಾಡಿದಾಗ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿ ಕೊರತೆ ಇರುವ ಕುರಿತು ತನ್ನ ಅಸಮಾಧಾನವನ್ನು ವ್ಯಕ್ತಪಡಿಸಿದ್ದು ನಿಜವೇ ; ಈ ಕುರಿತು ಏನು ಕ್ರಮ ಕೈಗೊಳ್ಳಲಾಗಿದೆ ; (ಪ್ರತ್ಯೇಕ ವಿವರ ನೀಡುವುದು)

(ಈ) ಭೋದಕರ ಕೊರತೆಯಿಂದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣ ಪಡೆಯುವಲ್ಲಿ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಕೊರತೆ ನೀಗಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದು ?

## ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಕಳೆದ ಆಯವ್ಯಯದಲ್ಲಿ ಒದಗಿಸಿದ ಅನುದಾನ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೧ (೨೧೪೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಕಳೆದ ಆಯವ್ಯಯದಲ್ಲಿ ಒದಗಿಸಿದ ಅನುದಾನವೆಷ್ಟು ;

(ಆ) ಇಲಾಖೆಯ ಅಡಿಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳು ಯಾವುವು ;

(ಇ) ವಿಜ್ಞಾನ ಮತ್ತು ತಂತ್ರಜ್ಞಾನ ಬೆಳವಣಿಗೆಗಾಗಿ ಬೆಂಗಳೂರು ಮಹಾನಗರದಲ್ಲಿ ಇರುವ ಇಂಡಿಯನ್ ಆಫ್ ಸೈನ್ಸ್ ಮತ್ತೊಂದು ಶಾಖೆಯನ್ನು ಉತ್ತರ ಕರ್ನಾಟಕದಲ್ಲಿ ಪ್ರಾರಂಭಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಈ) ಈ ವಿಚಾರದಲ್ಲಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ?

## Greenfield Electronic System & Design Management Cluster ಸ್ಥಾಪಿಸುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮೨ (೨೧೪೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮತ್ತು ಮೈಸೂರಿನಲ್ಲಿ Greenfield Electronic System & Design Management Cluster ಗಳನ್ನು ಭಾರತ ಸರ್ಕಾರದ ಸಹಯೋಗದಲ್ಲಿ ಸ್ಥಾಪಿತಲಾಗುವುದೆಂದು ೨೦೧೪–೧೫ನೇ ಸಾಲಿನ ಆಯವ್ಯಯದಲ್ಲಿ ತಿಳಿಸಿದ್ದು ಸರಿ ಅಷ್ಟೆ ;

(ಆ) ಹಾಗಿದ್ದಲ್ಲಿ, ಈ ಕುರಿತು ಭಾರತ ಸರ್ಕಾರದ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ ಸಹಯೋಗದೊಂದಿಗೆ ಯೋಜನೆ ರೂಪಿಸಲಾಗಿದೆಯೇ ;

(ಇ) ಇದರ ರೂಪುರೇಷೆಗಳೇನು ?

## ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಸರ್ಕಾರೇತರ ಆಸ್ಪತ್ರೆಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :-**

೧೮೮೩. (೨೧೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಯಾವ ಯಾವ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರಿ ಹಾಗೂ ಸರ್ಕಾರೇತರ ಆಸ್ಪತ್ರೆಗಳಿವೆ ; ಅವುಗಳಲ್ಲಿ ಯಾವ ಯಾವ ಆಸ್ಪತ್ರೆಗಳು ಎಷ್ಟೆಷ್ಟು ಬೆಡ್‌ಗಳನ್ನು ಹೊಂದಿವೆ ; (ವಿವರ ನೀಡುವುದು)

(ಆ) ಈ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಲಭ್ಯವಿರುವ ಔಷಧಿ ಮತ್ತು ಚಿಕಿತ್ಸೆಗಳು ಯಾವುವು ; ಅವುಗಳಿಗೆ ತಗಲುವ ವೆಚ್ಚ ಎಷ್ಟು ? (ವಿವರ ನೀಡುವುದು)

## ಜಿ.ಕೆ.ಡಬ್ಲ್ಯೂ. ಲೇಔಟ್‌ಗೆ ಬಸ್ಸುಗಳನ್ನು ಒದಗಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೪ (೨೧೫೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜಿ.ಕೆ.ಡಬ್ಲ್ಯೂ. ಲೇಔಟ್‌ಗೆ ಸಂಚರಿಸುವ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ೬೧ಎಫ್, ೧೭೬ಡಿ, ೬೦ಜೆ, ೫೯ಇ, ೭೫ಇ ಬಸ್ಸುಗಳನ್ನು ಕಲೆಕ್ಷನ್ ಇಲ್ಲವೆಂಬ ನೆಪವನ್ನು ಮುಂದಿಟ್ಟು ಜಿ.ಕೆ.ಡಬ್ಲ್ಯೂ. ಲೇಔಟ್‌ಗೆ ಸಂಚರಿಸುವ ಬಸ್ಸುಗಳ ಸಂಖ್ಯೆಯನ್ನು ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಜಿ.ಕೆ.ಡಬ್ಲ್ಯೂ. ಲೇಔಟ್‌ನ ಸುತ್ತಮುತ್ತ ಅನೇಕ ಬಡಾವಣೆಗಳಿದ್ದು, ಅಲ್ಲಿನ ವಯೋವೃದ್ಧರು ಹಾಗೂ ನಿತ್ಯ ಸಂಚರಿಸುವವರಿಗೆ ಬಸ್ಸುಗಳಿಲ್ಲದೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಚಂದ್ರಾಲೇಔಟ್‌ಗೆ ಸಂಚರಿಸುವ ಕೆಲವು ಬಸ್ಸುಗಳನ್ನು ಸುಬ್ಬಣ್ಣ ಗಾರ್ಡನ್ ಮಾರ್ಗವಾಗಿ ಸಂಚಾರ ಮಾಡಲು ಕ್ರಮವನ್ನು ಕೈಗೊಳ್ಳಲಾಗುವುದೇ ;

(ಉ) ಬಸ್ಸುಗಳನ್ನು ಕಡಿತಗೊಳಿಸಲು ಕಲೆಕ್ಷನ್ ಇಲ್ಲವೆಂಬ ಅಂಶವನ್ನು ಮಾನದಂಡವಾಗಿ ಉಪಯೋಗಿಸುವುದು ಹಾಗೂ ಪ್ರಯಾಣಿಕರ ಅನುಕೂಲಕ್ಕಿಂತ ಲಾಭವೇ ಪ್ರಮುಖ ಎಂದು ಪರಿಗಣಿಸುವುದು ನ್ಯಾಯವೇ ;

(ಊ) ಮುಂದಿನ ದಿನಗಳಲ್ಲಿ ಜಿ.ಕೆ.ಡಬ್ಲ್ಯೂ. ಲೇಔಟ್‌ಗೆ ಹೆಚ್ಚಿನ ಬಸ್ಸುಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದಲ್ಲಿ ವೈರಾಣು ಸೆಂಟರ್‌ಗಳನ್ನು ಸ್ಥಾಪಿಸುವ ಬಗ್ಗೆ

**ಡಾ: ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೫ (೨೧೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಚ್‌೧ಎನ್‌೧ ರೋಗದಿಂದ ಇತ್ತೀಚೆಗೆ ಮೃತರಾದವರ ಸಂಖ್ಯೆ ಎಷ್ಟು ; ಈ ವೈರಾಣುಗಳನ್ನು ಪತ್ತೆ ಮಾಡುವ ಸೆಂಟರ್‌ಗಳು ರಾಜ್ಯದಲ್ಲಿ ಎಷ್ಟಿವೆ ; ಖಾಸಗಿಯವರಿಗೆ ಈ ವೈರಾಣು ಪರೀಕ್ಷೆಯನ್ನು ಕೊಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದೊಂದು ವಿಭಾಗಕ್ಕೆ ವೈರಾಲಜಿ ಸೆಂಟರ್ ಸ್ಥಾಪಿಸುವ ಯೋಜನೆ ಸರ್ಕಾರಕ್ಕಿದೆಯೇ ; ಒಂದು ವೈರಾಲಜಿ ಸ್ಥಾಪಿಸಲು ತಗಲುವ ವೆಚ್ಚ ಎಷ್ಟು ;

(ಇ) ರಾಜ್ಯದಲ್ಲಿ ಅಂಗಾಂಗ ಕಸಿ ಮಾಡುವ ಎಷ್ಟು ಆಸ್ಪತ್ರೆಗಳಿಗೆ ಸರ್ಕಾರ ಅನುಮತಿ ನೀಡಿದೆ ; ಯಾವ ಯಾವ ಅಂಗಾಂಗಗಳ ಕಸಿ ಮಾಡುವುದಕ್ಕೆ ಈ ರಾಜ್ಯದಲ್ಲಿ ಸರ್ಕಾರ ಯಾವ ಯಾವ ಆಸ್ಪತ್ರೆಗಳನ್ನು ನಿಗದಿ ಮಾಡಿದೆ ;

(ಈ) ಮೂತ್ರಪಿಂಡದ ಕಸಿ ಮಾಡುವ ಸಂದರ್ಭದಲ್ಲಿ ಅನುಸರಿಸಬೇಕಾದ ಕಾನೂನು ಕಟ್ಟಲೆಗಳಿಂದಾಗುವ ವಿಳಂಬದಿಂದಾಗಿ ಎಷ್ಟು ರೋಗಿಗಳು ಪ್ರಾಣ ಕಳೆದುಕೊಂಡಿರುತ್ತಾರೆ ; ಪ್ರತಿಯೊಂದು ಪ್ರಕರಣದಲ್ಲಿ ಅನುಮತಿ ಪಡೆಯಲು ವಿಧಾನಸೌಧಕ್ಕೆ ಬರುವ ಅಗತ್ಯತೆ ಇದೆಯೇ ?

## ಚಾಮರಾಜನಗರದಲ್ಲಿ ವೈದ್ಯಕೀಯ ಕಾಲೇಜು.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೬ (೨೧೫೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರದಲ್ಲಿ ವೈದ್ಯಕೀಯ ಕಾಲೇಜನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು ; ಇದಕ್ಕೆ ಐ.ಎಮ್.ಎ. ಮಾನ್ಯತೆ ದೊರಕಿಸಿಕೊಳ್ಳಲಾಗಿದೆಯೇ ; ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗುವುದು ; ವೈದ್ಯಕೀಯ ಕಾಲೇಜ್ ಕ್ಯಾಂಪಸ್ ಎಲ್ಲಿದೆ; ಅದರ ಒಟ್ಟು ವಿಸ್ತೀರ್ಣ ಎಷ್ಟು ; ಇದನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರ ಮಾಡಲಾಗಿದೆಯೇ ;

(ಆ) ಚಾಮರಾಜನಗರ ವೈದ್ಯಕೀಯ ಕಾಲೇಜು ಕಟ್ಟಡ ನಿರ್ಮಾಣ ಕಾರ್ಯ ಆರಂಭವಾಗಿದೆಯೇ ; ಇದಕ್ಕಾಗಿ ಮಂಜೂರು ಮಾಡಿರುವ ಅನುದಾನ ಎಷ್ಟು ; ಕಾಮಗಾರಿಗಳು ಯಾವ ಹಂತದಲ್ಲಿವೆ ? (ವಿವರ ಒದಗಿಸುವುದು)

## ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯಕ್ರಮಗಳು.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೭ (೨೧೫೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯೋಜನೆ ಮತ್ತು ಸಾಂಖ್ಯಿಕ ಸಚಿವಾಲಯದ ಅಧೀನದಲ್ಲಿ ಬರುವ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯು (ಬ್ಯೂರೋ ಆಫ್

ಎಕನಾಮಿಕ್ಸ್ ಅಂಡ್ ಸ್ಟ್ಯಾಟಿಸ್ಟಿಕ್ಸ್) ನಿರ್ವಹಿಸುತ್ತಿರುವ ಕೆಲಸ ಕಾರ್ಯಗಳೇನು ; ಈ ಇಲಾಖೆಗೆ ಮಂಜೂರಾಗಿರುವ ಮತ್ತು ಹಾಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ; ಈ ಇಲಾಖೆಯ ಯಾವ ಯಾವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರನ್ನು ನಿಯೋಜನೆ ಮೇಲೆ ಇತರ ಇಲಾಖೆಗಳಿಗೆ, ಮಹಾನಗರ ಪಾಲಿಕೆಗಳಿಗೆ ಮತ್ತು ಇತರ ಸಂಸ್ಥೆಗಳಿಗೆ ಕಳುಹಿಸುವ ವ್ಯವಸ್ಥೆ ಇದೆ ; (ನಿಯೋಜನೆಯಾಗಿರುವವರ ವಿವರಗಳನ್ನು ಒದಗಿಸುವುದು)

(ಆ) ಈ ಇಲಾಖೆಯನ್ನು ನ್ಯಾಷನಲ್ ಸ್ಯಾಂಪಲ್ ಸರ್ವೇ ಮಾದರಿಯಲ್ಲಿ, ವಿಸ್ತರಿಸಿ, ಬಲಪಡಿಸಿ, ಜನನ ಮರಣ ನೋಂದಣಿ ಮತ್ತು ಮತದಾರರ ನೋಂದಣಿ, ಇತರ ಅಂಕಿ ಅಂಶಗಳ ಸಂಗ್ರಹಣೆ, ಆರ್ಥಿಕ ಸಮೀಕ್ಷೆ ಇತ್ಯಾದಿ ಕಾರ್ಯಗಳನ್ನು ಕೈಗೊಳ್ಳುವ ಕಾರ್ಯಕ್ರಮಗಳನ್ನು ವಹಿಸಲು ಚಿಂತನೆ ನಡೆಸಲಾಗುವುದೇ ?

## ಗಿರಿಜನ ಹಾಡಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತನೆ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೮ (೨೧೫೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗಿರಿಜನ ಹಾಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಯಾವ ಯಾವ ಹಾಡಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ಆಯ್ಕೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು) ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಈ ಕಾರ್ಯಕ್ಕೆ ಅರಣ್ಯ ಇಲಾಖೆಯವರು ಅಡ್ಡಿ ಪಡಿಸುತ್ತಿರುವುದು ನಿಜವೇ ? (ವಿವರ ಒದಗಿಸುವುದು)

## ಮೈಸೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನಿರ್ಮಾಣ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೮೯ (೨೧೬೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಸ್ಥಾಪಿಸಲು ಅಗತ್ಯವಾದ ಭೂಮಿಯನ್ನು ಗುರುತಿಸಿ ಇಲಾಖೆಗೆ ಹಸ್ತಾಂತರ ಮಾಡಲಾಗಿದೆಯೇ ;

(ಆ) ಈ ಆಸ್ಪತ್ರೆಯ ನಿರ್ಮಾಣದ ಅಂದಾಜು ವೆಚ್ಚ ಎಷ್ಟು ; ಈ ಬಗ್ಗೆ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ ; ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; ನಿರ್ಮಾಣ ಕಾಮಗಾರಿಗಳು ಆರಂಭವಾಗಿವೆಯೇ ; ಕಾಮಗಾರಿಗಳು ಯಾವ ಹಂತದಲ್ಲಿವೆ, ಯಾವಾಗ ಮುಕ್ತಾಯವಾಗುತ್ತವೆ ; ಯಾವಾಗಿನಿಂದ ಆಸ್ಪತ್ರೆಯನ್ನು ಆರಂಭಿಸಲು ಉದ್ದೇಶಿಸಲಾಗಿದೆ ;

(ಇ) ಕೇಂದ್ರ ರೈಲ್ವೆ ಆಯವ್ಯಯದಲ್ಲಿ ಮೈಸೂರಿಗೆ ಮಂಜೂರಾಗಿದ್ದ ರೈಲ್ವೆ ವೈದ್ಯಕೀಯ ಕಾಲೇಜು ಸ್ಥಾಪನೆಯ ಕಾರ್ಯ ಯಾವ ಹಂತದಲ್ಲಿದೆ ; ಇದುವರೆಗೆ ಆಗಿರುವ ಪ್ರಗತಿ ಏನು ; (ವಿವರಗಳನ್ನು ಒದಗಿಸುವುದು)

## ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಯಂತ್ರಗಳ ಖರೀದಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೯೦ (೨೨೨೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೧ರಿಂದ ಈವರೆವಿಗೆ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿರುವ ನೆಫ್ರೋ ಯುರಾಲಜಿ ಆಸ್ಪತ್ರೆಯಿಂದ ಕಿಡ್ನಿ ಸಮಸ್ಯೆಗೆ ಯಾವ ಯಾವ ದಿನಾಂಕದಂದು ಎಷ್ಟೆಷ್ಟು ಡಯಾಲಿಸಿಸ್ ಯಂತ್ರಗಳನ್ನು ಖರೀದಿಸಲಾಗಿದೆ ;

(ಆ) ಸದರಿ ಯಂತ್ರಗಳನ್ನು ಯಾರಿಂದ ಖರೀದಿಸಲಾಗಿದೆ ; ಈ ಯಂತ್ರಗಳನ್ನು ಖರೀದಿಸಲು ಸರ್ಕಾರ ನೀಡಿರುವ ಹಣ ಎಷ್ಟು;

(ಇ) ಅಗತ್ಯಕ್ಕಿಂತ ಹೆಚ್ಚು ಯಂತ್ರಗಳನ್ನು ಖರೀದಿಸಿರುವುದರಿಂದ ೨-೩ ವರ್ಷಗಳಿಂದ ಅವುಗಳನ್ನು ಬಳಸದೆ, ಉಗ್ರಾಣದಲ್ಲೇ ಇದ್ದು, ಸರ್ಕಾರಕ್ಕೆ ಕೋಟ್ಯಾಂತರ ರೂ. ನಷ್ಟ ಉಂಟಾಗಲು ಕಾರಣಕರ್ತರು ಯಾರು ;

(ಈ) ಈ ರೀತಿ ಸರ್ಕಾರಿ ಹಣವನ್ನು ಬೇಕಾಬಿಟ್ಟಿ ಖರ್ಚು ಮಾಡಿರುವ ಬಗ್ಗೆ ತನಿಖೆ ನಡೆಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಹಿಂದುಳಿದ ವರ್ಗಗಳ ಅಭಿವೃದ್ಧಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೯೧ (೨೨೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಜನಾಂಗಗಳ ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯಾವುದಾದರೂ ಹೊಸ ಯೋಜನೆಗಳನ್ನು ರೂಪಿಸಿವೆಯೇ ;

(ಆ) ಹಾಗಿದ್ದಲ್ಲಿ, ಹೊಸದಾಗಿ ರೂಪಿಸಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಈ ಹೊಸ ಯೋಜನೆಗಳಿಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ನೀಡಲಾಗುವುದೇ ;

(ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ನಿರೀಕ್ಷಿಸಬಹುದಾಗಿದೆ ?

## ಸಾರಿಗೆ ಇಲಾಖೆಯ ವ್ಯಾಪ್ತಿಗೊಳಪಡುವ ಚೆಕ್‌ಪೋಸ್ಟ್ ಮತ್ತು ದಿನಗೂಲಿ ನೌಕರರ ಮಾಹಿತಿ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೯೨ (೨೧೬೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಾರಿಗೆ ಇಲಾಖೆಯ ವ್ಯಾಪ್ತಿಗೊಳಪಡುವ ಚೆಕ್‌ಪೋಸ್ಟ್‌ಗಳು ಯಾವುವು ; (ಈ ಚೆಕ್‌ಪೋಸ್ಟ್‌ಗಳಲ್ಲಿ ಕರ್ತವ್ಯ

ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರುಗಳ ವೃಂದವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ಚೆಕ್‌ಪೋಸ್ಟ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಯವರುಗಳ ಕಾರ್ಯಪಾಲನೆ ಮತ್ತು ಜವಾಬ್ದಾರಿಗಳೇನು ; (ವೃಂದವಾರು ಚೆಕ್‌ಪೋಸ್ಟ್‌ಗಳ ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಈ ಚೆಕ್‌ಪೋಸ್ಟ್‌ಗಳಲ್ಲಿ ದಿನಗೂಲಿ ಆಧಾರದ ಮೇಲೆ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆಯೇ ಅಂತಹ ನೌಕರರುಗಳ ಕಾರ್ಯಪಾಲನೆ ಮತ್ತು ಜವಾಬ್ದಾರಿಗಳೇನು ; ಇವರುಗಳಿಂದ ಇಲಾಖೆಗೆ ಆಗುವ ಅನುಕೂಲಗಳೇನು ;

(ಈ) ಈ ದಿನಗೂಲಿ ನೌಕರರುಗಳಿಗೆ ನೀಡಲಾಗುತ್ತಿರುವ ವೇತನ ಹಾಗೂ ಇನ್ನಿತರ ಭತ್ಯೆಗಳೇನು ಹಾಗೂ ಈ ನೌಕರರುಗಳನ್ನು ಯಾವ ಮಾನದಂಡಗಳ ಮೇಲೆ ನೇಮಿಸಿಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಧಾರವಾಡದ ಜನ್ನತ್ ನಗರದ ವಸತಿ ನಿಲಯ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೮೬೩ (೨೧೭೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಧಾರವಾಡದ ಜನ್ನತ್ ನಗರದಲ್ಲಿ ಮೆಟ್ರಿಕ್ ಪೂರ್ವ ವಸತಿ ನಿಲಯಕ್ಕಾಗಿ ಕಟ್ಟಡ

ನಿರ್ಮಿಸಿರುವುದು ನಿಜವೇ ; ಸದರಿ ಕಟ್ಟಡವನ್ನು ಯಾವಾಗ ಕಟ್ಟಲಾಯಿತು ; ಇದಕ್ಕೆ ತಗುಲಿದ ವೆಚ್ಚವೇನು ;

(ಆ) ಈ ವಸತಿ ನಿಲಯವನ್ನು ಸಂಪೂರ್ಣವಾಗಿ ಕಟ್ಟಲಾಗಿದೆಯೇ ; ಪ್ರಸ್ತುತ ಈ ಕಟ್ಟಡವನ್ನು ಉಪಯೋಗಿಸಲಾಗುತ್ತಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಇಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು, ಕಸದ ಗೂಡಾಗಿದ್ದು, ಸುತ್ತಲಿನ ಆರೋಗ್ಯ ಮತ್ತು ಆರೋಗ್ಯಕರ ವಾತಾವರಣ ಇದರಿಂದಾಗಿ ಹದಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗಮನಕ್ಕೆ ಬಂದಿದ್ದಲ್ಲಿ, ಈ ಕುರಿತು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ;

(ಈ) ಗಮನಕ್ಕೆ ಬಂದಿಲ್ಲವಾದಲ್ಲಿ, ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ ?

## ವೋಲ್ವೋ ಬಸ್‌ಗಳ ಸಂಖ್ಯೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೮೯೪ (೨೨೫೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಖರೀದಿಸಿದ್ದ ಮಾರ್ಕೋಪೋಲೋ ಬಸ್ಸುಗಳ ಸಂಖ್ಯೆ ಎಷ್ಟು ; ಕಳೆದ ಐದು ವರ್ಷಗಳ ವರ್ಷವಾರು ವಿವರ ನೀಡುವುದು ;

(ಆ) ಅವುಗಳಲ್ಲಿ ಪ್ರಸ್ತುತ ಚಾಲನೆಯಲ್ಲಿರುವ ಬಸ್ಸುಗಳ ಸಂಖ್ಯೆ ಎಷ್ಟು; ನಿಷ್ಕ್ರಿಯಗೊಳಿಸಿರುವ ಮಾರ್ಕೋಪೋಲೋ ಬಸ್ಸುಗಳ ಸಂಖ್ಯೆ ಎಷ್ಟು ; ನಿಷ್ಕ್ರಿಯಗೊಳಿಸಲು ಕಾರಣವೇನು ;

(ಇ) ಇತರೆ ಕಂಪನಿಯ ಬಸ್ಸುಗಳಿಗೂ ಮಾರ್ಕೋಪೋಲೋ ಕಂಪನಿಯ ಬಸ್ಸುಗಳಿಗೂ ಮೈಲೇಜ್ ಕೊಡುವಲ್ಲಿ ಇರುವ ಅಂತರವೇನು ;

(ಈ) ಮಾರ್ಕೋಪೋಲೋ ಬಸ್ಸುಗಳು ಅತಿ ಕಡಿಮೆ ಮೈಲೇಜ್ ನೀಡುತ್ತಿರುವುದು ನಿಜವೇ; ಈ ಸಮಸ್ಯೆಗೆ ಏನು ಪರಿಹಾರ ಕ್ರಮ ಕೈಗೊಳ್ಳಲಾಗಿದೆ ;

(ಉ) ಮತ್ತೊಮ್ಮೆ ಇದೇ ಕಂಪನಿಯ ಬಸ್ಸುಗಳನ್ನು ಕೊಳ್ಳಲು ಮುಂದಾಗಿರುವುದು ನಿಜವೇ ; ಈ ರೀತಿಯ ನಿರ್ಧಾರಕ್ಕೆ ಕಾರಣವೇನು ? ವಿವರ ನೀಡುವುದು

## ಜಾತಿ ಗಣತಿ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೮೯೫ (೨೨೬೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಜಾತಿ ಗಣತಿಯನ್ನು ನಡೆಸಲು ಮುಂದಾಗಿರುವುದು ನಿಜವೇ, ಇದಕ್ಕೆ ಪ್ರಮುಖ ಕಾರಣವೇನು ; ಇದರಿಂದ ಆಗುವ ಅನುಕೂಲ ಹಾಗೂ ಅನಾನುಕೂಲಗಳೇನು ; ಈ ಸಂಬಂಧ

ಚರ್ಚಿಸಲಾಗಿದೆಯೇ ; ಈ ಬಗ್ಗೆ ಸಾರ್ವಜನಿಕರ ಹಾಗೂ ತಜ್ಞರ ಸಲಹೆ–ಸೂಚನೆಗಳನ್ನು ಪಡೆಯಲಾಗಿದೆಯೇ ;

(ಆ) ಸದರಿ ಪ್ರಕ್ರಿಯೆಗೆ ಮಾಡಿರುವ ಜಾತಿ–ಉಪಜಾತಿಗಳ ಪಟ್ಟಿಯ ವಿವರ ನೀಡುವುದು ;

(ಇ) ಜನ ಗಣತಿಯ ನಂತರ ಒಬ್ಬ ವ್ಯಕ್ತಿಯ ವೈಯಕ್ತಿಕ ವಿವರ ಹಾಗೂ ಒಂದು ಜಾತಿಯ ಸಾಮೂಹಿಕ ವಿವರಗಳನ್ನು ಯಾವ ಸಂದರ್ಭಗಳಲ್ಲಿ, ಯಾವ ಕಾರಣಕ್ಕೆ ಉಪಯೋಗಿಸಿಕೊಳ್ಳಲು ಉದ್ದೇಶಿಸಲಾಗಿದೆ ?

## ಖಾಸಗಿ ವಾಹನಗಳ ಮಾಲೀಕರು ಪಾವತಿಸಿದ ಶುಲ್ಕ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೮೯೬ (೨೨೫೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ವಾಹನಗಳ ಮಾಲೀಕರು ಪಾವತಿಸಿದ ಶುಲ್ಕವನ್ನು ಸಾರಿಗೆ ಇಲಾಖೆಯ ಸಿಬ್ಬಂದಿಗಳು ಖಜಾನೆಗೆ ತುಂಬುವಲ್ಲಿ ಆಗಿರುವ ಅಕ್ರಮವು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ ವಿವರ ನೀಡುವುದು ;

(ಆ) ಬೇರೆ ಕಡೆಯ ಸಾರಿಗೆ ಕಛೇರಿಗಳಲ್ಲಿಯೂ ಈ ರೀತಿ ನಡೆದಿರುವ ಕುರಿತು ತನಿಖೆ ನಡೆಸಲಾಗಿದೆಯೆ ; ನಡೆದಿದ್ದಲ್ಲಿ ವಿವರ ನೀಡುವುದು ;

(ಇ) ಮುಂದೆ ಈ ರೀತಿ ತಪ್ಪು ನಡೆಯದಂತೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಡಯಾಲಿಸಿಸ್ ಯಂತ್ರಗಳನ್ನು ನೋಡಿಕೊಳ್ಳದೇ ಇರುವ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೯೭ (೨೧೭೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಿಡ್ನಿ ಸಮಸ್ಯೆಯಿಂದ ನರಳುತ್ತಿರುವವರ ಅನುಕೂಲಕ್ಕಾಗಿ ಡಯಾಲಿಸಿಸ್ ಚಿಕಿತ್ಸೆ ಪಡೆಯಲು ಸೌಲಭ್ಯವಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಸೌಲಭ್ಯಗಳಿರುವ ಆಸ್ಪತ್ರೆಗಳಲ್ಲಿ ಪ್ರತಿ ದಿನ ಎಷ್ಟು ಜನ ಈ ಅನುಕೂಲ ಪಡೆದುಕೊಳ್ಳುತ್ತಿದ್ದಾರೆ ;

(ಇ) ಸರ್ಕಾರದ ವೆಚ್ಚದಲ್ಲಿ ಖರೀದಿ ಮಾಡಿರುವ ಡಯಾಲಿಸಿಸ್ ಯಂತ್ರಗಳು ಕಳೆದ ಮೂರು ವರ್ಷಗಳಿಂದ ಬೆಂಗಳೂರಿನ ಗೋದಾಮಿನಲ್ಲಿ ಕೊಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಜಾಗದಲ್ಲಿ ಈ ಒಂದು ಯಂತ್ರಗಳನ್ನು ಇಡಲಾಗಿದೆ ; ಎಷ್ಟು ಯಂತ್ರಗಳಿವೆ ; ಸದರಿ ಯಂತ್ರಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು ?

(ಖರೀದಿ ಮಾಡಿರುವ ದಿನಾಂಕ ಮತ್ತು ಯಾರ ಹೆಸರಿನಲ್ಲಿ ಈ ಯಂತ್ರಗಳನ್ನು ಖರೀದಿ ಮಾಡಲಾಗಿದೆ ; ಪೂರ್ತಿ ವಿವರ ನೀಡುವುದು)

## ವಿದ್ಯಾರ್ಥಿನಿಯರ ವಸತಿ ನಿಲಯಗಳ ಮೂಲ ಸೌಕರ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೮೮ (೨೧೯೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಯರ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವಂತಹ ವಸತಿ ನಿಲಯಗಳೆಷ್ಟು; ಬಾಡಿಗೆ ಕಟ್ಟಡಗಳನ್ನು ಹೊಂದಿರುವ ವಸತಿ ನಿಲಯಗಳೆಷ್ಟು ;

(ಇ) ಪರಿಶಿಷ್ಟ ಜಾತಿ ಮತ್ತು ವರ್ಗದ ವಿದ್ಯಾರ್ಥಿನಿಯರಿಗೆ ನೀಡಿರುವ ವಸತಿ ನಿಲಯಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಕಟ್ಟಡದ ದುರಸ್ಥಿ ಮತ್ತು ಮೂಲ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಆಸ್ಪತ್ರೆಗಳಲ್ಲಿನ ಅವ್ಯವಸ್ಥೆ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೯೯ (೨೧೯೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವ ಇಲ್ಲದೆ ರೋಗಿಗಳು ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಶುಚಿತ್ವ ಕಾಪಾಡಲು ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ;

(ಇ) ಮಂಡ್ಯ ಜಿಲ್ಲೆಯಲ್ಲಿನ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಮೇಲ್ದರ್ಜೆಗೇರಿಸಲ್ಪಟ್ಟ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಮೇಲ್ದರ್ಜೆಗೇರಿಸಲ್ಪಟ್ಟ ಆಸ್ಪತ್ರೆಗಳಲ್ಲಿ ರೋಗಿಗಳ ಉತ್ತಮ ಚಿಕಿತ್ಸೆಗೆ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಸಮಸ್ಯೆಯ ನಿವಾರಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ?

(ಊ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹಾರಕ್ಕೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೦೦ (೨೨೦೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾಲೇಜುಗಳ ಆರಂಭಕ್ಕೆ ಮುನ್ನ ಅಗತ್ಯ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗಿದೆಯೇ ;

(ಇ) ಗ್ರೂಪ್ 'ಸಿ' ಮತ್ತು 'ಡಿ' ಹುದ್ದೆಗಳನ್ನು ಸ್ಥಳೀಯರಿಗೆ ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## ಅನ್ನಭಾಗ್ಯ ಯೋಜನೆಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೦೧ (೨೧೯೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದಿಂದ ನೀಡುವ ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಫಲಾನುಭವಿಗಳು ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಈ ರೀತಿ ಮಾರಾಟ ಮಾಡಲಾಗುತ್ತಿದೆ ;

(ಇ) ಅಕ್ರಮವಾಗಿ ಮಾರಾಟ ಮಾಡುತ್ತಿದ್ದವರ ವಿರುದ್ಧ ಸರ್ಕಾರ ಯಾವ ರೀತಿಯ ಶಿಸ್ತಿನ ಕ್ರಮ ಜರುಗಿಸಿದೆ ;

(ಈ) ಎಷ್ಟು ಜನರ ವಿರುದ್ಧ ಕಾನೂನು ಕ್ರಮ ಕೈಗೊಂಡಿದೆ ?

## ಪರಿಶಿಷ್ಟ ಜಾತಿ/ಪಂಗಡದ ನಕಲಿ ಪ್ರಮಾಣ ಪತ್ರ ಸೃಜನೆ ಮತ್ತು ದುರಪಯೋಗ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೦೨ (೨೧೭೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗ ಪಡಿಸಿಕೊಂಡಿರುವ ಪ್ರಕರಣಗಳು ಎಷ್ಟು ಮತ್ತು ಯಾವುವು ; (ಜಿಲ್ಲಾವಾರು, ಪ್ರಕರಣವಾರು, ವರ್ಷಾವಾರು ವಿವರ ನೀಡುವುದು)

(ಆ) ಮೇಲಿನ ಪ್ರಕರಣಗಳಲ್ಲಿ ಶಿಕ್ಷೆಯಾಗಿರುವ ಪ್ರಕರಣಗಳೆಷ್ಟು ; ಪ್ರಸ್ತುತ ವಿಚಾರಣೆ ನಡೆಯುತ್ತಿರುವ ಪ್ರಕರಣಗಳೆಷ್ಟು ; ಪ್ರಸ್ತುತ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು, ವರ್ಷಾವಾರು, ಪ್ರಕರಣವಾರು ವಿವರ ನೀಡುವದು)

(ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗ ಪಡಿಸಿಕೊಂಡ ವ್ಯಕ್ತಿಗಳು ಹಾಗೂ ದುರುಪಯೋಗ ಪಡಿಸಿಕೊಳ್ಳುವ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ತುರ್ತು ಕಾನೂನು ಕ್ರಮಗಳೇನು ?

## ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಮೀಸಲಿರುವ ಅನುದಾನ ಬಳಕೆ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೩ (೨೧೯೦) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಮೀಸಲಿರುವ ಅನುದಾನವು ನಿಗದಿತ ಕಾಲಮಿತಿಯಲ್ಲಿ ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪ.ಜಾ/ಪ.ಪಂ ದವರ ಅಭಿವೃದ್ಧಿಗೋಸ್ಕರ ರೂಪಿಸಲಾಗಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು).

(ಇ) ಕಳೆದ ೩ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಇನ್ನುಳಿದ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗೋಸ್ಕರ ಮೀಸಲಿರಿಸಿದ ಅನುದಾನವೆಷ್ಟು ; ಅದರಲ್ಲಿ

ಮಂಜೂರಾದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; ಬಳಕೆಯಾಗದೆ ಇರುವ ಅನುದಾನವೆಷ್ಟು ; (ವರ್ಷವಾರು, ಇಲಾಖೆವಾರು ಹಾಗೂ ಯೋಜನಾವಾರು ಮಾಹಿತಿ ನೀಡುವುದು).

(ಈ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದ ಅನುದಾನವೆಷ್ಟು ; (ಯೋಜನಾವಾರು, ಇಲಾಖೆವಾರು ಮಾಹಿತಿ ನೀಡುವುದು).

(ಉ) ಅನುದಾನವು ಪೂರ್ಣ ಪ್ರಮಾಣದಲ್ಲಿ ಬಳಕೆಯಾಗದೆ ಬಾಕಿ ಇರಲು ಕಾರಣಗಳೇನು ?

## ರಾಜೀವ ಆರೋಗ್ಯ ಭಾಗ್ಯ ಯೋಜನೆಯಡಿ ಚಿಕಿತ್ಸೆಯ ಬಗ್ಗೆ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):-**

೧೯೦೪ (೨೧೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎ.ಪಿ.ಎಲ್ ಕುಟುಂಬಗಳಿಗೆ ರಾಜೀವ ಆರೋಗ್ಯ ಭಾಗ್ಯ ಯೋಜನೆಯಡಿ ಯಾವ ಯಾವ ರೋಗಗಳಿಗೆ ಚಿಕಿತ್ಸೆ ಒದಗಿಸಲಾಗುತ್ತದೆ ; ಅದಕ್ಕೆ ಇರುವ ಮಾನದಂಡಗಳೇನು ;

(ಆ) ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ಆಸ್ಪತ್ರೆಗಳಲ್ಲಿ ಈ ಯೋಜನೆಯ ಪ್ರಯೋಜನವನ್ನು ರೋಗಿಗಳಿಗೆ ಒದಗಿಸುವ ವ್ಯವಸ್ಥೆ ಕಲ್ಪಿಸಲಾಗಿದೆ ;

(ಇ) ೨೦೧೪-೧೫ನೇ ಸಾಲಿನಲ್ಲಿ ಈ ಯೋಜನೆಗೆ ಕಾಯ್ದಿರಿಸಿರುವ ಅನುದಾನದ ಮೊತ್ತ ಎಷ್ಟು ?

## ಸಮಾಜ ಕಲ್ಯಾಣ ಇಲಾಖೆಗೆ ಸರ್ಕಾರದ ಅನುದಾನ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):-**

೧೯೦೫ (೨೧೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ನೀಡಿರುವ ಅನುದಾನದ ಮೊತ್ತವೆಷ್ಟು ;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣವನ್ನು ನಿಗಧಿಪಡಿಸಲಾಗಿದೆ ;

(ಇ) ಈ ಮೊತ್ತದಲ್ಲಿ ಖರ್ಚಾಗಿರುವ ಹಾಗೂ ಖರ್ಚಾಗದೇ ಉಳಿದಿರುವ ಮೊತ್ತವೆಷ್ಟು ; ಖರ್ಚಾಗದೇ ಬಾಕಿ ಉಳಿದಿರುವುದಕ್ಕೆ ಕಾರಣವೇನು ?

## ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೯೦೬ (೨೧೭೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿ.ಇ.ಟಿ ಮೂಲಕ ವೃತ್ತಿ ಪರ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ೫ ಸಾವಿರ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ರೂ.೫೦ ಸಾವಿರ ಪ್ರೋತ್ಸಾಹ ಧನ ನೀಡುವ ಯೋಜನೆ ಸರ್ಕಾರಕ್ಕಿದೆಯೇ ;

(ಆ) ಈ ಯೋಜನೆ ಮ್ಯಾನೇಜ್‌ಮೆಂಟ್ ಕೋಟಾದಡಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೂ ಅನ್ವಯವಾಗುತ್ತದೆಯೇ ;

(ಇ) ಸಮಾಜದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ ಜನಾಂಗಕ್ಕೆ ಈ ಸೌಲಭ್ಯವನ್ನು ಯಾಕೆ ನೀಡಲಾಗುತ್ತಿಲ್ಲ ?

## ಮುರಾರ್ಜಿ ದೇಸಾಯಿ ಶಾಲಾ ಶಿಕ್ಷಕರ ಮತ್ತು ರಾಜ್ಯದ ಶಿಕ್ಷಣ ಇಲಾಖೆಯ ಶಿಕ್ಷಕರ ವೇತನ ಮತ್ತು ಸೇವಾ ಸೌಲಭ್ಯಗಳಲ್ಲಿರುವ ತಾರತಮ್ಯದ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೯೦೭ (೨೧೭೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮುರಾರ್ಜಿ ದೇಸಾಯಿ ವಸತಿ ಶಾಲೆ ಶಿಕ್ಷಕರಿಗೆ ರಾಜ್ಯದ ಸರ್ಕಾರಿ ಶಾಲೆಗಳ ಶಿಕ್ಷಕರಿಗೆ ನೀಡುವ ವೇತನ ಸೇರಿದಂತೆ ಯಾವ ಸೇವಾ ಸೌಲಭ್ಯಗಳನ್ನು ನೀಡಲಾಗುತ್ತಿದೆ ;

(ಆ) ಮುರಾರ್ಜಿ ದೇಸಾಯಿ ಶಾಲಾ ಶಿಕ್ಷಕರ ಮತ್ತು ರಾಜ್ಯದ ಶಿಕ್ಷಣ ಇಲಾಖೆಯ ಶಿಕ್ಷಕರ ವೇತನ ಮತ್ತು ಸೇವಾ ಸೌಲಭ್ಯಗಳಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನದಲ್ಲಿ ಇದೆಯೇ ;

(ಇ) ಈ ರೀತಿಯ ತಾರತಮ್ಯಗಳಿರಲು ಕಾರಣಗಳೇನು ;

(ಈ) ಈ ತಾರತಮ್ಯವನ್ನು ಎಂದು ನಿವಾರಿಸಲಾಗುತ್ತದೆ ?

## ಸರ್ಕಾರಿ ಸ್ವಾಮ್ಯದ ನೆಫ್ರೋ-ಯೂರಾಲಜಿ ಸಂಸ್ಥೆಯ ನಿರ್ದೇಶಕರ ನೇಮಕಾತಿ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೯೦೮ (೨೧೭೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಸ್ವಾಮ್ಯದ ನೆಫ್ರೋ-ಯೂರಾಲಜಿ ಸಂಸ್ಥೆಯ ನಿರ್ದೇಶಕರ ನಿವೃತ್ತಿಗೆ ಇರುವ ವಯೋಮಿತಿ ಎಷ್ಟು ;

(ಆ) ಈ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರ ವೈದ್ಯಕೀಯ ಉಪನ್ಯಾಸಕರುಗಳ ವಯೋಮಿತಿ ಎಷ್ಟು ;

(ಇ) ಈ ಹಿಂದೆ ಸಂಸ್ಥೆಯ ನಿರ್ದೇಶಕರಾಗಲು ಪ್ರಾಧ್ಯಾಪಕರಾಗಿ ಸರ್ಕಾರಿ ಸೇವೆಯಲ್ಲಿರುವವರನ್ನು ನೇಮಕ ಮಾಡಿಕೊಳ್ಳಬೇಕೆಂದು ಇದ್ದ ನಿಯಮವನ್ನು ತೆಗೆದುಹಾಕಲು ಕಾರಣಗಳೇನು ;

(ಈ) ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಒಂದೇ ತರಹ ಬೈಲಾ ಇದೆಯೇ ;

(ಉ) ಇದ್ದಲ್ಲಿ, ಈ ಸಂಸ್ಥೆಗೆ ಬೇರೆಯಾದ ಬೈಲಾ ರಚಿಸಲು ಕಾರಣಗಳೇನು ;

(ಊ) ಸರ್ಕಾರಿ ಸ್ವಾಮ್ಯದ ವೈದ್ಯಕೀಯ ಕಾಲೇಜುಗಳು ಹಾಗೂ ಇತರೆ ವಿಶೇಷ ರೋಗ ತಜ್ಞ ಸಂಸ್ಥೆಗಳಲ್ಲಿ ಇರುವ ಸಿಬ್ಬಂದಿಗೆ ಹಾಗೂ ನಿರ್ದೇಶಕರಿಗೆ ಬೇರೆ ಬೇರೆ ನಿವೃತ್ತಿ ವಯೋಮಿತಿ ಇರಲು ಕಾರಣಗಳೇನು ;

(ಎ) ಇಂತಹ ಪ್ರತಿಷ್ಠಿತ ಸಂಸ್ಥೆಗಳಿಗೆ ನಿರ್ದೇಶಕರನ್ನು ನೇಮಕ ಮಾಡುವಾಗ ಆ ಸಂಸ್ಥೆಯಲ್ಲಿಯೇ ಅಥವಾ ಸರ್ಕಾರಿ ಸೇವೆಯಲ್ಲಿ ಅರ್ಹ ಅಭ್ಯರ್ಥಿಗಳಿದ್ದಾಗ್ಯೂ ನಿವೃತ್ತಿ ಹೊಂದಿದ ಸರ್ಕಾರಿ ನೌಕರರನ್ನು ನಿರ್ದೇಶಕರನ್ನಾಗಿ ನೇಮಿಸಲು ತರಾತುರಿಯಲ್ಲಿ ಬೈಲಾ ತಿದ್ದುಪಡಿ ಮಾಡಲು ಹೊರಟಿರುವ ಸರ್ಕಾರದ ಉದ್ದೇಶವೇನು ?

## ಇಂದ್ರಧನುಷ್ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೯೦೯ (೨೧೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿವಿಧ ರೋಗದ ಸೋಂಕಿನಿಂದ ರಕ್ಷಣೆ ನೀಡಲು ಮಕ್ಕಳಿಗೆ ಸಮೂಹ ಲಸಿಕೆ ಹಾಕುವ ಕೇಂದ್ರ ಸರ್ಕಾರದ ಪ್ರಾಯೋಜಿತ ಇಂದ್ರಧನುಷ್ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಯೋಚಿಸಿದೆಯೇ ;

(ಆ) ಇದ್ದಲ್ಲಿ, ಈ ಯೋಜನೆಯನ್ನು ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಆರಂಭಿಸಲಾಗುವುದು ? (ಈ ಯೋಜನೆಯ ರೂಪು-ರೇಷೆಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

## ಎಂಡೋಸಲ್ಫಾನ್ ಪೀಡಿತರಿಗೆ ಪುನರ ವಸತಿ ಕೇಂದ್ರಗಳು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೯೧೦ (೨೧೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಲ್ಲಿ ಎಂಡೋಸಲ್ಫಾನ್ ಪೀಡಿತ ಪ್ರದೇಶಗಳಲ್ಲಿ ಖಾಯಿಲೆಗೆ ಒಳಗಾದ ಜನರಿಗೆ ಪುನರ್‌ವಸತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಈ ಸೌಲಭ್ಯ ಎಲ್ಲರಿಗೂ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಎಲ್ಲಾ ಖಾಯಿಲೆ ಪೀಡಿತರಿಗೆ ಈಗಿರುವ ಕೆಲವೇ ಪುನರ್‌ವಸತಿ ಕೇಂದ್ರಗಳು ಸಾಕಾಗದಿರುವುದರಿಂದ ಸಂಚಾರಿ ಕ್ಲಿನಿಕ್‌ಗಳನ್ನು ಆರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿನ ಅವ್ಯವಹಾರಗಳ ಬಗ್ಗೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೯೧೧ (೨೨೦೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿನ ಔಷಧಿಗಳ ಖರೀದಿಯಲ್ಲಿ ಅವ್ಯವಹಾರ ನಡೆಸಿದ್ದಾರೆಂದು ಸಾರ್ವಜನಿಕರು

ನೀಡಿದ ದೂರಿನ ಮೇಲೆ ಲೋಕಾಯುಕ್ತರಿಂದ ನಡೆಸಲಾದ ತನಿಖಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ;

(ಆ) ಹಾಗಾದರೆ, ಆ ವರದಿಯಲ್ಲಿನ ಮುಖ್ಯಾಂಶಗಳೇನು ; (ವಿವರ ನೀಡುವುದು)

(ಇ) ಸದರಿ ಅವ್ಯವಹಾರಗಳಲ್ಲಿ ಭಾಗಿಯಾದ ಅಧಿಕಾರಿಗಳ ಸಂಪೂರ್ಣ ವಿವರಗಳನ್ನು ನೀಡುವುದು ;

(ಈ) ನಿರ್ದೇಶಕರ ಆಯ್ಕೆ ಸಂದರ್ಭದಲ್ಲಿ ಆಯ್ಕೆ ಸಮಿತಿಯು ನಿಯಮ ಬಾಹಿರವಾಗಿ ಅನುಮೋದನೆ ನೀಡಿರುವ ಬಗ್ಗೆ ಸಾರ್ವಜನಿಕರಿಂದ ಬಂದ ದೂರಿನ ಮೇಲೆ ಸರ್ಕಾರದಿಂದ ತನಿಖೆ ನಡೆಸಲಾಗಿದೆಯೇ ;

(ಉ) ಸದರಿ ತನಿಖಾ ವರದಿಯ ಮುಖ್ಯಾಂಶಗಳೇನು ; (ವಿವರ ನೀಡುವುದು)

(ಊ) ಔಷಧಿಗಳ ಖರೀದಿಯ ಅವ್ಯವಹಾರಗಳು ಹಾಗೂ ನಿರ್ದೇಶಕರ ಆಯ್ಕೆ ಸಂದರ್ಭದಲ್ಲಿ ಆದ ನಿಯಮ ಉಲ್ಲಂಘನೆಗಳ ಬಗ್ಗೆ ಸರ್ಕಾರ ಇದುವರೆವಿಗೂ ಕೈಗೊಂಡ ಕ್ರಮಗಳೇನು ;

(ಋ) ಸದರಿ ಅವ್ಯವಹಾರಗಳು ಹಾಗೂ ಆಯ್ಕೆಯಲ್ಲಾದ ನಿಯಮ ಉಲ್ಲಂಘನೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ವಿಳಂಬ ನೀತಿಗೆ ಕಾರಣಗಳೇನು ?

## ಎಚ್–೧ ಎನ್–೧ ಖಾಯಿಲೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೧೧(A)(೨೧೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಚ್–೧ ಎನ್–೧ ಖಾಯಿಲೆಯ ಲಕ್ಷಣಗಳೇನು ;

(ಆ) ರಾಜ್ಯದಲ್ಲಿ ಎಚ್–೧ ಎನ್–೧ ಸೋಂಕಿಗೆ ತುತ್ತಾದ ರೋಗಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳು)

(ಇ) ಎಚ್–೧ ಎನ್–೧ ಖಾಯಿಲೆಯಿಂದ ಸಾವನ್ನಪ್ಪಿದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳು)

(ಈ) ಎಚ್–೧ ಎನ್–೧ ಖಾಯಿಲೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ಹಾಗೂ ಅನುದಾನವನ್ನು ನೀಡಲಾಗುತ್ತಿದೆಯೇ ?

## ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಬಗ್ಗೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೧೨ (೨೨೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು).

(ಆ) ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಈ) ಸದರಿ ಶಾಲೆಗಳಿಗೆ ಅಗತ್ಯವಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು).

(ಊ) ಇದುವರೆವಿಗೂ ಎಷ್ಟು ಖಾಯಂ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ;

(ಋ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ?

## ಹೊಸ ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪಿಸುವ ಬಗ್ಗೆ.

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೧೯೧೩ (೨೧೮೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫-೧೬ರ ಶೈಕ್ಷಣಿಕ ವರ್ಷದಿಂದ ಯಾವ ಜಿಲ್ಲೆಗಳಲ್ಲಿ ವೈದ್ಯಕೀಯ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲಾಗುವುದು ;

(ಆ) ಹೊಸದಾಗಿ ಪ್ರಾರಂಭವಾಗಲಿರುವ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಕಾಲೇಜು ಕಟ್ಟಡ, ಆಸ್ಪತ್ರೆ, ವಸತಿ ನಿಲಯ ಮುಂತಾದ ಮೂಲಭೂತ ಸೌಲಭ್ಯಗಳನ್ನು ನಿರ್ಮಿಸುವ ಕಾರ್ಯ ಪೂರ್ಣಗೊಂಡಿದೆಯೆ ;

(ಇ) ಎಂ.ಸಿ.ಐ ದೆಹಲಿಯವರು (Medical Council of India) ಎಷ್ಟು ವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಲು ಅನುಮತಿ ನೀಡಿರುವರು ? (ವಿವರಣೆ ನೀಡಿ)

## ಗದಗ ನಗರದಲ್ಲಿ ಹೊಸ ಬಸ್ ನಿಲ್ದಾಣದ ಕಟ್ಟಡ.

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೯೧೪ (೨೧೮೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ನಗರದಲ್ಲಿ ಹಳೇ ಬಸ್‌ನಿಲ್ದಾಣದ ಕಟ್ಟಡವನ್ನು ತೆಗೆದುಹಾಕಿ, ಹೊಸದಾಗಿ ಕಟ್ಟಡ ನಿರ್ಮಾಣ ಮಾಡುವ ಯೋಜನೆ ಇಲಾಖೆ ಸಿದ್ದಪಡಿಸಿದೆಯೆ ;

(ಆ) ಈ ನಿರ್ಣಯವನ್ನು ಯಾವಾಗ ಕೈಗೊಳ್ಳಲಾಗಿದೆ ;

(ಇ) ಹೊಸ ಕಟ್ಟಡ ನಿರ್ಮಾಣದ ಅಂದಾಜು ವೆಚ್ಚ ಎಷ್ಟು ?

## ವಾಯುವ್ಯ ರಾಜ್ಯ ಸಾರಿಗೆ ಸಂಸ್ಥೆಯಿಂದ ಸಾರ್ವಜನಿಕರಿಗೆ ಉತ್ತಮ ವ್ಯವಸ್ಥೆಯ ಬಗ್ಗೆ.

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೯೧೫ (೨೧೮೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ವಾಯುವ್ಯ ರಾಜ್ಯ ಸಾರಿಗೆ ಸಂಸ್ಥೆ ಘಟಕದಿಂದ ಸಾರ್ವಜನಿಕರಿಗೆ ಉತ್ತಮ ಸಾರಿಗೆ ವ್ಯವಸ್ಥೆ ಕಲ್ಪಿಸುವಲ್ಲಿ ವಿಫಲವಾಗಿರುವುದು ನಿಜವಲ್ಲವೆ ;

(ಆ) ವಾಯುವ್ಯ ರಾಜ್ಯ ಸಾರಿಗೆ ಸಂಸ್ಥೆ ಮುಂಡರಗಿ ಘಟಕದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹಳೆಯ ಬಸ್‌ಗಳನ್ನು ಓಡಿಸುತ್ತಿರುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೆ ;

(ಇ) ಇದರಿಂದಾಗಿ ಮುಂಡರಗಿ ತಾಲ್ಲೂಕಿನ ಜನರು ಖಾಸಗಿ ಟಂಟಂ ಮುಂತಾದ ವಾಹನಗಳ ಮೇಲೆ ಅವಲಂಬಿತರಾಗಿದ್ದು, ಇದರಿಂದ ಸಾರಿಗೆ ಸಂಸ್ಥೆಗೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ವಿಜಯಪುರ, ಬಾಗಲಕೋಟೆ ಮತ್ತು ವಿಜಯಪುರ ಸಾರಿಗೆ ವಿಭಾಗಗಳ ಕುರಿತು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೯೧೭ (೨೧೮೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕೋಡಿ ಜಿಲ್ಲೆಗಳಲ್ಲಿ ಎಷ್ಟು ಸಾರಿಗೆ ವಿಭಾಗಗಳಿವೆ; ಅವು ಯಾವುವು ;

(ಆ) ಇಲ್ಲಿರುವಂತಹ ಹುದ್ದೆವಾರು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು, ಡಿಪೋವಾರು ವಿವರ ನೀಡಿ)

(ಇ) ಇದರಲ್ಲಿ ಎಷ್ಟು ಜನ ಸಿಬ್ಬಂದಿಗೆ ವಸತಿ ಗೃಹ (ಕ್ವಾರ್ಟರ್ಸ್) ಒದಗಿಸಲಾಗಿದೆ ;

(ಈ) ಎಷ್ಟು ವಸತಿ ಗೃಹಗಳ ನಿರ್ಮಾಣದ ಪ್ರಸ್ತಾವನೆ ಇದೆ ; (ಡಿಪೋವಾರು ವಿವರ ನೀಡಿ)

(ಉ) ಎಷ್ಟು ವಸತಿ ಗೃಹಗಳ ದುರಸ್ಥಿಗೆ ಪ್ರಸ್ತಾವನೆ ಇದೆ ?

## ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಯೋಜನೆಯಡಿ ಒದಗಿಸಿದ ಹಣ ಹಾಗೂ ಕಾಮಗಾರಿ.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೯೧೭ (೨೧೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆಯಡಿಯಲ್ಲಿ ಕಳೆದ ಎರಡು ವರ್ಷದಲ್ಲಿ ಎಲ್ಲಾ ಇಲಾಖೆಗಳಿಂದ ಒದಗಿಸಿರುವ ಹಣದ ಪ್ರತಿಯೊಂದರ ವಿವರ ಹಾಗೂ ಕಾಮಗಾರಿಗಳ ವಿವರ ನೀಡುವುದು ;

(ಆ) ಈ ಕಾಮಗಾರಿಗಳ ಸ್ಥಿತಿಗತಿ ವರದಿ ನೀಡುವುದು ;

(ಇ) ಈ ಹಣಕಾಸಿನ ವರ್ಷದಲ್ಲಿ ಬಾಕಿ ಉಳಿಯುವ ಹಣವೆಷ್ಟು ?

## ವಿದ್ಯಾರ್ಥಿನಿಲಯಗಳ ವಿವರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೯೧೮ (೨೧೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ತಾಲ್ಲೂಕಿನಲ್ಲಿರುವ ಎಸ್.ಎಸ್.ಎಲ್.ಸಿ ಪೂರ್ವ ಹಾಗೂ ಎಸ್.ಎಸ್.ಎಲ್.ಸಿ ನಂತರದ ಹಾಸ್ಟೆಲ್‌ಗಳು ಎಷ್ಟು

ಮತ್ತು ಯಾವುವು; (ಅವುಗಳಲ್ಲಿ ಚಾಲ್ತಿ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾತಿ ಪಡೆದಿರುವ ಎಲ್ಲಾ ವಿದ್ಯಾರ್ಥಿಗಳ ಹೆಸರು, ಪ್ರವೇಶಾತಿಗೆ ಪಾಲಿಸಿರುವ ಅರ್ಹತೆಯ ವಿವರ ಸಂಪೂರ್ಣವಾಗಿ ನೀಡಿ)

(ಆ) ನಿಲಯದ ಪ್ರೌಢ ಶಾಲೆಯಲ್ಲಿ ಕಾನೂನು ಉಲ್ಲಂಘನೆಯ ಪಕ್ಷಪಾತದ ದೂರುಗಳು ಏನಾದರೂ ಬಂದಿದೆಯೇ ? (ವಿವರ ನೀಡಿ)

## ಸಾರಿಗೆ ಇಲಾಖೆಯಲ್ಲಿನ ಹುದ್ದೆಗಳ ವಿವರಣೆ ಕುರಿತು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೯೧೯(೨೧೮೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರಿಗೆ ಇಲಾಖೆಯ ಅಡಿ ಸೃಷ್ಟಿಯಾಗಿರುವ ಒಟ್ಟು ಹುದ್ದೆಗಳು ಎಷ್ಟು ಮತ್ತು ಅವು ಯಾವುವು ; (ವೃಂದವಾರು ವಿವರ ನೀಡಿ)

(ಆ) ಇದರಲ್ಲಿ ನೇರ ನೇಮಕಾತಿಗಾಗಿ ಇರುವ ಹುದ್ದೆಗಳು ಎಷ್ಟು ಪದೋನ್ನತಿಗಾಗಿ ಇರುವ ಹುದ್ದೆಗಳು ಎಷ್ಟು ;

(ಇ) ನೇರ ನೇಮಕಾತಿಯಾಗದೇ ಎಷ್ಟು ವರ್ಷಗಳಾಯಿತು; ಈಗ ಖಾಲಿ ಇರುವ ಹುದ್ದೆಗಳು ಎಷ್ಟು ; (ಹುದ್ದೆವಾರು ವಿವರ ನೀಡಿ)

(ಈ) ನಿಯಮ ೩೨ರ ಅಡಿ ಪ್ರಭಾರದಲ್ಲಿರುವ ಹುದ್ದೆಗಳು ಎಷ್ಟು ; ಅವು ಯಾವುವು ? (ಹುದ್ದೆವಾರು ವಿವರ ನೀಡಿ)

## ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಕೊಡುವ ಬಗ್ಗೆ.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೯೨೦ (೨೧೮೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಮಂಜೂರು ಮಾಡುವಲ್ಲಿ ಅನುದಾನ ರಹಿತ ಸಂಸ್ಥೆಗಳಿಗೆ ಮಂಜೂರು ಮಾಡಲು ಅವಕಾಶವಿರದೇ ಇರುವುದು ಸರಿಯೇ ;

(ಆ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಡಿ ಲೋಕೋಪಯೋಗಿ ಇಲಾಖೆ, ಜಿಲ್ಲಾ ಪಂಚಾಯತ್ ಇಂಜಿನಿಯರ್ ವಿಭಾಗ, KRIDL ನಿರ್ಮಿತಿ ಕೇಂದ್ರ ಕಾಮಗಾರಿ ಕೈಗೊಳ್ಳಲು ಇರುವ ನಿಯಮಗಳೇನು ;

(ಇ) ಶಾಸಕರು ಕಾಮಗಾರಿ ಸೂಚಿಸಿ ಪತ್ರ ಕೊಟ್ಟ ನಂತರವೂ ವಿಪರೀತ ವಿಳಂಬವಾಗುತ್ತಿರುವುದು ಅನುಷ್ಠಾನದಲ್ಲಿ ಉದಾಸೀನ ತೋರುತ್ತಿರುವುದು, ಕಾಮಗಾರಿ ನಿರ್ವಹಣೆಗೆ ರಾಜಸ್ವ ತೆರಿಗೆಗಾಗಿ ಹಣ ಕಡಿತಗೊಳಿಸುವುದರಿಂದ ಜನ ಹತಾಶರಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಇದನ್ನು ಸರಿಪಡಿಸಲು ಸರ್ಕಾರದ ಕ್ರಮ ಏನು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಲಭ್ಯವಿರುವ ಸೌಲಭ್ಯದ ಬಗ್ಗೆ.

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೨೧ (೨೧೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮುಖ್ಯವಾಗಿ ಯುವಕರ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸುತ್ತಿರುವುದು ನಿಜವೇ ;

(ಆ) ಆಗಿದ್ದರೆ, ಅಂತಹ ಸೌಲಭ್ಯಗಳು ಯಾವುವು; ಅವುಗಳನ್ನು ಪಡೆದುಕೊಳ್ಳಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಾರ್ಗಸೂಚಿಗಳನ್ನು ರೂಪಿಸುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೯೨೨ (೨೧೯೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಾರ್ಗಸೂಚಿಗಳನ್ನು ರೂಪಿಸುವಾಗ ಶಾಸಕರ ಗಮನಕ್ಕೆ ತಂದು ರೂಪಿಸಲಾಗುತ್ತದೆಯೇ ;

(ಆ) ಸಾರ್ವಜನಿಕರಿಗೆ ಹೆಚ್ಚಿಗೆ ಉಪಯೋಗವಾಗುವ ಹಾಗೂ ಅಂತರ್ಜಲ ಹೆಚ್ಚಿಸುವ ಕೆರೆ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವುದನ್ನು ಯಾವಾಗಿನಿಂದ ಸ್ಥಗಿತಗೊಳಿಸಲಾಗಿದೆ ;

(ಇ) ಈ ಕಾಮಗಾರಿಗಳನ್ನು ಪುನಃ ಮಾರ್ಗಸೂಚಿಯಲ್ಲಿ ಸೇರಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ ;

(ಈ) ಶಿಕ್ಷಣ ಸಂಸ್ಥೆಗಳಿಗೆ ಅನುಕೂಲವಾಗುವ ಕಂಪ್ಯೂಟರ್ ಪೂರೈಕೆ ಹಾಗೂ ಗ್ರಂಥಾಲಯಗಳಿಗೆ ಪುಸ್ತಕ ಪೂರೈಸುವುದನ್ನು ಮಾರ್ಗಸೂಚಿಗಳಲ್ಲಿ ಸೇರಿಸಲು ಕ್ರಮ ಕೈಗೊಳ್ಳಲಾಗುತ್ತದೆಯೇ ;

(ಉ) ಹಾಗಿದ್ದಲ್ಲಿ, ಮಾರ್ಗಸೂಚಿಗಳಿಗೆ ಯಾವಾಗ ತಿದ್ದುಪಡಿ ತರಲಾಗುವುದು ?

## ಶಾಸಕರ ಪ್ರದೇಶಾಭಿವೃದ್ಧಿ ಯೋಜನೆ ಕುರಿತು.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೯೨೩ (೨೧೯೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ೨೦೧೫-೧೬ನೇ ಸಾಲಿಗೆ ನಿಗಧಿಪಡಿಸಿದ ಅನುದಾನ ಎಷ್ಟು ;

(ಆ) ಫೆಬ್ರುವರಿ ಅಂತ್ಯದವರೆಗೆ ಈ ಯೋಜನೆಯಡಿ ಪ್ರತಿಯೊಬ್ಬ ಶಾಸಕರಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಇ) ೨೦೧೫-೧೬ರ ಫೆಬ್ರುವರಿ ಅಂತ್ಯದವರೆಗೆ ಒಟ್ಟು ಖರ್ಚಾದ ಅನುದಾನ ಎಷ್ಟು ? (ವಿಧಾನಸಭಾ ಕ್ಷೇತ್ರವಾರು/ವಿಧಾನ ಪರಿಷತ್ ಸದಸ್ಯವಾರು ಮಾಹಿತಿ ಕೊಡುವುದು)

## ನರ್ಸಿಂಗ್ ಕಾಲೇಜುಗಳ ಪ್ರವೇಶ ಪ್ರಕ್ರಿಯೆಯಲ್ಲಿ ನ್ಯೂನ್ಯತೆಗಳಾಗಿರುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೯೨೪ (೨೧೯೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ವ್ಯಾಪ್ತಿಯ ನರ್ಸಿಂಗ್ ಕಾಲೇಜುಗಳಲ್ಲಿ ೨೦೧೩-೧೪ನೇ ಸಾಲಿನ ಪ್ರವೇಶ ಪ್ರಕ್ರಿಯೆಯಲ್ಲಿ ನ್ಯೂನ್ಯತೆಗಳಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಮಾನ್ಯ ಕರ್ನಾಟಕ ಉಚ್ಚನ್ಯಾಯಾಲದ ನಿರ್ದೇಶನದಂತೆ ವಿಚಾರಣಾ ಸಮಿತಿಯನ್ನು ಯಾವಾಗ ರಚಿಸಲಾಯಿತು ;

(ಇ) ಈ ಸಮಿತಿಯು ಯಾವ ದಿನಾಂಕದಂದು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ ;

(ಈ) ವರದಿಯನ್ನು ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಸಿಂಡಿಕೇಟ್‌ನಲ್ಲಿ ಮಂಡಿಸಲಾಗಿದೆಯೇ ;

(ಉ) ಈ ಕಾನೂನು ಬಾಹಿರ ಪ್ರವೇಶ ಪ್ರಕ್ರಿಯೆ ಕುರಿತು ಸರ್ಕಾರ ಅಥವಾ ವಿಶ್ವವಿದ್ಯಾಲಯ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿ ಕೊರತೆ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೯೨೫ (೨೧೯೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಕಾಲೇಜುಗಳಿಗೆ ಸರ್ಕಾರದಿಂದ ಮಂಜೂರಾದ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ವಿವರವಾದ ಮಾಹಿತಿ ಕೊಡುವುದು).

(ಇ) ಆ ಪೈಕಿ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಬೋಧಕ ಹುದ್ದೆಗಳು ಖಾಲಿ ಇರುವುದರಿಂದ ಭಾರತೀಯ ವೈದ್ಯ ಮಂಡಳಿಯ ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಯನ್ನು ಕಡಿತಗೊಳಿಸುತ್ತಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಕಿಯೋನಿಕ್ಸ್ ಸಂಸ್ಥೆಯ ಕಾರ್ಯಚಟುವಟಿಕೆಗಳ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೯೨೬ (೨೧೯೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಿಯೋನಿಕ್ಸ್ ಸಂಸ್ಥೆಯ ಯಾವಾಗ ಆರಂಭವಾಯಿತು ;

(ಆ) ಈ ಸಂಸ್ಥೆಯು ಉಪನಿಯಮಗಳನ್ವಯ ಯಾವ ಯಾವ ಕೆಲಸಗಳನ್ನು ನಿರ್ವಹಿಸಬಹುದು ; (ಬೈಲಾ ಪ್ರತಿಯನ್ನು ನೀಡುವುದು)

(ಇ) ಕಿಯೋನಿಕ್ಸ್ ಸಂಸ್ಥೆಯು ಸರ್ಕಾರದಿಂದ ಹಾಗೂ ಇತರೆಯವರಿಂದ ಪಡೆದ ಕೆಲಸಗಳನ್ನು ಬೇರೆಯವರಿಗೆ ಹೊರಗುತ್ತಿಗೆ ನೀಡಲು ಉಪನಿಯಮಗಳಲ್ಲಿ ಅವಕಾಶವಿದೆಯೇ ;

(ಈ) ಇದ್ದಲ್ಲಿ, ಇಲ್ಲಿಯವರೆಗೆ ಯಾವ ಯಾವ ಸಂಸ್ಥೆ ಹಾಗೂ ವ್ಯಕ್ತಿಗಳಿಗೆ ಸಂಸ್ಥೆ ಪ್ರಾರಂಭವಾದಾಗಿನಿಂದ ಹೊರಗುತ್ತಿಗೆ ನೀಡಿದೆ ;

(ಉ) ಇಲ್ಲಿಯವರೆಗೆ ಸರ್ಕಾರದಿಂದ ಸಂಸ್ಥೆಯು ಪಡೆದ ಕೆಲಸಗಳಾವುವು ; ಮಂಜೂರಾದ ಅನುದಾನ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಊ) ಈ ಕೆಲಸಗಳನ್ನು ಹೊರಗುತ್ತಿಗೆ ನೀಡಿದಾಗ ಅನುಷ್ಠಾನಗೊಳಿಸುವ ಸಂಸ್ಥೆ ಹಾಗೂ ವ್ಯಕ್ತಿಗಳಿಗೆ ಕಿಯೋನಿಕ್ಸ್ ನೀಡಿದ ಹಣವೆಷ್ಟು ? (ವರ್ಷವಾರು ಮಾಹಿತಿ ನೀಡುವುದು)

## ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೨೭ (೨೨೪೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯ ಕುಂದಾಪುರ ವಿಧಾನಸಭಾ ಕ್ಷೇತ್ರಕ್ಕೆ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆ ಎಂದು ಪ್ರಾರಂಭವಾಯಿತು ; ಮತ್ತು ಈ ವಸತಿ ಶಾಲೆಗೆ ಎಷ್ಟು ಎಕರೆ ಜಾಗವನ್ನು ಯಾವ ದಿನಾಂಕದಂದು ಯಾವ ಗ್ರಾಮದಲ್ಲಿ ಮಂಜೂರು ಮಾಡಲಾಗಿದೆ ;

(ಆ) ಉಡುಪಿ ಜಿಲ್ಲೆಯ ಕುಂದಾಪುರ ವಿಧಾನಸಭಾ ಕ್ಷೇತ್ರದಲ್ಲಿರುವ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದು ನಿಜವೇ ; ನಿಜವಾದಲ್ಲಿ, ಮಾಸಿಕ ನೀಡುತ್ತಿರುವ ಬಾಡಿಗೆ ಎಷ್ಟು ;

(ಇ) ಕುಂದಾಪುರ ವಿಧಾನಸಭಾ ಕ್ಷೇತ್ರದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಅವಶ್ಯಕವಿರುವ ಎಲ್ಲಾ ಮೂಲಭೂತ ವ್ಯವಸ್ಥೆಗಳು ಮಂಜೂರಾಗಿದ್ದರೂ ಸಹ ಇಲ್ಲಿಯ ತನಕ ಕಟ್ಟಡ ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು ?

# ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ವಿದ್ಯುತ್ ಸೌಲಭ್ಯ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೨೮ (೨೨೪೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ವಿದ್ಯುತ್ ಸೌಲಭ್ಯ ವಂಚಿತ ಉಪಗ್ರಾಮಗಳಿಗೆ ಮಾರ್ಗ ವಿಸ್ತರಣೆಗೆ ಮಂಜೂರಾದ ಅನುದಾನವೆಷ್ಟು ; ಹಾಗೂ ಮಾರ್ಗ ವಿಸ್ತರಣೆಗೆ ಒಳಪಟ್ಟ ಉಪಗ್ರಾಮಗಳು ಯಾವುವು ; (ವಿಧಾನಸಭಾವಾರು ವಿವರ ನೀಡುವುದು)

(ಆ) ಸದರಿ ಸಾಲಿನಲ್ಲಿ ಶಾಸಕರ ಸ್ಥಳೀಯು ಪ್ರದೇಶಾಭಿವೃದ್ಧಿ ಯೋಜನೆಯಡಿ ವಿದ್ಯುತ್ ಸೌಲಭ್ಯ ವಂಚಿತ ಉಪಗ್ರಾಮಗಳಿಗೆ ಮಾರ್ಗ ವಿಸ್ತರಣೆಗೆ ಅವಕಾಶ ನಿಲುಗಡೆಗೊಳಿಸಿರುವುದು ನಿಜವೇ ; ನಿಜವಾಗಿದ್ದಲ್ಲಿ ಕಾರಣವೇನು ?

## ಉಡುಪಿ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೨೯ (೨೨೦೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಹಿಂದುಳಿದ ವರ್ಗಗಳ ಇಲಾಖೆಯ ವಿದ್ಯಾರ್ಥಿ ನಿಲಯ (ಹಾಸ್ಟೆಲ್) ಗಳ ಸಂಖ್ಯೆ ಎಷ್ಟು; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಹಿಂದುಳಿದ ವರ್ಗಗಳ ಇಲಾಖೆಯ ವಿದ್ಯಾರ್ಥಿ ನಿಲಯ (ಹಾಸ್ಟೆಲ್)ಗಳಿಗೆ ಮಾಸಿಕ ನೀಡುತ್ತಿರುವ ಬಾಡಿಗೆ ಎಷ್ಟು ; ಇಂತಹ ಬಾಡಿಗೆ ಕಟ್ಟಡದಲ್ಲಿ ಕಾಯನಿರ್ವಹಿಸುತ್ತಿರುವ ನಿಲಯಗಳಿಗೆ ಸ್ಥಳ ಮಂಜೂರಾತಿಯಾಗಿದೆಯೇ ಸ್ಥಳ ಮಂಜೂರಾತಿಯಾಗಿದ್ದಲ್ಲಿ ಯಾವ ಗ್ರಾಮದಲ್ಲಿ ಎಷ್ಟು ಎಕರೆ ಸ್ಥಳ ಮಂಜೂರಾಗಿದೆ ; ಇಲ್ಲವಾದಲ್ಲಿ ಕಾರಣವೇನು ; ಮತ್ತು ಇವುಗಳಿಗೆ ಸ್ಥಳ ಮಂಜೂರು ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ; (ತಾಲ್ಲೂಕುವಾರು, ನಿಲಯವಾರು, ಸರ್ವೇನಂಬರ್‌ನೊಂದಿಗೆ ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ (ಹಾಸ್ಟೆಲ್)ಗಳಿಗೆ ಸ್ಥಳ ಮಂಜೂರಾತಿಯಾಗಿದ್ದಲ್ಲಿ ಕಟ್ಟಡ ನಿರ್ಮಾಣಕ್ಕೆ ಮಂಜೂರಾದ ಅನುದಾನವೆಷ್ಟು ; ಕಟ್ಟಡ ಪೂರ್ಣಗೊಂಡ ಮತ್ತು ಪೂರ್ಣಗೊಳ್ಳಲು ಬಾಕಿ ಇರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಅವು ಯಾವುವು ? (ತಾಲ್ಲೂಕುವಾರು, ನಿಲಯವಾರು ವಿವರ ನೀಡುವುದು)

## ಉಡುಪಿಯಲ್ಲಿ ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣ ನಿರ್ಮಿಸುವುದು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೩೦ (೨೨೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಉಡುಪಿ ಜಿಲ್ಲೆಯನ್ನು ಹೊರತುಪಡಿಸಿ ಉಳಿದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ, ಕೆ.ಎಸ್.ಆರ್.ಟಿ.ಸಿ., ಬಸ್ಸು ನಿಲ್ದಾಣ ನಿರ್ಮಿಸದಿರಲು ಕಾರಣವೇನು ;

(ಆ) ಉಡುಪಿಯಲ್ಲಿ ಕೆ.ಎಸ್.ಆರ್.ಟಿ.ಸಿ., ಬಸ್ಸು ನಿಲ್ದಾಣವನ್ನು ನಿರ್ಮಿಸಲು ಸ್ಥಳ ಕಾಯ್ದಿರಿಸಲಾಗಿದೆಯೇ ; ಕಾಯ್ದಿರಿಸಲಾಗಿದ್ದಲ್ಲಿ, ಎಷ್ಟು ಎಕರೆ ಸ್ಥಳವನ್ನು ಯಾವ ಸರ್ವೆ ನಂಬರಿನಲ್ಲಿ ಎಲ್ಲಿ ಕಾಯ್ದಿರಿಸಲಾಗಿದೆ ; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಇಲ್ಲವಾದಲ್ಲಿ ಕಾರಣವೇನು ;

(ಇ) ಉಡುಪಿಯಲ್ಲಿ ಖಾಸಗಿ ಬಸ್ಸು ಮಾಲೀಕರ ಒತ್ತಡದಿಂದಾಗಿ ಕೆ.ಎಸ್.ಆರ್.ಟಿ.ಸಿ., ಬಸ್ಸು ನಿಲ್ದಾಣವಾಗಿಲ್ಲ ಎನ್ನುವವರಿಗೆ ಸರ್ಕಾರದಿಂದ ಭರವಸೆ ನೀಡಲಾಗುವುದೇ ?

## ಕದ್ರಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ನಿಲಯ ಸ್ಥಾಪಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೯೩೧ (೨೨೦೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರು ನಗರದ ಕದ್ರಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಅಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಹೆಚ್ಚುವರಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಹಾಗಿದ್ದಲ್ಲಿ, ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಕೊಂಡಿದೆ ;

(ಆ) ಸರ್ಕಾರಿ ಸುತ್ತೋಲೆಯಂತೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಎಲ್ಲಾ ವರ್ಗದ ವಿದ್ಯಾರ್ಥಿ ಹಾಸ್ಟೆಲ್ ನಿರ್ಮಾಣಕ್ಕಾಗಿ ನಿವೇಶನ ಒದಗಿಸಲು ಆದೇಶ ಮಾಡಿದ್ದು, ಹಾಸ್ಟೆಲ್ ಕಟ್ಟಡ ಇಲ್ಲದೇ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾದ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವರ್ಗದ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚುವರಿ ವಿದ್ಯಾರ್ಥಿಗಳನ್ನು ಸೇರ್ಪಡೆಗೊಳಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

**ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಭೋಜನಾವೆಚ್ಚ ನೀಡುವ ಬಗ್ಗೆ.**

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೯೩೨ (೨೨೦೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಭೋಜನಾವೆಚ್ಚ ರೂ. ೧೧೦೦/- ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ರೂ. ೧೦೦೦/- ದಿಂದ ಈ ಮೊತ್ತವನ್ನು ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ರೂ.೨೦೦೦/- ನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ರೂ. ೨೫೦೦/- ನ್ನು ನಿಗದಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ವಿದ್ಯಾರ್ಥಿ ನಿಲಯಗಳಿಗೆ ಪ್ರಸ್ತುತ ವಾರ್ಷಿಕ ೧೨ ಅಡುಗೆ ಅನಿಲ ಸಿಲೆಂಡರ್‌ಗಳನ್ನು ಸಬ್ಸಿಡಿ ದರದಲ್ಲಿ ಪೂರೈಕೆ ಮಾಡುತ್ತಿದ್ದು, ಅವಶ್ಯವಿರುವ ಎಲ್ಲಾ ಅನಿಲ ಅಡುಗೆ ಸಿಲೆಂಡರ್‌ಗಳನ್ನು ಸಬ್ಸಿಡಿ ದರದಲ್ಲಿ ಪೂರೈಸಲು ಇಲಾಖೆ ಕ್ರಮ ಕೈಗೊಳ್ಳುವುದೇ ;

(ಇ) ರಾಜ್ಯದಲ್ಲಿ ಜಿಲ್ಲೆಗಳಲ್ಲಿ ಎಷ್ಟು ವಿದ್ಯಾರ್ಥಿಗಳನ್ನು ಮೆಟ್ರಿಕ್ ಪೂರ್ವ ಮತ್ತು ನಂತರ ಹಾಸ್ಟೆಲ್‌ಗಳಲ್ಲಿ ಸೇರ್ಪಡೆಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಿದ್ಯಾರ್ಥಿನಿಲಯಗಳಿಗೆ ಪೂರೈಸುತ್ತಿರುವ ಅಕ್ಕಿಯು ಕಳಪೆ ಗುಣಮಟ್ಟದ್ದಾಗಿದ್ದು ಕಲ್ಲು ಮತ್ತು ವಾಸನೆಯಿಂದ ಕೂಡಿರುವುದರ ಬಗ್ಗೆ ದೂರುಗಳಿದ್ದು ಇದನ್ನು ಸರಿಪಡಿಸಲಾಗುವುದೇ ?

## ರಾಜ್ಯದ ಪರಿಶಿಷ್ಟ ಜಾತಿ/ ಪಂಗಡ ವಿದ್ಯಾರ್ಥಿ ನಿಲಯಗಳಲ್ಲಿ ವಾರ್ಡ್‌ನ ಹುದ್ದೆಯ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೯೩೩ (೨೨೦೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವಿದ್ಯಾರ್ಥಿ ನಿಲಯಗಳಲ್ಲಿ ವಾರ್ಡನ್ ಹುದ್ದೆ ಹಾಗೂ ಅಡುಗೆ ಸಿಬ್ಬಂದಿ ಹುದ್ದೆ ಖಾಲಿ ಇರುವುದರಿಂದ ವಿದ್ಯಾರ್ಥಿ ನಿಲಯಗಳು ಸರಿಯಾಗಿ ನಿರ್ವಹಣೆ ಮಾಡಲಾಗದೇ ಈ ಬಗ್ಗೆ ದೂರುಗಳು ಇದ್ದು, ಭರ್ತಿ ಮಾಡಲು ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ಸಮಾಜ ಕಲ್ಯಾಣ ಇಲಾಖೆಯು ಜಿಲ್ಲಾ ಪಂಚಾಯತ್ ಅಧೀನದಲ್ಲಿರುವುದರಿಂದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ

ಎಲ್ಲಾ ಸಮಿತಿಯ ಅಧಿಕಾರಗಳನ್ನು ಮುಖ್ಯ ನಿರ್ವಹಣಾಧಿಕಾರಿಗೆ ವರ್ಗಾಯಿಸಲು ಸರ್ಕಾರ ಸೂಕ್ತ ಕ್ರಮಕೈಗೊಳ್ಳುವುದೇ ;

(ಇ) ಪ್ರಸ್ತುತ ಈ ಕ್ರಮದಿಂದ ಆಡಳಿತಾತ್ಮಕವಾಗಿ ತೊಂದರೆ ಎದುರಿಸುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ವಿದ್ಯಾರ್ಥಿಗಳ ಆಯ್ಕೆ ಸಿಬ್ಬಂದಿಗಳ ನೇಮಕ ವರ್ಗಾವಣೆ ಅಧಿಕಾರವನ್ನು ಮುಖ್ಯ ನಿರ್ವಹಣಾಧಿಕಾರಿಗೆ ನೀಡಿರುವುದರಿಂದ ಆಡಳಿತಾತ್ಮಕವಾಗಿ ಹೆಚ್ಚು ಅನುಕೂಲವಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರದ ಅಭಿಪ್ರಾಯಗಳೇನು ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸುವ "ಟ್ರಕ್ ಟರ್ಮಿನಲ್" ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೯೩೪ (೨೨೦೭), ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಕೈಗಾರಿಕಾ ಪ್ರದೇಶದಲ್ಲಿ ೨೦೦೦ಕ್ಕಿಂತ ಅಧಿಕ ಲಾರಿ/ಟ್ರಕ್‌ಗಳು, ಗ್ಯಾಸ್ ಸಿಲಿಂಡರ್ ಲಾರಿಗಳು ಓಡಾಟ ಮಾಡುತ್ತಿದ್ದು "ಟ್ರಕ್ ಟರ್ಮಿನಲ್" ನಿರ್ಮಾಣ ಮಾಡದಿರಲು ಕಾರಣಗಳೇನು ;

(ಆ) ಟ್ರಕ್ ಟರ್ಮಿನಲ್ ಇಲ್ಲದೇ ಅಪಘಾತದ ಸಂಖ್ಯೆಗಳು ಜಾಸ್ತಿಯಾಗುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; ಪಣಂಬೂರು/ಬೈಕಂಪಾಡಿ/ಕುಳಾಯಿ/ಸುರತ್ಕಲ್ ಇಡ್ಯಾ ಪ್ರದೇಶಗಳ ರಸ್ತೆ ಇಕ್ಕೆಲಗಳಲ್ಲಿ ಟ್ರಕ್/ಲಾರಿಗಳು ನಿಲ್ಲಿಸಿ ಟ್ರಾಫಿಕ್‌ಗೆ ತೊಂದರೆ ಆಗುತ್ತಿದ್ದು ಸಾರಿಗೆ ಇಲಾಖೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಕರಾವಳಿ ಭಾಗದಲ್ಲಿ ಮೀನುಗಾರಿಕಾ ಲಾರಿಗಳಲ್ಲಿ ಮಂಜುಗಡ್ಡೆಯ ನೀರು ರಸ್ತೆಗಳಲ್ಲಿ ಬಿದ್ದು ಪರಿಸರ ಮಾಲಿನ್ಯದ ಜೊತೆಗೆ ಸಂಚಾರಕ್ಕೆ ಅಡ್ಡಿ ಉಂಟಾಗಿದ್ದರೂ ಇಲಾಖೆ ಸುಮ್ಮನಿರಲು ಕಾರಣವೇನು ; ಕ್ರಮ ಕೈಗೊಂಡಿದ್ದರೆ ವಿವರ ನೀಡುವುದು ;

(ಈ) ಅತೀ ವೇಗದ ಚಾಲನೆಗೆ ನಿಯಮ ಉಲ್ಲಂಘನೆಗೆ ಸಾರಿಗೆ ಇಲಾಖೆ ವತಿಯಿಂದ ಟ್ರಕ್/ಲಾರಿಗಳ ಮೇಲೆ ೨೦೧೩-೧೪, ೨೦೧೪-೧೫ ರಲ್ಲಿ ದಾಖಲಾದ ಪ್ರಕರಣಗಳೆಷ್ಟು ?

## ಜಿಲ್ಲೆಯ ನಗರ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬಿಪಿಎಲ್ ಕಾರ್ಡ್‌ದಾರರಿಗೆ ಗ್ಯಾಸ್ ಸಿಲಿಂಡರ್ ಒದಗಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೯೩೫ (೨೨೦೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಹಾನಗರ ಪಾಲಿಕೆ/ಪುರಸಭೆ/ತಾಲ್ಲೂಕು ಪಂಚಾಯತ್‌ಗಳಲ್ಲಿ ಸೀಮೆಎಣ್ಣೆ ಮುಕ್ತ ನಗರ ಪ್ರದೇಶವನ್ನಾಗಿ ಮಾರ್ಪಾಡು ಮಾಡಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ;

(ಆ) ಜಿಲ್ಲೆಯ ನಗರ ಪ್ರದೇಶಗಳಲ್ಲಿ ವಾಸಿಸುತ್ತಿರುವ ಒಟ್ಟು ಬಿಪಿಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ; ಗ್ಯಾಸ್ ಸಿಲಿಂಡರ್ ಇರುವವರ ಸಂಖ್ಯೆ ಎಷ್ಟು; ಗ್ಯಾಸನ್ನು ಒದಗಿಸಬೇಕಾಗುವವರ ಸಂಖ್ಯೆ ಎಷ್ಟು ; ಉಚಿತವಾಗಿ ಗ್ಯಾಸ್/ಸಿಲಿಂಡರ್/ಸ್ಟವ್‌ಗಳನ್ನು ಒದಗಿಸಲು ಇಲಾಖೆ ಕೈಗೊಂಡ ಕ್ರಮವೇನು ; ಜಿಲ್ಲೆಯಲ್ಲಿ ಎಷ್ಟು ಮಂದಿಗೆ ಉಚಿತ ಗ್ಯಾಸ್/ಸಿಲಿಂಡರ್/ಸ್ಟವ್‌ಗಳನ್ನು ಪೂರೈಸಲಾಗಿದೆ ;

(ಇ) ನಗರ ಪಂಚಾಯತ್ ಮತ್ತು ಪುರಸಭೆಯ ಪ್ರದೇಶಗಳಲ್ಲಿ ಅಗತ್ಯ ಅವಶ್ಯಕತೆಗಳಿಗಾಗಿ ಸೀಮೆ ಎಣ್ಣೆ ಪೂರೈಸಬೇಕೆಂಬ ಜನರ ಬೇಡಿಕೆಗೆ ಇಲಾಖೆ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೧೧,೦೦೦ ಕುಟುಂಬಗಳಿಗೆ ಕಾರ್ಡು ವಿತರಣೆ ಮಾಡದಿರುವ ಕಾರಣಗಳೇನು ; ಈ ಕುಟುಂಬಗಳಿಗೆ ಪಡಿತರ ವ್ಯವಸ್ಥೆಯನ್ನು ಪೂರೈಸಲಾಗಿದೆಯೇ ; ಪೂರೈಸದೇ ಇದ್ದರೆ ಯಾವಾಗನಿಂದ ಪೂರೈಸಲಾಗಿಲ್ಲ ? (ವಿವರ ನೀಡುವುದು)

## ಬಿ.ಪಿ.ಎಲ್. ಪಡಿತರ ಚೀಟಿಗಳ ನೀಡಿಕೆಯಲ್ಲಿನ ಸುಧಾರಣೆ.

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೩೬ (೨೨೧೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯಾದ್ಯಂತ ನೀಡಿರುವ ಬಿ.ಪಿ.ಎಲ್. ಕಾರ್ಡ್‌ಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಬಿ.ಪಿ.ಎಲ್. ಫಲಾನುಭವಿಗಳಿಗೆ ನೀಡಿರುವ ಕಾರ್ಡ್‌ಗಳಲ್ಲಿ ಎಷ್ಟು ಅನರ್ಹ ಎಂದು ಗುರುತಿಸಿ ರದ್ದುಪಡಿಸಲಾಗಿದೆ ; ಪ್ರಸ್ತುತ ಎ.ಪಿ.ಎಲ್. ಕಾರ್ಡ್‌ದಾರರಿಗೆ ನೀಡುತ್ತಿರುವ ಪಡಿತರ ಸೌಲಭ್ಯಗಳ ವಿವರಗಳೇನು ;

(ಇ) ಪ್ರಸ್ತುತ ಸರ್ಕಾರದವರು ಬಿ.ಪಿ.ಎಲ್. ಕಾರ್ಡ್ ನೀಡಿಕೆ ಸಂಬಂಧ ಅನುಸರಿಸುತ್ತಿರುವ ನೀತಿ ನಿಯಮಗಳೇನು ?

## ಬೆಂಗಳೂರು ಮಹಾನಗರದಲ್ಲಿ ಸಾರಿಗೆ ವ್ಯವಸ್ಥೆಯ ಸುಧಾರಣೆ.

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೩೭ (೨೨೧೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ.ಎಂ.ಟಿ.ಸಿ. ವ್ಯವಸ್ಥೆಯ ಸುಧಾರಣೆಗಾಗಿ ಸಾರಿಗೆ ಸಂಸ್ಥೆಯ ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಕಳೆದ ಎರಡು ವರ್ಷಗಳಲ್ಲಿ ಖರೀದಿಸಿದ ಹೊಸ ಬಸ್‌ಗಳ ಸಂಖ್ಯೆ ಮತ್ತು ಇತರ ವ್ಯವಸ್ಥೆಗಳ ಸುಧಾರಣೆಗಾಗಿ ಮಾಡಿದ ವೆಚ್ಚದ ಮೊತ್ತ ಎಷ್ಟು ; ಸದರಿ ವರ್ಷಗಳಲ್ಲಿನ ಆದಾಯ ಮತ್ತು ವೆಚ್ಚದ ವಿವರಗಳೇನು ;

(ಇ) ಹೊಸ ಬಸ್‌ಗಳನ್ನು ಖರೀದಿಸಿದ್ದರೂ ಹಳೆಯ ಬಸ್ಸುಗಳನ್ನು ರಸ್ತೆಗಳಲ್ಲಿ ಓಡಿಸಲು ಕಾರಣಗಳೇನು ;

(ಈ) ಸಾರಿಗೆ ಸುಧಾರಣೆ ಮತ್ತು ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ನೆರವನ್ನು ಪಡೆಯಲಾಗಿದೆಯೇ ? (ಹೌದಾದಲ್ಲಿ, ವಿವರ ನೀಡುವುದು)

## ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ.

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೩೮ (೨೨೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ವೈದ್ಯರ ಕೊರತೆಯಿಂದ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕೊರತೆ ತುಂಬಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## ಜನರಿಕ್ ಹಾಗೂ ನಾನ್-ಜನರಿಕ್ ಔಷಧಿಗಳು.

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೩೯ (೨೨೧೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಇಲಾಖೆಗೆ ಸರಬರಾಜು ಆಗುತ್ತಿರುವ ಜನರಿಕ್ ಮತ್ತು ನಾನ್-ಜನರಿಕ್ ಔಷಧಿಗಳ ಬೆಲೆಗಳಲ್ಲಿ ಇರುವ ವ್ಯತ್ಯಾಸವೇನು ; ಈ ಪೈಕಿ ಯಾವ ಔಷಧಿಗಳು ಕಡಿಮೆ ಬೆಲೆಗೆ ಮಾರುಕಟ್ಟೆಯಲ್ಲಿ ಲಭ್ಯವಿರುತ್ತದೆ ; ಬಡ ಮತ್ತು ಮಧ್ಯಮ ವರ್ಗದ ರೋಗಿಗಳಿಗೆ ಯಾವ ಔಷಧಿಗಳಿಂದ ಆರ್ಥಿಕವಾಗಿ ಅನುಕೂಲವಾಗುತ್ತದೆ ;

(ಆ) ಸರ್ಕಾರಿ ಔಷಧಿ ಮಳಿಗೆಗಳಲ್ಲಿ ಯಾವ ಔಷಧಿಯನ್ನು ಹೆಚ್ಚಾಗಿ ಮಾರಾಟ ಮಾಡಲಾಗತ್ತಿದೆ ;

(ಇ) ಔಷಧಿ ತಯಾರಕರು ಮತ್ತು ಇಲಾಖೆಗೆ ಔಷಧಿಯನ್ನು ಸರಬರಾಜು ಮಾಡುತ್ತಿರುವವರ ಹೆಸರು ಮತ್ತು ವಿಳಾಸದ ಮಾಹಿತಿಯನ್ನು ನೀಡುವುದರ ಜೊತೆಗೆ ಕಳೆದ ಮೂರು ವರ್ಷಗಳಲ್ಲಿ ಔಷಧಿಗಳನ್ನು ಸರ್ಕಾರ ಖರೀದಿ ಮಾಡಿರುವ ವೆಚ್ಚ ಎಷ್ಟು ?

## ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಸರ್ಕಾರದ ಗುರಿ ಸಾಧನೆಗಳು.

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೪೦ (೨೨೧೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಕಳೆದ ಎರಡು ವರ್ಷಗಳಲ್ಲಿ ಸರ್ಕಾರ ಹಮ್ಮಿಕೊಂಡ ಗುರಿ ಮತ್ತು ಸಾಧನೆಗಳ ಕುರಿತಾದ ವಿವರಗಳೇನು ;

(ಆ) ಸದರಿ ಕ್ಷೇತ್ರಗಳ ಸುಧಾರಣೆಗಾಗಿ ಮೀಸಲಿಟ್ಟ ಅನುದಾನ ಎಷ್ಟು :

(ಇ) ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿನ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದವರು ನೀಡಿದ

ಅನುದಾನ ಎಷ್ಟು ; ಪ್ರಸ್ತುತ ಸರ್ಕಾರದ ಮುಂದಿರುವ ನೂತನ ಅಭಿವೃದ್ಧಿ ಯೋಜನೆಗಳೇನು ?

## ಮಾರ್ಕೋಪೋಲೋ ಬಸ್ಸು ಖರೀದಿ.

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ) :-**

೧೯೪೧ (೨೨೨೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸಾರಿಗೆ ಸಂಸ್ಥೆಗಳು ಮಾರ್ಕೋಪೋಲೋ ಸಂಸ್ಥೆಯ ಎಷ್ಟು ಬಸ್ಸುಗಳನ್ನು ಖರೀದಿಸಿವೆ ; (ಪ್ರತಿ ಬಸ್ಸುಗಳ ದರ, ಒಟ್ಟು ಖರೀದಿ ವೆಚ್ಚದ ವಿವರ ಮತ್ತು ಖರೀದಿಯ ಅವಧಿಯ ವಿವರಗಳನ್ನು ನೀಡುವುದು)

(ಆ) ಹಾಲಿ ಈ ಬಸ್ಸುಗಳ ಸೇವೆಯನ್ನು ವಾಪಸ್ಸು ಪಡೆಯಲಾಗಿದೆಯೇ ;

(ಇ) ಈ ಬಸ್ಸುಗಳನ್ನು ಓಡಿಸುವುದು ಅಥವಾ ರಿಪೇರಿ ಮಾಡಿಸುವುದು ಹೊಸ ಬಸ್ ಖರೀದಿಗಿಂತ ದುಬಾರಿಯೇ ; ಒಂದು ಬಸ್ಸಿನ ನಿರ್ವಹಣೆಗೆ ಅಂದಾಜು ಸುಮಾರು ರೂ.೧.೫೬ಕೋಟಿ ಪ್ರತಿ ಮಾಹೆ ವೆಚ್ಚ ಮಾಡಲಾಗುತ್ತಿದೆಯೇ ; ಇದರಿಂದ ಸಾರಿಗೆ ಸಂಸ್ಥೆಗಳಿಗೆ ಕೋಟ್ಯಾಂತರ ರೂ.ನಷ್ಟವಾಗಿದ್ದು, ಪ್ರಸ್ತುತ, ಈ ಎಲ್ಲ ಬಸ್ಸುಗಳನ್ನು ಗುಜರಿಗೆ ಕಳುಹಿಸಬೇಕಾದ ಸ್ಥಿತಿ ಸಾರಿಗೆ ಸಂಸ್ಥೆಗೆ ಬಂದಿದೆ ಎಂಬ ವರದಿಗಳು ನಿಜವೇ ; ಈ ಬಗ್ಗೆ ಸರ್ಕಾರದ ನಿಲುವೇನು ;

(ಈ) ಈ ಬಸ್ಸುಗಳ ಖರೀದಿ ಮುನ್ನಾ ವೈಜ್ಞಾನಿಕ ಅಧ್ಯಯನಗಳಿಲ್ಲದೆ ಖರೀದಿಸಿ, ಸಾರಿಗೆ ಸಂಸ್ಥೆಯ ನಷ್ಟಕ್ಕೆ ಕಾರಣರಾದವರ ವಿರುದ್ಧ ತನಿಖೆ ಮತ್ತು ಶಿಸ್ತು ಕ್ರಮಗಳನ್ನು ಸರ್ಕಾರ ಕೈಗೊಂಡಿದೆಯೇ ?

## ಬುಡಕಟ್ಟು ವಾಸಿಗಳ ಸ್ಥಿತಿಗತಿ

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ) :-**

೧೯೪೨ (೨೨೨೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯನ್ನು ಯಾವಾಗ ಮತ್ತು ಯಾವ ಉದ್ದೇಶಕ್ಕಾಗಿ ಸ್ಥಾಪನೆ ಮಾಡಲಾಗಿದೆ ; ಈ ಸಂಸ್ಥೆಗೆ ಈವರೆಗೂ ವ್ಯಯ ಮಾಡಿರುವ ಹಣವೆಷ್ಟು ;

(ಆ) ಈ ಸಂಸ್ಥೆಗೆ ಈವರೆಗೆ ಸರ್ಕಾರಕ್ಕೆ ನೀಡಿರುವ ಸಂಶೋಧನಾ ವರದಿಗಳೆಷ್ಟು ; ಪ್ರತಿ ವರದಿಗಳ ಸಂಕ್ಷಿಪ್ತ ವಿವರಗಳನ್ನು ನೀಡುವುದು ;

(ಇ) ನಾಗರೀಕತೆಯನ್ನೇ ಕಾಣದ ಇನ್ನೂ ಎಷ್ಟು ಆದಿವಾಸಿಗಳು/ ಗಿರಿಜನರು ಅರಣ್ಯದ ಒಳಗಡೆ, ಅರಣ್ಯದ ಅಂಚಿನಲ್ಲಿ ವಾಸವಿದ್ದಾರೆ ;

(ಈ) ಸ್ವಾತಂತ್ರ್ಯದ ಸವಿಯನ್ನು ಈ ಆದಿವಾಸಿಗಳಿಗೆ ಯಾವಾಗ ಒದಗಿಸುವ ಗುರಿ ಹೊಂದಲಾಗಿದೆ ?

## ಹೈದರಾಬಾದ್-ಕರ್ನಾಟಕ ಭಾಗದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೪೩ (೨೨೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿ: ೦೧-೦೫-೨೦೧೩ ರಿಂದ ३೧-೦೧-೨೦೧೫ರವರೆಗೆ ಗಂಗಾ ಕಲ್ಯಾಣ ಯೋಜನೆಯಡಿ ಹೈದರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕೊರೆದಿರುವ ಕೊಳವೆ ಬಾವಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದಕ್ಕಾಗಿ ವೆಚ್ಚ ಮಾಡಿರುವ ಹಣ ಎಷ್ಟು ; ಇವುಗಳಲ್ಲಿ ಎಷ್ಟು ಕೊಳವೆ ಬಾವಿಗಳು ವಿಫಲವಾಗಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇವುಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಮತ್ತು ಕಲ್ಪಿಸದಿರುವ ಕೊಳವೆ ಬಾವಿಗಳೆಷ್ಟು ; (ತಾಲ್ಲೂಕವಾರು ವಿವರ ನೀಡುವುದು)

(ಈ) ವಿದ್ಯುತ್ ಸಂಪರ್ಕ ಕಲ್ಪಿಸದಿರಲು ಕಾರಣವೇನು ; ಯಾವಾಗ ಕಲ್ಪಿಸಲಾಗುವುದು ; ಇದಕ್ಕಾಗಿ ಕೈಗೊಂಡಿರುವ ಕ್ರಮಗಳೇನು ?

# ಕಲಬುರಗಿಯಲ್ಲಿ ESI ಆಸ್ಪತ್ರೆ ಮತ್ತು ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆಗಳನ್ನು ಸದ್ಬಳಕೆ ಮಾಡಿಕೊಳ್ಳುವ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೪೪ (೨೨೨೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿಯಲ್ಲಿ ಕೇಂದ್ರದ ESI ಆಸ್ಪತ್ರೆ ಮತ್ತು ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸದರಿ ಸಂಸ್ಥೆ ಉದ್ದೇಶಗಳು ಈಡೇರಿದೆಯೇ ; (ಮಾಹಿತಿ ಒದಗಿಸುವುದು)

(ಆ) ಈ ಸದರಿ ESI ಆಸ್ಪತ್ರೆ ಮತ್ತು ವೈದ್ಯಕೀಯ ಮಹಾವಿದ್ಯಾಲಯ ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪಿಸಲು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳ ಮಧ್ಯೆ ಆದ ಒಪ್ಪಂದಗಳೇನು ; ಹಾಗೂ ರಾಜ್ಯ ಸರ್ಕಾರ ಒಪ್ಪಂದಗಳ ಪ್ರಕಾರ ಕೈಗೊಂಡ ಕ್ರಮಗಳೇನು ; ಇದರ ಸಂಪೂರ್ಣ ಮಾಹಿತಿ ಒದಗಿಸುವುದು ;

(ಇ) ಸದರಿ ಕೇಂದ್ರದ ಸಂಸ್ಥೆಯನ್ನು ಸಂಬಂಧಪಟ್ಟ ಇಲಾಖೆಯವರು ಮುಂದುವರೆಸದೆಯೇ ಇರುವ ವಿಷಯ ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದರೆ, ಈ ಸಂಸ್ಥೆಯ ಕಟ್ಟಡ ಹಾಗೂ ಮೂಲಸೌಕರ್ಯಗಳ ಸದ್ಬಳಕೆ ಮಾಡಿ ಈ ಭಾಗದ ಜನರಿಗೆ ಇದರ ಸಂಪೂರ್ಣ ಲಾಭ ಆಗುವ ನಿಟ್ಟಿನಲ್ಲಿ ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲು ಮುಂದಾಗುವುದು ? (ಸಂಪೂರ್ಣವಾದ ಪ್ರತ್ಯೇಕ ಮಾಹಿತಿ ಒದಗಿಸುವುದು.)

F-7 B/B

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೪೫ (೨೨೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದ್ರಬಾದ್-ಕರ್ನಾಟಕ ಭಾಗದಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಹೈದ್ರಬಾದ್-ಕರ್ನಾಟಕ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಿರಿಯ ಆರೋಗ್ಯ ಸಹಾಯಕರ (ಪುರುಷ) ಹುದ್ದೆ ಎಷ್ಟು ; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಆರೋಗ್ಯ ಇಲಾಖೆಯಲ್ಲಿ ಕಿರಿಯ ಆರೋಗ್ಯ ಸಹಾಯಕರ (ಪುರುಷ) ನೇಮಕಾತಿ ಮಾಡಿಕೊಂಡು ಎಷ್ಟು ವರ್ಷಗಳಾಗಿವೆ ; (ಸಂಕ್ಷಿಪ್ತ ವಿವರ ನೀಡುವುದು)

(ಈ) ಖಾಲಿ ಇರುವ ಕಿರಿಯ ಆರೋಗ್ಯ ಸಹಾಯಕರ (ಪುರುಷ) ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಮುಂದಾಗುವುದೇ ; ಇದ್ದರೆ ಯಾವ ಕಾಲ ಮಿತಿಯೊಳಗೆ ಈ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

# ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಯ ಉದ್ದೇಶ ಹಾಗೂ ಕಾರ್ಯಕ್ರಮಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೪೬ (೨೨೨೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಕಾರ್ಯಾರಂಭ ಮಾಡಿದ್ದು ಯಾವಾಗ ; ಇದರ ಮೂಲ ಉದ್ದೇಶ ಹಾಗೂ ಕಾರ್ಯಕ್ರಮಗಳು ಹಾಗೂ ಇದರ ವ್ಯಾಪ್ತಿಗಳೇನು ; (ವಿವರ ನೀಡುವುದು)

(ಆ) ಸದರಿ ಮಂಡಳಿಗೆ ಸರ್ಕಾರದಿಂದ ಒದಗಿಸುವ ಅನುದಾನವೆಷ್ಟು ; (ಯೋಜನವಾರು, ಆರ್ಥಿಕ ಹಾಗೂ ಭೌತಿಕ ಪ್ರಗತಿಯ ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಮಂಡಳಿಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಆ ಪೈಕಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಹಾಗೂ ಪ್ರಭಾರದಲ್ಲಿರುವ ಸಿಬ್ಬಂದಿಗಳು ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ಸದರಿ ಮಂಡಳಿಯಿಂದ ಅಪೇಕ್ಷಿತ ಅಭಿವೃದ್ಧಿಯಾಗದೇ ಇದ್ದು, ಇದನ್ನು ಸರಿಪಡಿಸಿ ಸದರಿ ಯೋಜನೆಗಳ ಕಾಮಗಾರಿಗಳಿಗೆ ಚುರುಕು ಮುಟ್ಟಿಸಿ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಸರ್ಕಾರ ಮುಂದಾಗುವುದೇ ; ಹಾಗಿದ್ದರೆ, ಸರ್ಕಾರದ ಮುಂದಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಹೈದ್ರಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಮಂಜೂರಾದ ಯೋಜನೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೯೪೭ (೨೨೨೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ ಹೈದ್ರಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಮಂಜೂರು ಮಾಡಿದ ಯೋಜನೆಗಳು ಯಾವುವು ; (ಜಿಲ್ಲಾವಾರು, ಯೋಜನಾವಾರು, ಮೊತ್ತವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳಲ್ಲಿ ರೂ.೨.೫ಲಕ್ಷದವರೆಗೆ, ರೂ.೨.೫ಲಕ್ಷದಿಂದ ೫.೦೦ಲಕ್ಷದವರೆಗೂ, ರೂ.೫.೦೦ ಲಕ್ಷದಿಂದ ೨೫.೦೦ ಲಕ್ಷದವರೆಗೂ ಹಾಗೂ ರೂ.೨೫.೦೦ ಲಕ್ಷದಿಂದ ೧೦೦.೦೦ಲಕ್ಷದವರಿಗೂ ಹಾಗೂ ೧೦೦.೦೦ಲಕ್ಷಕ್ಕಿಂತ ಮೇಲ್ಪಟ್ಟ ಯೋಜನೆಗಳ ಕಾಮಗಾರಿಗಳ ಸಂಖ್ಯೆ ಎಷ್ಟು ? (ಪ್ರತ್ಯೇಕ ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಳಗಾವಿ ವೈದ್ಯಕೀಯ ಆಸ್ಪತ್ರೆಗೆ ಸೂಪರ್ ಸ್ಪೆಷಾಲಿಟಿ ಸೌಲಭ್ಯ ಒದಗಿಸುವ ಬಗ್ಗೆ.

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೯೪೮ (೨೨೨೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ವೈದ್ಯಕೀಯ ಆಸ್ಪತ್ರೆಯಲ್ಲಿ ಎಷ್ಟು ಹಾಸಿಗೆಗಳ ಸೌಲಭ್ಯ ಇದೆ ;

(ಆ) ಈ ಆಸ್ಪತ್ರೆಯನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಮಾಡಲು ಅವಶ್ಯವಿರುವ ಹಣ ಬಿಡುಗಡೆ ಮಾಡಲಾಗುವುದೇ ;

(ಈ) ಈ ಆಸ್ಪತ್ರೆಯಲ್ಲಿ ಬೋಧಕ ಮತ್ತು ಬೋಧಕೇತರರ (Teaching & Non Teaching) ಎಷ್ಟು ಹುದ್ದೆಗಳು ಖಾಲಿ ಇದೆ ; ಖಾಲಿ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ;

(ಉ) ಈ ಆಸ್ಪತ್ರೆಯಲ್ಲಿ ಅಪಘಾತ ಹಾಗೂ ಅತೀ ಜರೂರು (Accident cases etc.) ಪ್ರಕರಣಗಳಲ್ಲಿ ಚಿಕಿತ್ಸೆಗೆ ಸೌಕರ್ಯವಿರುವುದಿಲ್ಲವೆಂದು ಹೇಳಿ ಅಂಥ ರೋಗಿಗಳನ್ನು ಕೆ ಎಲ್ ಇ ಆಸ್ಪತ್ರೆಗೆ ಕಳುಹಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಅಸ್ಪತ್ರೆಯಲ್ಲಿ ಬಿ ಪಿ ಎಲ್ ಮತ್ತು ಎ ಪಿ ಎಲ್ ಕಾರ್ಡು ಹೊಂದಿದವರಿಗೆ ಯಾವ ಯಾವ ಸೌಲಭ್ಯಗಳು ಸಿಗುತ್ತವೆ ; (ವಿವರ ನಿಡುವುದು)

(ಋ) ಈ ಆಸ್ಪತ್ರೆಯಲ್ಲಿ ಯಾವ-ಯಾವ ಚಿಕಿತ್ಸಾ ಸೌಲಭ್ಯಗಳು ಲಭ್ಯವಿದೆ ?

## ರೈಸ್ ಮಿಲ್‌ಗಳಿಂದ ಅಕ್ಕಿ ಸಂಗ್ರಹಿಸುವುದು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೯೪೯ (೨೨೩೪) ಮಾನ್ಯ ಆಹಾರ ಮತ್ತು ನಾಗರೀಕಾ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈಸ್ ಮಿಲ್‌ಗಳಿಂದ ಅಕ್ಕಿ ಲೇವಿ ಸಂಗ್ರಹಿಸುವ ಪದ್ಧತಿ ಬಂದ್ ಮಾಡಲಾಗಿರುವ ಸಂಗತಿ ನಿಜವೇ ;

(ಆ) ಹಾಗಿದ್ದಲ್ಲಿ, ಲೇವಿ ಅಕ್ಕಿಯನ್ನು ಯಾವ ಪ್ರಕಾರವಾಗಿ ಸಂಗ್ರಹಿಸಲಾಗುವುದು ;

(ಇ) ರೈತರಿಗೆ ಇನ್ನು ಸರಿಯಾದ ಬೆಂಬಲ ಬೆಲೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ರೈತರಿಗೆ ಸರಿಯಾದ ಬೆಂಬಲ ಬೆಲೆ ಕೊಡಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ರಾಜ್ಯದಲ್ಲಿ ಎಷ್ಟು ರೈಸ್ ಮಿಲ್‌ಗಳು ಇರುತ್ತವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ರೈಸ್ ಮಿಲ್‌ಗಳು ಇರುತ್ತವೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವುದು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೯೫೦ (೨೨೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇರುತ್ತವೆ ; ಜಿಲ್ಲಾವಾರು ವಿವರ ಕೊಡಿ ;

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇವೆ ; (ತಾಲ್ಲೂಕುವಾರು ವಿವರ ಕೊಡಿ)

(ಇ) ಕಳೆದ ಎರಡು ವರ್ಷಗಳಲ್ಲಿ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬಿ.ಪಿ.ಎಲ್., ಮತ್ತು ಎ.ಪಿ.ಎಲ್. ಕಾರ್ಡುದಾರರಿಗೆ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; ಔಷಧಗಳನ್ನು ಪೂರೈಸಲಾಗುತ್ತಿದೆಯೇ ;

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಗಳು ಲಭ್ಯವಿಲ್ಲದಿದ್ದಲ್ಲಿ ತರಿಸಿ ಕೊಡಲಾಗುತ್ತಿದೆಯೇ ;

(ಉ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ದಾಖಲು ಆದ ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದಲ್ಲಿ ಅವರನ್ನು ಬೆಳಗಾವಿಯ ಕೆ.ಎಲ್.ಇ ಆಸ್ಪತ್ರೆಗೆ ಕಳುಹಿಸಿದಲ್ಲಿ ಅದರ ಖರ್ಚನ್ನು ಯಾರು ಕೊಡುವರು ; ಹಾಗೂ ಯಾವ ಸಹಾಯ ಒದಗಿಸಲಾಗುವುದು ;

(ಊ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕು, ಹಿರೆಬೂದನೂರ ಮತ್ತು ಬೈಲಹೊಂಗಲ ತಾಲ್ಲೂಕು ವಕ್ಕುಂದ ಗ್ರಾಮಕ್ಕೆ ಮಲಪ್ರಭಾ ಯೋಜನೆಯ ಮುಳುಗಡೆ ಪ್ರದೇಶದ ಜನರು ವಲಸೆ ಆಗಿದ್ದು, ಇವೆರಡು ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಋ) ಎ.ಪಿ.ಎಲ್ ಕಾರ್ಡುದಾರರು ಸಹ ಬಡವರಾಗಿದ್ದು ಇವರಿಗೆ ಬಿ.ಪಿ.ಎಲ್ ಕಾರ್ಡುದಾರರಿಗೆ ಕೊಡುವ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗುವುದೇ ?

## ಬೆಳಗಾವಿಯಲ್ಲಿ ಆಟೋ ಚಾಲಕರಿಂದ ಗ್ರಾಹಕರ ಹಣ ಲೂಟಿ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):-**

೧೯೫೧ (೨೨೩೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದಲ್ಲಿ ಎಷ್ಟು ಆಟೋಗಳು ಇರುತ್ತವೆ ;

(ಆ) ರಿಜಿಸ್ಟ್ರೇಷನ್ ಆಗದೇ ಎಷ್ಟೋ ವಾಹನಗಳು ಓಡಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಆಟೋಗಳು ಪ್ರಯಾಣಿಕರ ಕಡೆಯಿಂದ ಮನ ಬಂದಂತೆ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ;

(ಉ) ಬೆಂಗಳೂರಿನಲ್ಲಿ ಇರುವಂತೆ ಬೆಳಗಾವಿಯಲ್ಲಿಯೂ ಸಹ ರೈಲ್ವೇ ಸ್ಟೇಷನ್‌ದಿಂದ, ಬಸ್ ಸ್ಟ್ಯಾಂಡ್‌ನಿಂದ ಹಾಗೂ ಕೆ.ಎಲ್.ಇ., ಆಸ್ಪತ್ರೆಯಿಂದ ಪ್ರಯಾಣಿಕರು ಹೋಗಲು ಪ್ರೀ-ಫೇಡ್ ಆಟೋ ಸರ್ವಿಸ್‌ನ್ನು ಪ್ರಾರಂಭಿಸಲಾಗುವುದೇ ;

(ಊ) ಹೆಚ್ಚಿಗೆ ಹಣ ತೆಗೆದುಕೊಂಡು ಹಾಗೂ ಮೀಟರ್ ಅಳವಡಿಸದೇ ಓಡಿಸುವ ಎಷ್ಟು ಆಟೋಗಳ ಮೇಲೆ ಕಳೆದ ಮೂರು ತಿಂಗಳಲ್ಲಿ ಪ್ರಕರಣ ದಾಖಲಾಗಿದೆ ?

## ಅಪಘಾತ ವಿಮೆ ಯೋಜನೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):-**

೧೯೫೨ (೨೨೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಪಘಾತಕ್ಕೊಳಗಾದವರ ತುರ್ತು ಚಿಕಿತ್ಸೆಗೆ ಅಗತ್ಯ ನೆರವು ನೀಡುವ ಉದ್ದೇಶದಿಂದ ಅಪಘಾತ ವಿಮೆ ಯೋಜನೆ (ಮುಖ್ಯಮಂತ್ರಿ ಸಾಂತ್ವನ ಯೋಜನೆ) ಜಾರಿಗೆ ತರಲಾಗುವುದೇ ;

(ಆ) ಇಂಥ ವಿಮಾ ಯೋಜನೆ ಏಷಿಯಾದಲ್ಲಿ ಪ್ರಥಮವೆಂಬ ಸಂಗತಿ ನಿಜವೇ ;

(ಇ) ಈ ಯೋಜನೆ ಅನ್ವಯ ಅಪಘಾತವಾದ ವ್ಯಕ್ತಿಗೆ ಸರ್ಕಾರ ಎಷ್ಟು ಹಣ ಒದಗಿಸುವುದು ;

(ಈ) ಈ ಯೋಜನೆ ರೂಪರೇಷೆ ಹಾಗೂ ಈ ಯೋಜನೆ ಎಂದಿನಿಂದ ಜಾರಿಗೆ ಬರುವುದು ; ಹಾಗೂ ಹಣಕಾಸಿನ ವ್ಯವಸ್ಥೆ ಎಲ್ಲ ವಿವರಗಳನ್ನು ನೀಡುವುದು ; ಈ ಯೋಜನೆಗೆ ಯಾರು ಅರ್ಹರಾಗಿರುವರು ;

(ಉ) ಈ ಮಹತ್ವದ ಯೋಜನೆಗೆ ಕಳೆದ ವರ್ಷದ ಆಯವ್ಯಯದಲ್ಲಿ ಮುಖ್ಯಮಂತ್ರಿಗಳು ವಿಶೇಷ ಅನುದಾನ ಒದಗಿಸಿದ ಸಂಗತಿ ನಿಜವೇ ; ಎಷ್ಟು ಹಣ ಒದಗಿಸಲಾಗಿತ್ತು ; ಎಷ್ಟು ಹಣ ಖರ್ಚಾಗಿರುತ್ತದೆ ;

(ಊ) ಆಯವ್ಯಯದ ವರ್ಷ ಮುಗಿಯಲು ಬಂದರೂ ಈವರೆವಿಗೂ ಈ ಯೋಜನೆ ಪ್ರಾರಂಭವಾಗದೇ ಇರುವ ಸಂಗತಿ ನಿಜವೇ ?

## ಭಾಷಾವಾರು ಜನಗಣತಿ.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೧೯೫೩ (೨೨೩೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಜನಸಂಖ್ಯೆಯಲ್ಲಿ ವಿವಿಧ ಭಾಷೆಗಳನ್ನು ಮಾತನಾಡುವವರ ಗಣತಿ ಮಾಡಲಾಗಿದೆಯೇ ;

(ಆ) ಮಾಡಿದ್ದಲ್ಲಿ, ವಿವಿಧ ಭಾಷೆಗಳನ್ನು ಮಾತನಾಡುವ ಜನರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಭಾಷಾವಾರು ಮಾಹಿತಿ ನೀಡುವುದು)

(ಇ) ಈ ಜನಸಂಖ್ಯೆಗನುಗುಣವಾಗಿ ಅಲ್ಪಸಂಖ್ಯಾತ ಭಾಷೆಗಳು ಯಾವುದೆಂಬ ಬಗ್ಗೆ ಸರ್ಕಾರ ಯಾವುದಾದರೂ ಆದೇಶ ಹೊರಡಿಸಿದೆಯೆ ;

(ಈ) ಹಾಗಿದ್ದಲ್ಲಿ, ಯಾವ ದಿನಾಂಕದಂದು ಆದೇಶ ಹೊರಡಿಸಲಾಗಿದೆ ?

## ಅನುಸೂಚಿತ ಜಾತಿ–ಪಂಗಡಗಳ ಅಭಿವೃದ್ಧಿ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೯೫೪ (೨೨೪೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುಸೂಚಿತ ಜಾತಿ–ಅನುಸೂಚಿತ ಪಂಗಡಗಳ ಅಭಿವೃದ್ಧಿಗೆ ಸರ್ಕಾರ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು ;

(ಆ) ಈ ಹಣವನ್ನು ಸಮರ್ಪಕವಾಗಿ ಬಳಸಲಾಗಿದೆಯೇ ;

(ಇ) ಈ ಹಣದಲ್ಲಿ ಉಳಿಕೆಯಾಗಿದ್ದರೆ, ಇದಕ್ಕೆ ಕಾರಣಗಳೇನು ; ಹಾಗಿದ್ದಲ್ಲಿ, ಸಂಬಂಧಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಸಾರಿಗೆ ನಿಗಮಗಳ ಲಾಭ ನಷ್ಟ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೯೫೫ (೨೨೪೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರಿಗೆ ನಿಗಮಗಳ ಸಂಖ್ಯೆ ಎಷ್ಟು ; ಪ್ರತಿ ನಿಗಮಗಳ ಲಾಭ/ನಷ್ಟದ ವಿವರಗಳನ್ನು ನೀಡುವುದು ;

(ಆ) ನಷ್ಟಕ್ಕೆ ಕಾರಣಗಳೇನು ; ನಿಗಮವಾರು ವಿವರ ನೀಡುವುದು ;

(ಇ) ಈ ನಷ್ಟಕ್ಕೆ ನಿಗಮದ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲು ಸರ್ಕಾರಕ್ಕೆ ಸಾಧ್ಯವಿಲ್ಲವೆ ; ನಿಗಮಗಳು ನಷ್ಟದಿಂದ ಹೊರಬಂದು ಲಾಭದಲ್ಲಿ ಮುಂದುವರಿಯುವಂತೆ ಮಾಡಲು ಸರ್ಕಾರ ಕ್ರಮಗಳನ್ನು ಏನಾದರೂ ಕೈಗೊಂಡಿದೆಯೇ ? (ವಿವರಗಳನ್ನು ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಾಸ್ಟೆಲ್.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೯೫೬ (೨೨೪೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ಒಟ್ಟು ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ;

(ಇ) ಅವುಗಳಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ, ಖರ್ಚಾದ ಹಾಗೂ ಉಳಿತಾಯವಾದ ಅನುದಾನವೇನು ;

(ಈ) ಅನುದಾನ ಉಳಿದಿದ್ದಲ್ಲಿ, ಅದನ್ನು ಖರ್ಚು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮಾಸಿಕ ಆಹಾರ ಭತ್ಯೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೯೫೭ (೨೨೪೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸ್ಟೆಲ್ ವಿದ್ಯಾರ್ಥಿಗಳು ಮಾಸಿಕ ಆಹಾರ ಭತ್ಯೆಯನ್ನು ಹೆಚ್ಚಿಸಬೇಕೆಂದು ಬೇಡಿಕೆಯನ್ನು ಸರ್ಕಾರದ ಮುಂದೆ ಇಟ್ಟಿದ್ದಾರೆಯೇ ;

(ಆ) ಹಾಲಿ ಎಷ್ಟು ಮಾಸಿಕ ಆಹಾರ ಭತ್ಯೆ ನೀಡಲಾಗುತ್ತಿದೆ ; ಎಷ್ಟು ಹೆಚ್ಚಳ ಮಾಡಲು ಬೇಡಿಕೆಯಿದೆ ;

(ಇ) ಕೈದಿಗಳಿಗೆ ನಿಗಧಿಯಾಗಿರುವ ಆಹಾರ ಭತ್ಯೆಗಳಿಗಿಂತ ಹಾಸ್ಟೆಲ್ ವಿದ್ಯಾರ್ಥಿಗಳ ಆಹಾರ ಭತ್ಯೆ ಬಹಳ ಕಡಿಮೆ ಎಂದು ವಿದ್ಯಾರ್ಥಿಗಳು ಪದೇ ಪದೇ ಮನವಿ ಮಾಡುತ್ತಿದ್ದರೂ, ಸರ್ಕಾರ ಹೆಚ್ಚಿಗೆ ಮಾಡದಿರಲು ಕಾರಣವೇನು ;

(ಈ) ಹೆಚ್ಚಿಗೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬೆಂಗಳೂರು ವಿಶ್ವವಿದ್ಯಾಲಯದ ಅವ್ಯವಸ್ಥೆ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):-**

೧೯೫೮ (೨೨೩೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಧಾನ ಮಂಡಲದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಮಿತಿಯು ಇತ್ತೀಚೆಗೆ ಬೆಂಗಳೂರು ವಿಶ್ವವಿದ್ಯಾಲಯದ ವಸತಿ ನಿಲಯಕ್ಕೆ ಭೇಟಿ ನೀಡಿ, ಅಲ್ಲಿನ ಅವ್ಯವಸ್ಥೆಯನ್ನು ಪರಿಶೀಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಲ್ಲಿನ ಅವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ಯಾದಗಿರಿ ಜಿಲ್ಲೆಯ ವೈದ್ಯಕೀಯ ಕಾಲೇಜುಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೯೫೯ (೨೨೪೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಯಾದಗಿರಿ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ಈ ಕಾಲೇಜು ಸ್ಥಾಪನೆಗಾಗಿ ಸರ್ಕಾರದಿಂದ ಜಮೀನು ದೊರಕಿದೆಯೇ ;

(ಇ) ದೊರಕಿದ್ದರೆ, ಯಾವಾಗ ಸ್ಥಾಪನೆ ಮಾಡಲಾಗುವುದು ?

## ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಂಚಾರಿ ಬಸ್ಸುಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೯೬೦ (೨೨೫೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರ್ಗಿಯಿಂದ ಜೇವರ್ಗಿ ಮಾರ್ಗವಾಗಿ ಯಡ್ರಾಮಿ, ಮಳ್ಳಿ, ಕೆಂಭಾವಿ, ಹುಣಸಗಿ, ನಾರಾಯಣಪುರ ಮಾರ್ಗವಾಗಿ ಪ್ರತಿ ದಿನ ಎಷ್ಟು ಬಸ್ಸುಗಳು ಸಂಚರಿಸುತ್ತವೆ ;

(ಆ) ಕಲಬುರ್ಗಿಯಿಂದ ಸುರಪುರ ಮಾರ್ಗವಾಗಿ ಎಷ್ಟು ಬಸ್ಸುಗಳು ಪ್ರತಿದಿನ ಸಂಚರಿಸುತ್ತವೆ ; ಅದರಲ್ಲಿ ಈಶಾನ್ಯ ಸಾರಿಗೆ ಸಂಸ್ಥೆ ಬಸ್ಸುಗಳ ಸಂಖ್ಯೆ ಎಷ್ಟು ; ಬೇರೆ ಸಂಸ್ಥೆ ಬಸ್ಸುಗಳ ಸಂಖ್ಯೆ ಎಷ್ಟು ;

(ಇ) ಯಾದಗಿರಿಯಲ್ಲಿ ಬಸ್ಸುಗಳ ನವೀಕರಣ ಘಟಕದಿಂದ ಪ್ರತಿದಿನ ಎಷ್ಟು ಬಸ್ಸುಗಳು ತಯಾರಾಗುತ್ತವೆ ?

## ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಆರೋಗ್ಯ ಕೇಂದ್ರಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೯೬೧ (೨೨೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರುವ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು ;

(ಆ) ಈ ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೆಂಬಾವಿಯಲ್ಲಿ ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆ ಸರ್ಕಾರಿ ನ್ಯಾಯಬೆಲೆ ಅಂಗಡಿಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೯೬೨ (೨೨೫೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ಈ ಜಿಲ್ಲೆಗಳಲ್ಲಿ ಇರುವ ಆಹಾರ ಸಂಗ್ರಹ ಗೋದಾಮುಗಳು ಎಷ್ಟು ;

(ಇ) ಹುಣಸಗಿಯಲ್ಲಿ ಆಹಾರ ಸಂಗ್ರಹ ಗೋದಾಮು ಮಂಜೂರಾಗಿದೆಯೇ, ಇದ್ದರೆ ಯಾವಾಗ ಪ್ರಾರಂಭ ಮಾಡಲಾಗುವುದು ?

## ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಸಕಾಲ ಕೇಂದ್ರಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೧೯೬೩ (೨೨೫೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಸಕಾಲ ಕೇಂದ್ರಗಳು ಸ್ಥಾಪನೆ ಆಗಿವೆಯೇ ;

(ಆ) ಆಗಿದ್ದರೆ, ಇದರಿಂದ ಸಾರ್ವಜನಿಕರಿಗೆ ಅನುಕೂಲವಾಗಿದೆಯೇ ; ಸಕಾಲ ಕೇಂದ್ರಗಳಿಂದ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ?

## ಎಲೆಕ್ಟ್ರಾನಿಕ್ ಬ್ಯಾಟರಿ ಚಾಲಿತ ಸಾರಿಗೆ ವಾಹನಗಳು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-**

೧೯೬೪ (೨೨೬೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಎಲೆಕ್ಟ್ರಾನಿಕ್ ಬ್ಯಾಟರಿ ಚಾಲಿತ ಸಾರಿಗೆ ವಾಹನಗಳನ್ನು ತರುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಇದ್ದರೆ, ಯಾವ ಯಾವ ಸಾಮರ್ಥ್ಯದ ಸಾರಿಗೆ ವಾಹನಗಳನ್ನು ಬಳಕೆಗೆ ಬಿಡಲಾಗುತ್ತದೆ ;

(ಇ) ಇದರ ರೂಪುರೇಷೆಗಳೇನು ?

## ನಕಲಿ ಪಡಿತರ ಚೀಟಿಗಳು.

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-**

೧೯೬೫ (೨೨೫೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ನಕಲಿ ಹಾಗೂ ಅಸಲಿ ಪಡಿತರ ಚೀಟಿಗಳ ಗೊಂದಲದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಗೊಂದಲಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಕಲಿ ಪಡಿತರ ಚೀಟಿಗಳನ್ನು ವಿತರಿಸಿದ ಅಧಿಕಾರಿಗಳು ಹಾಗೂ ನೌಕರರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ದಾಖಲಿಸದಿದ್ದರೆ ಇಂತಹ ಗೊಂದಲಗಳಿಗೆ ಸರ್ಕಾರವೇ ಕಾರಣ ಆಗುವುದಿಲ್ಲವೇ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕುರಿತು.

ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–

೧೯೬೬ (೨೨೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಾರ್ಷಿಕವಾಗಿ ಬರುವ ಅನುದಾನವೆಷ್ಟು ;

(ಆ) ಈ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುವು ;

(ಇ) ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಯಾವ ಕಾಲಮಿತಿ ನೀಡಲಾಗಿದೆ ;

(ಈ) ಈ ಕಾಲಮಿತಿಯೊಳಗೆ ಎಲ್ಲ ಅನುದಾನ ಉಪಯೋಗಿಸಲಾಗಿದೆಯೇ ?

## ಜೈವಿಕ ತಂತ್ರಜ್ಞಾನ ಸಂಸ್ಥೆಗಳು.

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-**

೧೯೬೭ (೨೨೫೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿರುವ ಜೈವಿಕ ತಂತ್ರಜ್ಞಾನ ಸಂಸ್ಥೆಗಳ ಸಂಖ್ಯೆ ಎಷ್ಟು ; (ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ಪಟ್ಟಿ ನೀಡುವುದು)

(ಆ) ಈ ಜೈವಿಕ ತಂತ್ರಜ್ಞಾನ ಸಂಸ್ಥೆಗಳು ತಯಾರಿಸುತ್ತಿರುವ ಉತ್ಪನ್ನಗಳು ಯಾವುವು ;

(ಇ) ಜೈವಿಕ ತಂತ್ರಜ್ಞಾನ ಕಾರ್ಖಾನೆಗಳ ಮೇಲೆ ಸರ್ಕಾರದ ಹಿಡಿತವೇನು ?

## ಹಳೆ ದಾವಣಗೆರೆ ಆಸ್ಪತ್ರೆಯ ವೈದ್ಯರು ಮತ್ತು ನರ್ಸ್, ಸಿಬ್ಬಂದಿಗಳ ಬಗ್ಗೆ.

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ):-**

೧೯೬೮ (೨೧೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಾವಣಗೆರೆ ತಾಲ್ಲೂಕು ಹಾಗೂ ಜಿಲ್ಲೆಯ, ಹಳೆ ದಾವಣಗೆರೆ ನಗರದಲ್ಲಿ ಈಗಾಗಲೇ ಹೆರಿಗೆ ಆಸ್ಪತ್ರೆ ಇದ್ದು, ಇಲ್ಲಿ ವೈದ್ಯರು, ನರ್ಸ್, ಆಯಾ ಹಾಗೂ ಸಿಬ್ಬಂದಿಗಳ ಕೊರತೆ ಮತ್ತು ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ೧೦೦ ಹಾಸಿಗೆಯ ಸುಸಜ್ಜಿತವಾದ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಇದು ಯಾವ ಹಂತದಲ್ಲಿದೆ ;

(ಈ) ಈ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

## ನ್ಯಾಯಬೆಲೆ ಅಂಗಡಿಗಳ ಬಗ್ಗೆ.

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ):-**

೧೯೬೯ (೨೧೩೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ನ್ಯಾಯ ಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನ್ಯಾಯ ಬೆಲೆ ಅಂಗಡಿಯ ಮೇಲೆ ಎಷ್ಟು ದೂರು ಪ್ರಕರಣಗಳು ದಾಖಲಾಗಿವೆ ;

(ಇ) ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ;

(ಈ) ಜಿಲ್ಲೆಯಲ್ಲಿರುವ ಒಟ್ಟು ಬಿ.ಪಿ.ಎಲ್ ಪಡಿತರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ದಾವಣಗೆರೆ ಜಿಲ್ಲಾ ಗ್ರಾಹಕರ ವೇದಿಕೆ ನ್ಯಾಯಾಲಯ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ):-**

೧೯೭೦ (೨೧೩೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಐದು ವರ್ಷಗಳಿಂದ ದಾವಣಗೆರೆ ಜಿಲ್ಲೆಯಿಂದ ಎಷ್ಟು ಗ್ರಾಹಕರು ಗ್ರಾಹಕರ ನ್ಯಾಯಾಲಯದಲ್ಲಿ ದೂರುಗಳನ್ನು ಸಲ್ಲಿಸಿದ್ದಾರೆ ;

(ಆ) ಆ ಪೈಕಿ ಇತ್ಯರ್ಥವಾಗಿರುವ ದೂರುಗಳ ಸಂಖ್ಯೆ ಎಷ್ಟು ;

(ಇ) ಬಾಕಿ ಇರುವ ದೂರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಳೆದ ಐದು ವರ್ಷಗಳಿಂದ ದಂಡ ವಿಧಿಸಿರುವ ಪ್ರಕರಣಗಳಿಂದ ಸರ್ಕಾರಕ್ಕೆ ಬಂದಿರುವ ಮೊತ್ತ ಎಷ್ಟು ?

## ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಪರಿಣಿತರ ಸಮಿತಿ.

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು):-**

೧೯೭೧ (೨೧೬೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ೨೦೧೦ ರಿಂದ ೨೦೧೩ ರವರೆಗೆ ಎಷ್ಟು ತಜ್ಞರು, ಪರಿಣಿತರ ಸಮಿತಿಗಳನ್ನು ಯಾವ ಯಾವ ಕಾರಣಗಳಿಗೆ ನೇಮಕ ಮಾಡಲಾಗಿದೆ ; (ಸಮಿತಿವಾರು

ಸಂಪೂರ್ಣ ವಿವರ, ಸದಸ್ಯರುಗಳ ವಿಳಾಸ ನೀಡುವುದು ಹಾಗೂ ಈ ಸಮಿತಿಗಳ ಸದಸ್ಯರುಗಳಿಗೆ ನೀಡಲಾದ ಸಂಭಾವನೆ, ಸರ್ಕಾರಿ ಸೌಲಭ್ಯಗಳ ಸಂಪೂರ್ಣ ವಿವರ ನೀಡುವುದು)

(ಆ) ಈ ಸಮಿತಿಗಳು ನೇಮಕ ಮಾಡಿದ ಉದ್ದೇಶದ ಬಗ್ಗೆ ವರದಿಗಳನ್ನು ಇಲಾಖೆಗೆ ಸಲ್ಲಿಸಲಾಗಿದೆಯೇ ? (ಸಲ್ಲಿಸಲಾದ ದಿನಾಂಕ ಮತ್ತು ವರದಿಗಳ ಸಂಪೂರ್ಣ ವಿವರ ನೀಡುವುದು)

## ಕ್ಲಿನಿಕಲ್ ಟ್ರಯಲ್ ಬಗ್ಗೆ.

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು):-**

೧೯೭೨ (೨೧೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕ್ಲಿನಿಕಲ್ ಟ್ರಯಲ್ ಬಗ್ಗೆ ಯಾವ ಸಂಸ್ಥೆಯಿಂದ ಅನುಮತಿ ಕೊಡಲಾಗಿದೆ ;

(ಆ) ಈಗಾಗಲೇ ಎಷ್ಟು ಸಂಸ್ಥೆಗಳಿಗೆ ಅನುಮತಿ ಕೊಡಲಾಗಿದೆ ; (ವಿವರ ನೀಡುವುದು)

(ಇ) ಈವರೆಗೆ ಎಷ್ಟು ಟ್ರಯಲ್‌ಗಳು ನಡೆದಿದೆ ; (ಔಷಧಗಳ ವಿವರ, ಟ್ರಯಲ್ ನಡೆಯುತ್ತಿರುವ ಪ್ರದೇಶಗಳ ವಿವರ ನೀಡುವುದು)

(ಈ) ಈ ಟ್ರಯಲ್‌ಗಳ ಪರಿಣಾಮದಿಂದಾಗಿ ಎಷ್ಟು ಜನ ಸಾವನ್ನು ಅಥವಾ ತೊಂದರೆಯನ್ನು ಅನುಭವಿಸಿದ್ದಾರೆ ; (ವಿವರ ನೀಡುವುದು)

(ಉ) ಮೃತರ ಕುಟುಂಬಗಳಿಗೆ ಪರಿಹಾರವಾಗಿ ನೀಡಲಾದ ಮೊತ್ತ ಎಷ್ಟು ?

## ಕೊಪ್ಪಳ ಜಿಲ್ಲೆಯಲ್ಲಿ ನೂತನ ಬಸ್ ನಿಲ್ದಾಣ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೯೭೩ (೨೨೩೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ಕೊಪ್ಪಳ ಜಿಲ್ಲೆಯಲ್ಲಿ ಎಷ್ಟು ನೂತನ ಬಸ್ ನಿಲ್ದಾಣಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಇವುಗಳಲ್ಲಿ ಅಡಿಗಲ್ಲು ಮಾಡಲಾದ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಇ) ಕಾಮಗಾರಿಗಳು ಪ್ರಾರಂಭವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಪ್ರತಿ ಬಸ್ ನಿಲ್ದಾಣಕ್ಕೂ ಸರ್ಕಾರ ಮಂಜೂರು ಮಾಡಲಾದ ಅನುದಾನ ಎಷ್ಟು ;

(ಉ) ಕಾಮಗಾರಿ ಇನ್ನೂ ಪ್ರಾರಂಭಿಸದ ಪ್ರಕರಣಗಳ ಸಂಖ್ಯೆ ಎಷ್ಟು ; ವಿಳಂಬಕ್ಕೆ ಕಾರಣಗಳೇನು ?

## ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳು.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೯೭೪ (೨೨೩೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಪ್ಪಳ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಬರುವ ಎಲ್ಲಾ ನಿಗಮಗಳಲ್ಲಿ ಕಳೆದ ೨೦೧೩-೧೪ರಿಂದ ಪ್ರಸಕ್ತ ಸಾಲಿನವರೆಗೂ ಮಂಜೂರು ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಫಲಾನುಭವಿಗಳನ್ನು ಆಯ್ಕೆ ಮಾಡಿದ ಮೇಲೆ ಎಷ್ಟು ದಿನಗಳಲ್ಲಿ ಕೊಳವೆ ಬಾವಿಯನ್ನು ಕೊರೆಯಿಸಲು ಕ್ರಮ ಕೈಗೊಳ್ಳಲಾಗುವುದು ; ಇದುವರೆವಿಗೂ ಆಯ್ಕೆ ಮಾಡಲಾದ ಎಲ್ಲಾ ಫಲಾನುಭವಿಗಳಿಗೆ ಕೊಳವೆ ಬಾವಿಯನ್ನು ಕೊರೆಯಿಸಲಾಗಿದೆಯೇ ;

(ಇ) ಬಾಕಿ ಇರುವ ಪ್ರಕರಣಗಳ ವಿವರಗಳನ್ನು ಹಾಗೂ ವಿಳಂಬಕ್ಕೆ ಕಾರಣಗಳನ್ನು ನೀಡುವುದು ;

(ಈ) ಸದರಿ ಫಲಾನುಭವಿಗಳಲ್ಲಿ ಮೋಟಾರು ಸಾಮಾಗ್ರಿಗಳನ್ನು ವಿತರಿಸಲಾದ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಇದುವರೆವಿಗೂ ಮೋಟಾರು ಸಾಮಾಗ್ರಿಗಳನ್ನು ವಿತರಿಸದೇ ಇರುವ ಪ್ರಕರಣಗಳು ಇವೆಯೇ ; ಇದ್ದಲ್ಲಿ ವಿವರಗಳನ್ನು ಹಾಗೂ ವಿಳಂಬಕ್ಕೆ ಕಾರಣಗಳನ್ನು ನೀಡುವುದು ;

(ಊ) ವಿದ್ಯುತ್ತಿನ ಸಂಪರ್ಕ ನೀಡಿರುವ ಹಾಗೂ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ವಿಳಂಬಕ್ಕೆ ಕಾರಣಗಳೇನು ?

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಎ.ಪಿ.ಎಲ್. ಕಾರ್ಡ್ ಫಲಾನುಭವಿಗಳು.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೯೭೫ (೨೨೩೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಇದುವರೆವಿಗೂ ಸ್ವೀಕೃತವಾದ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಇವುಗಳಲ್ಲಿ ಕ್ರಮಬದ್ಧವಾದ ಮತ್ತು ವಿತರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ಕಾರ್ಡ್‌ಗಳನ್ನು ವಿತರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಇದುವರೆವಿಗೂ ವಿತರಣೆಯಾದ ಮತ್ತು ವಿತರಣೆಯಾಗದೇ ಇರುವ ಕಾರ್ಡ್‌ಗಳ ಸಂಖ್ಯೆ ಎಷ್ಟು ; ವಿತರಣೆಯಾಗದ ಕಾರ್ಡ್‌ಗಳಲ್ಲಿ ವಿಳಂಬಕ್ಕೆ ಕಾರಣಗಳೇನು ;

(ಉ) ಡೂಪ್ಲಿಕೇಟ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲು ಸರ್ಕಾರ ರೂಪಿಸಿದ ಯೋಜನೆಗಳಾವುವು ; ಇದರಲ್ಲಿ ಎಷ್ಟು ಸಫಲತೆಯನ್ನು ಇಲಾಖೆಯವರು ಸಾಧಿಸಿದ್ದಾರೆ ? (ತಾಲ್ಲೂಕುವಾರು ವಿವರಗಳನ್ನು ನೀಡುವುದು)

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ.03520/ 1200 ಪ್ರತಿಗಳು/20-03-15